ಸಂಪುಟ: 04 ಸಂಚಿಕೆ: 64 ಪುಟಗಳು: 08 ಶನಿವಾರ 18 ಮೇ 2024
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail. com
ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833
₹5

ಮುಂಜಾನೆ ಮಾತು
ಯಾವುದೇ ಫಲಾಪೇಕ್ಷೆಯಿಲ್ಲದೆ ಎಲ್ಲರಿಗೂ ಒಳ್ಳೆಯದನ್ನ ಬಯಸಿ, ಸಾಧ್ಯವಾದಷ್ಟು ಒಳ್ಳೆಯದನ್ನ ಮಾಡಿ. ಏಕೆಂದರೆ ಹೂ ಮಾರುವವರ ಕೈಯಲ್ಲಿ ಯಾವಾಗಲೂ ಹೂವಿನ ಸುವಾಸನೆ ಇರುತ್ತದೆ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

ರೇವಣ್ಣ ವಿರುದ್ಧ ಲೈಂಗಿಕ ದೌರ್ಜನ್ಯ ಕೇಸ್: ಆದೇಶ ಕಾಯ್ದಿರಿಸಿದ ಕೋರ್ಟ್

• ಉದಯವಾಹಿನಿ, ಬೆಂಗಳೂರು

ಹಾಸನ ಜಿಲ್ಲೆಯ ಹೊಳೆನರಸೀಪುರ ತಾಲ್ಲೂಕಿನ ಜೆಡಿಎಸ್ ಶಾಸಕ ಎಚ್.ಡಿ. ರೇವಣ್ಣ ಅವರ ವಿರುದ್ಧದ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ಬೆಂಗಳೂರಿನ 42ನೇ ಎಸಿಎಂಎಂ ನ್ಯಾಯಾಲಯದಲ್ಲಿ ಅರ್ಜಿ ವಿಚಾರಣೆ ನಡೆಸಿದ್ದು, ಇದೀಗ ಮೇ 20ಕ್ಕೆ ಜಾಮೀನು ಅರ್ಜಿ ತೀರ್ಪಿನ ಆದೇಶವನ್ನು ಕಾಯ್ದಿರಿಸಿದೆ. ಎಚ್ ಡಿ ರೇವಣ್ಣ ವಿರುದ್ಧ ಲೈಂಗಿಕ ದೌರ್ಜನ್ಯ ಆರೋಪ ಪ್ರಕರಣಕ್ಕೆ ಸಂಬಂಧಿಸಿದಂತೆ ಇದೀಗ ಮೇ 20ಕ್ಕೆ ಆದೇಶವನ್ನು ಕೋರ್ಟ್ ಕಾಯ್ದಿರಿಸಿದೆ ಎಂದು ಹೇಳಲಾಗಿದೆ. ಅಲ್ಲಿಯವರೆಗೆ ಮಧ್ಯಂತರ ಜಾಮೀನು ಮುಂದುವರಿಯಲಿದೆ.

ವಿಧಾನಸೌಧ ಪ್ರವೇಶಕ್ಕೆ ಬೇಕಾಬಿಟ್ಟಿ ಪಾಸ್‌ಗಳನ್ನು ನೀಡುವುದಿಲ್ಲ

• ಉದಯವಾಹಿನಿ, ಬೆಂಗಳೂರು

ಇನ್ನು ಮುಂದೆ ವಿಧಾನಸೌಧ ಪ್ರವೇಶಕ್ಕೆ ಬೇಕಾಬಿಟ್ಟಿ ಪಾಸ್‌ಗಳನ್ನು ವಿತರಿಸುವುದಿಲ್ಲ ಎಂದು ಗೃಹ ಸಚಿವ ಪರಮೇಶ್ವರ್ ಹೇಳಿದ್ದಾರೆ. ವಿಧಾನಸೌಧ ದ್ವಾರದ ಮೆಟಲ್ ಡಿಟೆಕ್ಟರ್, ನೂತನ ಬ್ಯಾಗೇಜ್‌ಸ್ಕ್ಯಾನರ್ ಯಂತ್ರಗಳನ್ನು ಪರಮೇಶ್ವರ್ ಪರಿಶೀಲಿಸಿದರು. ವಿಧಾನಸೌಧ ಡಿಸಿಪಿ ನೇತೃತ್ವದಲ್ಲಿ ಭದ್ರತಾ ಕ್ರಮಗಳ ಪರಿಶೀಲನೆ ಹಾಗೂ ಮಾಹಿತಿಯನ್ನು ಪರಮೇಶ್ವರ್ ಪಡೆದರು. ನಂತರ ಮಾತನಾಡಿದ ಅವರು, ವಿಧಾನಸೌಧಕ್ಕೆ ಬರಬೇಕು ಅಂದರೆ ಇನ್ನು ಮುಂದೆ ಕ್ಯೂ ಆರ್ ಕೋಡ್ ಇರುವ ಪಾಸ್‌ಗಳನ್ನು ನೀಡಲಾಗುತ್ತದೆ. ವಿಧಾನಸೌಧದಲ್ಲಿ ಯಾರಾದರೂ ಮೆಟಲ್ ಸಾಧನ ತೆಗೆದುಕೊಂಡು ಹೋಗುತ್ತಿದ್ದರೆ ಈ ಬ್ಯಾಗೇಜ್ ಸ್ಕ್ಯಾನರ್‌ನಲ್ಲಿ ಪತ್ತೆಯಾಗುತ್ತದೆ. ಕಳೆದ 3 ವರ್ಷಗಳಿಂದ ಈ ಬ್ಯಾಗೇಜ್ ಸ್ಕ್ಯಾನರ್ ಹಾಳಾಗಿತ್ತು.

ಈಗ ಸಿಎಂ ಹಣ ಬಿಡುಗಡೆ ಮಾಡಿದ ಮೇಲೆ ಈ ಬ್ಯಾಗೇಜ್ ಸ್ಕ್ಯಾನರ್ ಖರೀದಿಸಿದ್ದೇವೆ ಎಂದು ತಿಳಿಸಿದರು. ವಿಧಾನಸೌಧದಲ್ಲಿ ಭದ್ರತೆಯನ್ನು ಇನ್ನೂ ಜಾಸ್ತಿ ಮಾಡುತ್ತೇವೆ. ಈ ಬಾರಿಯ ಅಧಿವೇಶನದಲ್ಲಿ ನಾವು ಹೆಚ್ಚು ಭದ್ರತೆ ಕೈಗೊಳ್ಳುತ್ತೇವೆ. ಕಳೆದ ವಿಧಾನಸಭೆ ಅಧಿವೇಶನ ಸಮಯದಲ್ಲಿ ಬ್ಯಾಗೇಜ್ ಸ್ಕ್ಯಾನರ್‌ಗಳು ಇರಲಿಲ್ಲ. ಈಗ 2-3 ಕೋಟಿ ರೂ. ಖರ್ಚು ಮಾಡಿ ನಾಲ್ಕು ಗೇಟ್‌ಗಳಲ್ಲಿ ಹೊಸ ಬ್ಯಾಗೇಜ್ ಸ್ಕ್ಯಾನರ್ ಅಳವಡಿಸಿದ್ದೇವೆ ಎಂದರು.

ಎಸ್‌ಎಸ್‌ಎಲ್‌ಸಿ ಗ್ರೇಸ್ ಅಂಕ ನೀಡಿದ್ದಕ್ಕೆ ಸಿಎಂ ಗರಂ

• ಉದಯವಾಹಿನಿ, ಬೆಂಗಳೂರು

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಟರ್ನಿಂಗ್ ಲೈಫ್ ಅಂತಾರೆ. ಎಸ್‌ಎಸ್‌ಎಲ್‌ಸಿನಲ್ಲಿ ಚನ್ನಾಗಿ ಅಂಕ ಗಳಿಸಬೇಕು ಅಂತ ವಿದ್ಯಾರ್ಥಿಗಳು ಶ್ರಮದಿಂದ ಓದುತ್ತಾರೆ .. ಆದ್ರೆ ಕೆಲವರಿಗೆ ಅದು ಆಗುವುದಿಲ್ಲ. ಅಂತವರಿಗೆ ಶಿಕ್ಷಣ ಇಲಾಖೆಯಿಂದ ಗ್ರೇಸ್ ಮಾರ್ಕ್ಸ್ ಕೊಟ್ಟು ಪಾಸ್ ಮಾಡ್ತಿದ್ದ. ಇದೀಗ ಆ ಗ್ರೇಸ್ ಮಾರ್ಕ್ಸ್‌ಗೂ ಸರ್ಕಾರ ಕೊಡಲಿ ಹಾಕಿದೆ. ಎಸ್‌ಎಸ್‌ಎಲ್ ಸಿ ಗ್ರೇಸ್ ಮಾರ್ಕ್ಸ್ ನೀಡಿದ್ದಕ್ಕೆ ಸಿಎಂ ಗರಂ ಆಗಿದ್ದಾರೆ. ಇಂದು ವಿಧಾನಸೌದದಲ್ಲಿ ಈ ಬಗ್ಗೆ ಚರ್ಚೆ ಆಗಿದೆ.

ಸಿಎಂ ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಈ ಸಲ ಗ್ರೇಸ್ ಮಾರ್ಕ್ಸ್ ಹೆಚ್ಚಿಸಿದ ವಿಚಾರದ ಬಗ್ಗೆ ಚರ್ಚೆ ಮಾಡಿದ್ದಾರೆ. ಗ್ರೇಸ್ ಮಾರ್ಕ್ಸ್ ಹೆಚ್ಚಳಕ್ಕೆ ಶಿಕ್ಷಣ ತಜ್ಞರು ಸೇರಿ ಹಲವರಿಂದ ವಿರೋಧ ಬಗ್ಗೆ ಚರ್ಚೆ ಆಗಿದೆ. ಶಿಕ್ಷಣ ಇಲಾಖೆಯಿಂದ ಎಸ್‌ಎಸ್‌ಎಲ್‌ಸಿ ಪರೀಕ್ಷೆ-1ರಲ್ಲಿ ವಿದ್ಯಾರ್ಥಿಗಳಿಗೆ 20 ಗ್ರೇಸ್ ಮಾರ್ಕ್ಸ್ ಕೊಡಲಾಗಿತ್ತು. ಈ ಮೂಲಕ ವಿದ್ಯಾರ್ಥಿಗಳನ್ನು ಪಾಸ್ ಮಾಡಲಾಗಿತ್ತು. ಇದಕ್ಕೆ ಆಕ್ಷೇಪ ವ್ಯಕ್ತವಾದ ಹಿನ್ನಲೆಯಲ್ಲಿ ರಾಜ್ಯ ಸರ್ಕಾರವು ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಗ್ರೇಸ್ ಮಾರ್ಕ್ ನಿರ್ಧಾರವನ್ನು ಹಿಂಪಡೆದಿದೆ.

ಇಂಡಿಯಾ ಮೈತ್ರಿಕೂಟಕ್ಕೆ 300, ಎನ್‌ಡಿಎಗೆ ಕೇವಲ 200 ಸ್ಥಾನ

• ಉದಯವಾಹಿನಿ, ಲಖನೌ

ಲೋಕಸಭಾ ಚುನಾವಣೆಯಲ್ಲಿ ಐಎನ್‌ಡಿಐಎ ಮೈತ್ರಿಕೂಟ 300ಕ್ಕೂ ಹೆಚ್ಚು ಸ್ಥಾನಗಳಲ್ಲಿ ಗೆಲುವು ದಾಖಲಿಸಲಿದೆ. ಆದರೆ ಎನ್ ಡಿಎ 200 ಸ್ಥಾನಗಳನ್ನು ಮಾತ್ರ ಗಳಿಸಲಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದ್ದಾರೆ. ಉತ್ತರ ಪ್ರದೇಶದ ಲಖನೌದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಡಿಕೆಶಿ, ಇಂಡಿಯಾ ಮೈತ್ರಿಕೂಟವು 300 ಸ್ಥಾನಗಳನ್ನು ಗೆದ್ದೇ ಗೆಲ್ಲುತ್ತದೆ. ಎನ್ ಡಿಎ 200 ರ ಆಸುಪಾಸಿನಲ್ಲಿರುತ್ತದೆ. ಇದರಲ್ಲಿ ಯಾವುದೇ ಅನುಮಾನ ಬೇಡ ಎಂದರು. ನಾವು ಸಾಮೂಹಿಕ ನಾಯಕತ್ವವನ್ನು ನಂಬುತ್ತೇವೆ. ನಾವು ಚುನಾವಣೆಯಲ್ಲಿ ಗೆಲ್ಲುತ್ತೇವೆ. ಫಲಿತಾಂಶದ ಬಳಿಕ ಸರ್ಕಾರ ರಚಿಸುವುದು ಹಾಗೂ ಪ್ರಧಾನಿ ಆಯ್ಕೆಗೆ ಒಟ್ಟಾಗಿ ಚರ್ಚಿಸಿ ನಿರ್ಧಾರ ತೆಗೆದುಕೊಳ್ಳುತ್ತೇವೆ ಎಂದು ಹೇಳಿದರು.



ರಾಜ್ಯದ ಕಾಂಗ್ರೇಸ್ ಸರ್ಕಾರ ಈ ತಿಂಗಳ 28ಕ್ಕೆ ಒಂದು ವರ್ಷ ಪೂರೈಸುತ್ತಿರುವ ಹಿನ್ನೆಲೆಯಲ್ಲಿ ಒಂದು ವರ್ಷದಲ್ಲಿ ಆಗಿರುವ ಸಾಧನೆಗಳು, ಗ್ಯಾರಂಟಿ ಯೋಜನೆಗಳ ಸಮರ್ಪಕ ಜಾರಿ, ಎಲ್ಲದರ ಬಗ್ಗೆಯೂ ಅಧಿಕಾರಿಗಳು ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದರು. ಒಂದು ವರ್ಷದಲ್ಲಿ ರಾಜ್ಯ ಸರ್ಕಾರದ ಸಾಧನೆಗಳ ಪಟ್ಟಿಯನ್ನು ಅಧಿಕಾರಿಗಳು ಮುಖ್ಯಮಂತ್ರಿಗಳ ಮುಂದಿಟ್ಟು ಸರ್ಕಾರದ ಕಾರ್ಯಕ್ರಮ ಜಾರಿಯ ಪ್ರಗತಿಯ ಬಗ್ಗೆ ಅಂಕಿ-ಅಂಶಗಳ ಸಮೇತ ವಿವರಗಳನ್ನು ನೀಡಿದರು ಎಂದು ಸರ್ಕಾರದ ಮೂಲಗಳು ಹೇಳಿವೆ.

■ ಮಳೆಗಾಲದ ಸಿದ್ಧತೆ ■ ಸಿಎಂಗೆ ಆಡಳಿತಾತ್ಮಕ ಮಾಹಿತಿ ■ ರೈತರಿಗೆ ತೊಂದರೆಯಾಗದಂತೆ ಅಗತ್ಯ ಕ್ರಮ

ಸಿದ್ದು ಸರ್ಕಾರ ನಿರೀಕ್ಷೆಗಳು ಅಪಾರ

• ಉದಯವಾಹಿನಿ, ಬೆಂಗಳೂರು

ಬರದಿಂದ ಸಂಕಷ್ಟದಲ್ಲಿರುವ ರೈತರಿಗೆ ಬರಪರಿಹಾರ ವಿತರಣೆ ಕುಡಿಯುವ ನೀರಿಗೆ ಯಾವುದೇ ತೊಂದರೆಯಾಗದಂತೆ, ಮುಂಬರುವ ಮುಂಗಾರು ಹಂಗಾಮಿನಲ್ಲಿ ರೈತರಿಗೆ ರಸಗೊಬ್ಬರ ಬಿತ್ತನೆ ಬೀಜ ಕೊರತೆಯಾಗದಂತೆ ನೋಡಿಕೊಳ್ಳಲು ಕೈಗೊಂಡಿರುವ ಸಿದ್ಧತೆಗಳೂ ಸೇರಿ ಹಲವು ಅವಶ್ಯ ಆಡಳಿತ ವಿಚಾರಗಳ ಬಗ್ಗೆ ಹಿರಿಯ ಅಧಿಕಾರಿಗಳು ಸಿಎಂ ಸಿದ್ದರಾಮಯ್ಯ ಅವರಿಗೆ ಮಾಹಿತಿ ನೀಡಿದರು. ರಾಜ್ಯದಲ್ಲಿ ಚುನಾವಣಾ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಮುಖ್ಯ ಮಂತ್ರಿಗಳು, ಅಧಿಕಾರಿಗಳ ಸಭೆ ನಡೆಸುವಂತಿಲ್ಲ. ಕಾರಣದಿಂದಾಗಿ ಅಧಿಕಾರಿಗಳೇ ರಾಜ್ಯದಲ್ಲಿ ಬರ ನಿರ್ವಹಣೆ, ಬರ ಪರಿಹಾರ ವಿತರಣೆ, ಕುಡಿಯುವ ನೀರು ಒದಗಿಸಲು ಕಾರ್ಯಕ್ರಮ ಕೈಗೊಂಡಿರುವ ಕ್ರಮಗಳು ಸೇರಿ ಆಡಳಿತಾತ್ಮಕ ವಿಚಾರಗಳ ಬಗ್ಗೆ ವಿವರಗಳನ್ನು ಮುಖ್ಯಮಂತ್ರಿಗಳಿಗೆ ನೀಡಿದರು. ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿಂದು ಮುಖ್ಯ ಕಾರ್ಯದರ್ಶಿ ರಜನೀಶ್‌ಗೋಯಲ್ ಸೇರಿದಂತೆ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ತಮ್ಮ ಇಲಾಖೆಗಳ ಆಡಳಿತಾತ್ಮಕ ವಿಚಾರಗಳು ಸರ್ಕಾರದ ಕಾರ್ಯಕ್ರಮಗಳ ಜಾರಿಯ ಪ್ರಗತಿ ಎಲ್ಲದರ ಬಗ್ಗೆಯೂ ವಿವರಗಳನ್ನು ಒದಗಿಸಿದರು ಎಂದು ಮೂಲಗಳು ಹೇಳಿವೆ.

ಬಿತ್ತನೆ ಬೀಜ, ರಸಗೊಬ್ಬರ ದಾಸ್ತಾನು: ಮುಂದಿನ ಮುಂಗಾರು ಹಂಗಾಮಿಗೆ 53,500 ಕ್ವಿಂಟಾಲ್ ಬಿತ್ತನೆ ಬೀಜ ಅಗತ್ಯವಿದೆ. ಎಲ್ಲಾ ಜಿಲ್ಲೆಗಳಲ್ಲೂ ಬೀಜ ದಾಸ್ತಾನಿದೆ. 26 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರ ಅಗತ್ಯವಿದ್ದು, 15 ಲಕ್ಷ ಟನ್ ಲಭ್ಯವಿದೆ. ಬಿತ್ತನೆ ಬೀಜ ಗೊಬ್ಬರಕ್ಕೆ ರಾಜ್ಯದಲ್ಲಿ ಯಾವುದೇ ತೊಂದರೆ ಇಲ್ಲ ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದ್ದಾರೆ. ಬರ ಪರಿಹಾರ ವಿತರಣೆ ರಾಜ್ಯದಲ್ಲಿ 33.50 ಲಕ್ಷ ರೈತರಿಗೆ ಬೆಳೆಹಾನಿ ಪರಿಹಾರ ನೀಡಲಾಗಿದೆ. 20.13 ಲಕ್ಷ ರೈತ ಕುಟುಂಬಗಳಿಗೆ ತಲಾ 2,400 ರೂ.ಗಳಂತೆ 476.40 ಕೋಟಿ ರೂ.ಗಳನ್ನು ಜೀವನೋಪಾಯ ನಷ್ಟಕ್ಕೆ ನೀಡಲಾಗುತ್ತಿದೆ ಎಂಬ ಮಾಹಿತಿಯನ್ನು ಅಧಿಕಾರಿಗಳು ನೀಡಿದರು. ರಾಜ್ಯದಲ್ಲಿ ಮುಂಗಾರು ಪೂರ್ವ ಮಳೆ ಆರಂಭವಾಗಿ ಜೂನ್‌ನಿಂದ ಮುಂಗಾರು ಮಳೆ ರಾಜ್ಯ ಪ್ರವೇಶಿಸಲಿದೆ.

ಈ ಬಾರಿ ಒಳ್ಳೆ ಮಳೆಯಾಗಲಿದೆ ಎಂಬ ಹವಾಮಾನ ಇಲಾಖೆಯ ವರದಿ ಆಧರಿಸಿ ಮುಂಗಾರು ಹಂಗಾಮಿನಲ್ಲಿ ರೈತರಿಗೆ ರಸಗೊಬ್ಬರ ಬಿತ್ತನೆ ಬೀಜ ಕೊರತೆಯಾಗದಂತೆ ನೋಡಿಕೊಂಡು ಕೃಷಿ ಚಟುವಟಿಕೆಗಳು ಸಮರ್ಪಕವಾಗಿ ನಡೆ ಯುವಂತಾಗಲು ಏನೆಲ್ಲ ಕ್ರಮಗಳನ್ನು ಸರ್ಕಾರದ ಮಟ್ಟದಲ್ಲಿ ಕೈಗೊಳ್ಳಬೇಕೋ ಕ್ರಮ ಗಳನ್ನು ಕೈಗೊಳ್ಳುತ್ತಿರುವ ಬಗ್ಗೆಯೂ ಅಧಿಕಾರಿಗಳು ಸಿಎಂಗೆ ಮಾಹಿತಿ ನೀಡಿದರು.

ಒಂದು ವರ್ಷ ಸಾಧನೆ

ಬೀಜ ಬಿತ್ತನೆಮಾಡಿ ಚಿಗುರದೆ ಒಣಗಿ ಹೋಗಿರುವ ಪ್ರಕರಣಗಳಲ್ಲಿ ಬೆಳೆಹಾನಿ ಪರಿಹಾರ ನೀಡಲು ಎನ್‌ಡಿಆರ್‌ಎಫ್ ಮಾರ್ಗಸೂಚಿ ಬದಲಾವಣೆ ಮಾಡುವ ಬಗ್ಗೆ ಕೇಂದ್ರಕ್ಕೆ ಕ್ರಮ ಕೈಗೊಳ್ಳಬಹುದಾಗಿದೆ ಎಂದು ಅಧಿಕಾರಿಗಳು ತಿಳಿಸಿದರು ಎನ್ನಲಾಗಿದೆ. ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಅನುದಾನ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ನಿಧಿಯ ಕ್ರಿಯಾಯೋಜನೆಗಳನ್ನು ಜೂನ್ ತಿಂಗಳಿನಲ್ಲಿಯೇ ಅನುಮೋದನೆ ಪಡೆದುಕೊಂಡು ಅನುಷ್ಠಾನ ಮಾಡಲು ಕ್ರಮವಹಿಸಲಾಗುವುದು ಎಂದು ಮಾಹಿತಿ ನೀಡಿದ್ದಾರೆ ಎನ್ನಲಾಗಿದೆ. ರಾಜ್ಯದಲ್ಲಿ 2022-23ನೇ ಹಣಕಾಸು ವರ್ಷಕ್ಕಿಂತ 2023-24ರಲ್ಲಿ ಶೇ. 3ರಷ್ಟು ವೆಚ್ಚ ಹೆಚ್ಚಾಗಿದೆ ಎಂದು ಮಾಹಿತಿಯನ್ನು ಸಭೆಯಲ್ಲಿ ನೀಡಲಾಗಿದೆ.

ಸಹಾಯಧನ ಘೋಷಿಸಿ

ಕಳೆದ ವರ್ಷ ಹಿಂಗಾರು, ಮುಂಗಾರು ಎರಡೂ ಕೈ ಕೊಟ್ಟಿದ್ದರಿಂದ ಈ ವರ್ಷ ರೈತರ ಬಳಿ ಬಿತ್ತನೆ ಬೀಜ, ರಸಗೊಬ್ಬರ ಕೊಳ್ಳಲು, ಉಳುಮೆ ಮಾಡಲೂ ಸಹ ಹಣವಿಲ್ಲದ ಪರಿಸ್ಥಿತಿ ಇದೆ. ಆದ್ದರಿಂದ ಈ ಕೂಡಲೇ ಎಕರೆಗೆ 5,000 ರೂ. ನಂತೆ ರೈತರಿಗೆ ವಿಶೇಷ ಸಹಾಯಧನ ಘೋಷಣೆ ಮಾಡಬೇಕು. ರೈತರ ಸಮಸ್ಯೆಗಳಿಗೆ ಸ್ಪಂದಿಸಿ ನಾಡಿನ ಕೃಷಿ ಚಟುವಟಿಕೆಯನ್ನು ಉಳಿಸಬೇಕು ಎಂದು ಆರ್.ಅಶೋಕ್ ಆಗ್ರಹಿಸಿದ್ದಾರೆ.

- ಪಿಂಚಣಿ, ನರೇಗಾ ಹಣ ಸಾಲ ಮರುಪಾವತಿಗೆ ಹೊಂದಿಸದಂತೆ ಕೈ ಸರ್ಕಾರ ಆದೇಶ ನೀಡಲಿ ಅಶೋಕ್ ಆಗ್ರಹ
- ಜನ ಸ್ಪಂದನದಲ್ಲಿ ಬಂದ ಅರ್ಜಿಗಳ ಬಗ್ಗೆ ಮಾಹಿತಿ ಪಡೆದ ಸಿಎಂ
- ಇಲಾಖೆಯ ಖಾತೆಯಲ್ಲಿ ಹಣ ಇದ್ದರೂ ಯಾಕೆ ಖರ್ಚು ಮಾಡಿಲ್ಲ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಸಿಎಂ ಸಿದ್ದರಾಮಯ್ಯ
- ಕೆಲವು ಇಲಾಖೆಗಳ ಖಾತೆಯಲ್ಲಿ ಹಣ ಇದ್ದರೂ ಯಾಕೆ ಖರ್ಚು ಮಾಡಿಲ್ಲ.
- ಮುಖ್ಯಮಂತ್ರಿ ಸಿದ್ದರಾಮಯ್ಯ ಅಧಿಕಾರಿಗಳನ್ನು ತರಾಟೆಗೆ ತೆಗದುಕೊಂಡರು.

ರೈತ ವಿರೋಧಿ, ಕಣ್ಣು, ಕಿವಿ, ಹೃದಯ ಇಲ್ಲದ ಕಾಂಗ್ರೇಸ್ ಸರ್ಕಾರ ನರೇಗಾ ಹಣ, ಪಿಂಚಣಿ ಹಣವನ್ನೂ ರೈತರ ಸಾಲಕ್ಕೆ ಜಮೆ ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರು ಕೂಡಲೇ ರೈತರ ಹಣವನ್ನು ಸಾಲಕ್ಕೆ ಜಮೆ ಮಾಡಿಕೊಳ್ಳದಂತೆ ಬ್ಯಾಂಕ್‌ಗಳಿಗೆ ಸೂಚಿಸಲು ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಲಿ. ಬ್ಯಾಂಕ್‌ಗಳು ಒಪ್ಪದಿದ್ದರೆ ರೈತರ ಸಾಲ ಮನ್ನಾ ಮಾಡಲಿ

-ಆರ್. ಅಶೋಕ್, ಪ್ರತಿಪಕ್ಷ ನಾಯಕ

ಹೊಸ ಯೋಜನೆಗಳಿಗೆ ಆದೇಶ ಶೀಘ್ರ

ಬಜೆಟ್‌ನಲ್ಲಿ ಘೋಷಣೆಯಾಗಿರುವ ಯೋಜನೆಗಳಿಗೆ ಸರ್ಕಾರಿ ಆದೇಶ ಶೀಘ್ರ ಹೊರಬೀಳಬೇಕು. ಈ ವರ್ಷ 501 ಹೊಸ ಘೋಷಣೆಗಳಿದ್ದು, 403 ಘೋಷಣೆಗಳಿಗೆ ಸರ್ಕಾರಿ ಆದೇಶ ಹೊರಡಿಸಬೇಕಿದೆ. 27 ಘೋಷಣೆಗಳು ಪಿಪಿಪಿ ಮಾದರಿಯಲ್ಲಿದ್ದು, ಪ್ರಸ್ತಾವನೆಗಳು ಬರಬೇಕಿದೆ. ಇವುಗಳನ್ನು ಶೀಘ್ರವಾಗಿ ಕ್ರಮವಹಿಸುವ ಅಗತ್ಯವಿದೆ ಎಂಬ ವಿಚಾರ ಮುಖ್ಯಮಂತ್ರಿ ಮತ್ತು ಅಧಿಕಾರಿಗಳ ಅನೌಪಚಾರಿಕ ಸಭೆಯಲ್ಲಿ ವ್ಯಕ್ತವಾಗಿದೆ ಎಂದು ಸರ್ಕಾರದ ಮೂಲಗಳು ಹೇಳಿವೆ. ಜೂನ್ ತಿಂಗಳ ಒಳಗೆ ಟೆಂಡರ್‌ಗಳನ್ನು ಕರೆಯದಿದ್ದರೆ ಅಧಿಕಾರಿಗಳನ್ನು ಹೊಣೆ ಮಾಡಲಾಗುವುದು ಎಂಬ ಮುಖ್ಯಮಂತ್ರಿಗಳ ಅಭಿಪ್ರಾಯಕ್ಕೆ ಪೂರಕವಾಗಿ ಸಂಬಂಧಪಟ್ಟ ಅಧಿಕಾರಿಗಳ ಸಭೆ ನಡೆಸಿ ಕ್ರಮಕೈಗೊಳ್ಳಬೇಕು ಎಲ್ಲಕ್ಕೂ ಸರ್ಕಾರಿ ಆದೇಶ ಹೊರಡಿಸಲಾಗುವುದು ಎಂದು ಅಧಿಕಾರಿಗಳು ಸಭೆಯಲ್ಲಿ ಮಾಹಿತಿ ನೀಡಿದರು ಎನ್ನಲಾಗಿದೆ. ಬಳಕೆ ಪ್ರಮಾಣಪತ್ರ ಕೇಂದ್ರ ಸರ್ಕಾರಕ್ಕೆ ಸಕಾಲದಲ್ಲಿ ಕಳುಹಿಸದಿದ್ದರೆ ಕೇಂದ್ರ ಪುರಸ್ಕೃತ ಯೋಜನೆಗಳಿಗೆ ಮುಂದಿನ ಕಂತು ಬಿಡುಗಡೆಯಾಗುವುದಿಲ್ಲ ಚು. ಆಯೋಗದಿಂದ ಟೆಂಡರ್ ಕರೆಯಲು ಅನುಮತಿ ನೀಡಲಾಗಿದ್ದು, ಟೆಂಡರ್ ತೆರೆಯಲು ತೊಂದರೆ ಇಲ್ಲ ಶೀಘ್ರ ಟೆಂಡರ್ ಕರೆಯುವ ಮಾಹಿತಿಯನ್ನು ಅಧಿಕಾರಿಗಳು ಮುಖ್ಯಮಂತ್ರಿಗಳಿಗೆ ನೀಡಿದರು ಎಂದು ಗೊತ್ತಾಗಿದೆ.

ಸಿಇಟಿ ವ್ಯವಸ್ಥೆ ಹಾಳು ಮಾಡಿದ ಕೀರ್ತಿ ಕೈ ಸರ್ಕಾರದ್ದು

• ಉದಯವಾಹಿನಿ, ಬೆಂಗಳೂರು

ಸಿಇಟಿ ಪರೀಕ್ಷೆಯ ವ್ಯವಸ್ಥೆಯನ್ನು ಹಾಳು ಮಾಡಿದ್ದೆ ಕಾಂಗ್ರೇಸ್ ಹಾಗಾಗಿ, ಇದೀಗ ರಾಜ್ಯ ಸರ್ಕಾರ ವಿದ್ಯಾರ್ಥಿಗಳ ಭವಿಷ್ಯದ ಜೊತೆಗೆ ಚೆಲ್ಲಾಟ ಆಡಿದೆ ಎಂದು ಬಿಜೆಪಿ ಶಾಸಕ ಸುರೇಶ್ ಕುಮಾರ್ ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.ಬೆಂಗಳೂರಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರಕ್ಕೆ ವಾರ್ಷಿಕೋತ್ಸವ ಮಾಡಲು ಸಾಧ್ಯವಾಗುತ್ತಿಲ್ಲ. ವೈಜ್ಞಾನಿಕವಾಗಿ ರೂಪಗೊಂಡ ಎನ್ ಇಪಿಗೆ ತಿಲಾಂಜಲಿ ಕೊಟ್ಟಿದೆ. ಎಸ್‌ಇಪಿ ತರುತ್ತೇನೆ ಎಂದು ಹೇಳಿ ಇದುವರೆಗೂ ಯಾವುದೇ ಕ್ರಮ ತೆಗೆದು ಕೊಂಡಿಲ್ಲ. ರಾಜ್ಯದಲ್ಲಿ ಪೂರ್ಣಾವಧಿ ಶಿಕ್ಷಣ ಮಂತ್ರಿ ಇಲ್ಲ.ಪಾಪ ತಮ್ಮ ಕುಟುಂಬದ ಯಾರನ್ನು ಗೆಲ್ಲಿಸಲು ಓಡಾಡುತ್ತಿದ್ದಾರೆ ಎಂದು ಸಚಿವ ಮಧು ಬಂಗಾರಪ್ಪ ವಿರುದ್ಧ ವಾಗ್ದಾಳಿ ನಡೆಸಿದರು.

ಪಠ್ಯಕ್ಕೆ ಸಂಬಂಧಿಸದ ವಿಷಯಗಳೇ ಪರೀಕ್ಷೆಯಲ್

ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ

ಪರಿಹಾರವೇನು?

ಶೋಕಿ ಜೀವನಕ್ಕಾಗಿ ಬಾಡಿಗೆದಾರೆ ಕೋಲಾರದ ಮೋನಿಕಾ ಮನೆ ಮಾಲಕಿ ದಿವ್ಯಾಳನ್ನು ಕೊಂದಳು. ಟಿಕೆಟ್ ಕೇಳಿದ್ದಕ್ಕಾಗಿ ರೇಲ್ವೆ ಪ್ರಯಾಣಿಕನೊಬ್ಬ ರೇಲ್ವೆಸಿಬ್ಬಂದಿ ದೇವರ್ಷಿ ವರ್ಮಾ ನನ್ನು ಇರಿದು ಕೊಂದು ಪರಾರಿಯಾದ. ಸಿದ್ಧಾರೂಢ ಮಿಷನ್ ನ ಸಂತ ಸಮ್ಮೇಳನದ ಸಂತರ ಪಾದಕಾಣಿಕೆಗಾಗಿ ಇರಿಸಿದ ಹಣದ ಕೈಚೀಲವನ್ನೇ ಎಗರಿಸಲಾಯಿತು. ಇಂಥ ಪ್ರಕರಣಗಳು ಸಾಮಾಜಿಕ ಮೌಲ್ಯಗಳ ದಿವಾಳಿತನಕ್ಕೆ ಸಾಕ್ಷಿ. ಇಂಥ ಘಟನೆಗಳಿಂದ ಕೃತ್ಯ ಎಸಗಿದವರು ತಾತ್ಕಾಲಿಕ ಪ್ರಯೋಜನ ಪಡೆಯಬಹುದಾದರೂ ದೀರ್ಘಾವಧಿಯಲ್ಲಿ ಬಹು ನಷ್ಟಕ್ಕೆ ತುತ್ತಾಗುವರು, ಸಾಮಾಜಿಕ ಮುಖ್ಯ ವಾಹಿನಿಯಿಂದ ದೂರ ಉಳಿಯುವರು, ಗೌರವದಿಂದ ವಂಚಿತರಾಗುವರು. ಆಂತರ್ಯದಲ್ಲಿ ಕಸಿವಿಸಿ ಮನೆಮಾಡಿ ಬೇಯುವರು. ಇಂಥ ಘಟನೆಗಳು ಸರಿದಾರಿಯಲ್ಲಿ ನಡೆಯುವವರಿಗೆ ಅಡ್ಡಿಯುಂಟು ಮಾಡುವವು, ಎದೆಗುಂದಿಸುವವು, ಕಾರ್ಯವಿಮುಖಗೊಳಿಸುವವು. ಹೀಗಾದಲ್ಲಿ ಸಮಾಜದಲ್ಲಿ ಆದರ್ಶಗಳ ಕೊರತೆಯಾಗಿ ದುಷ್ಕೃತ್ಯಗಳು ಹೆಚ್ಚುವವು. ಇವನ್ನು ಬೆಳೆಗೊಟ್ಟರೆ ತಮಗೇ ಕುತ್ತು. ಮಕ್ಕಳು ತಂದೆ ತಾಯಿಗಳನ್ನು, ತಂದೆ ತಾಯಿಗಳು ಮಕ್ಕಳನ್ನು ಕೊಲ್ಲುವುದು ನಿದರ್ಶನ. ತಂದೆ ತಾಯಿ ಗುರು ಹಿರಿಯರು ಮಕ್ಕಳಿಗೆ ಕರುಣೆ ತೋರದೇ ಉತ್ತಮ ಸಂಸ್ಕಾರ ಕಲಿಸಲೇಬೇಕು. ಅಗೋಚರ ದೈವೀ ಶಕ್ತಿಗೆ ಗುರು ಹಿರಿಯರಿಗೆ ತಲೆ ಬಾಗಿ ಬಾಗಿಸಿ.

ಎನ್‌ಇಪಿಗೆ ತಿಲಾಂಜಲಿಯೇ ಕಾಂಗ್ರೇಸ್ ಸರ್ಕಾರದ ಸಾಧನೆ

■ ಇರುವುದು ಒಂದು ಸಾಧನೆ ಎಂದು ಶಾಸಕ ಎಸ್.ಸುರೇಶ್ ಕುಮಾರ್ ಶ್ಲಾಘನೆ ■ ಜಗನ್ನಾಥ ಭವನದಲ್ಲಿ ಪತ್ರಿಕಾಗೋಷ್ಠಿ

• ಉದಯವಾಹಿನಿ, ಬೆಂಗಳೂರು

ಅತ್ಯಂತ ವೈಜ್ಞಾನಿಕವಾಗಿ ರೂಪುಗೊಂಡ ರಾಷ್ಟ್ರೀಯ ಶಿಕ್ಷಣ ನೀತಿಗೆ (ಎನ್‌ಇಪಿ) ರಾಜಕೀಯ ಮೇಲಾಟದ ಕಾರಣ ತಿಲಾಂಜಲಿ ಕೊಟ್ಟು, ರಾಜ್ಯ ಶಿಕ್ಷಣ ನೀತಿ ಜಾರಿಗೊಳಿಸುವುದಾಗಿ ತಿಳಿಸಿದ ಈ ರಾಜ್ಯ ಸರಕಾರ ಇವತ್ತಿನವರೆಗೂ ಯಾವುದೇ ಪ್ರಗತಿಯನ್ನು ಮಾಡದೆ ಇರುವುದು ಒಂದು ಸಾಧನೆ ಎಂದು ಶಾಸಕ ಎಸ್.ಸುರೇಶ್ ಕುಮಾರ್ ಅವರು ವಿಶ್ಲೇಷಿಸಿದರು.

ಶಾಸಕ ಎಸ್. ಸುರೇಶ್ ಕುಮಾರ್ ವಾಗ್ದಾಳಿ

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಜ್ಯದ ಕಾಂಗ್ರೇಸ್ ಸರಕಾರವು ಕಳೆದ ಒಂದು ವರ್ಷದ ಅವಧಿಯಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ನೀಡಿದ ಕೊಡುಗೆಗಳನ್ನು ಮುಂದಿಡುವುದಾಗಿ ತಿಳಿಸಿದರು.

ಈ ಸರಕಾರವು ವಿಶೇಷವಾಗಿ ಪದವಿ ತರಗತಿಗಳಲ್ಲಿ, ಕಾಲೇಜಿನಲ್ಲಿ ಓದುತ್ತಿರುವ ವಿದ್ಯಾರ್ಥಿಗಳ ಜೊತೆ ಚೆಲ್ಲಾಟ ಆಡುತ್ತಿದೆ ಎಂದು ಆಕ್ಷೇಪಿಸಿದರು. ಪ್ರಾಥಮಿಕ, ಪ್ರೌಢ ಶಾಲಾ ವಿದ್ಯಾರ್ಥಿಗಳ ಭವಿಷ್ಯವನ್ನೇ ಮಸಕು ಮಾಡುತ್ತಿದೆ ಈ ಸರಕಾರ ಎಂದು ಟೀಕಿಸಿದ ಅವರು, ನಮ್ಮಲ್ಲಿ ಸಿಬಿಎಸ್‌ಇ, ಐಸಿಎಸ್‌ಇ ಸೇರಿದಂತೆ ಕೇಂದ್ರ ಪಠ್ಯಕ್ರಮದ ಶಾಲೆಗಳು, ಜೊತೆಗೆ ಸ್ವಾಯತ್ತ ವಿಶ್ವವಿದ್ಯಾಲಯಗಳು ಇವೆ. ಆ ವಿದ್ಯಾರ್ಥಿಗಳಿಗೆ ಒಂದು ನೀತಿಯಾದರೆ, ಸರಕಾರಿ ಶಾಲೆಗೆ ಇನ್ನೊಂದು ನೀತಿ ಎಂದು ಆರೋಪಿಸಿದರು. ಇದು ಇಬ್ಬಗೆಯ ನೀತಿ ಎಂದರು.

ನಮ್ಮ ಸರಕಾರಿ ಶಾಲೆಯ ಮಕ್ಕಳಿಗೆ ಕೌಶಲ್ಯವನ್ನು ಯಾರು ಕಲಿಸುತ್ತಾರೆ? ಇವರು ಒಂದು ಶಿಕ್ಷಣ ನೀತಿ ಸಮಿತಿ ರಚಿಸಿದ್ದರು. ಆ ಸಮಿತಿಯನ್ನು ಸಮರ್ಥವಾಗಿ ಮುನ್ನಡೆಸಲೂ ಈ ರಾಜ್ಯ ಸರಕಾರಕ್ಕೆ ಆಗುತ್ತಿಲ್ಲ. ರಾಜ್ಯ ಸರಕಾರದಲ್ಲಿ ಪೂರ್ಣಾವಧಿ ಶಿಕ್ಷಣ ಸಚಿವರೇ ಇಲ್ಲದಿರುವುದೇ ಇದಕ್ಕೆ ಕಾರಣ ಎಂದು ಎಸ್. ಸುರೇಶ್ ಕುಮಾರ್ ಅವರು ತಿಳಿಸಿದರು.

ಪೂರ್ಣಾವಧಿ ಶಿಕ್ಷಣ ಸಚಿವರ ಅಗತ್ಯವಿದ್ದು, ಅದನ್ನು ಮನಗಾಣದ ಸರಕಾರ ಇದೆ. ಆದ್ದರಿಂದ ವಿದ್ಯಾರ್ಥಿಗಳ ಜೀವನದ ಜೊತೆ ಚೆಲ್ಲಾಟ, ಅವರ ಭವಿಷ್ಯವನ್ನೇ ಹಾಳು ಮಾಡುವ ಕೆಲಸವನ್ನು ರಾಜ್ಯ ಸರಕಾರ ಮಾಡಿದ್ದೇ ದೊಡ್ಡ ಕೊಡುಗೆ ಎಂದು ದೂರಿದರು. 5, 8, 9ನೇ ತರಗತಿಗಳ ಮೌಲ್ಯಮಾಪನ, ಬೋರ್ಡ್ ಎಕ್ಸಾಮ್ ಮಾಡು ವುದಾಗಿ ಸರಕಾರ ಹೊರಟಿದೆ. ಮಕ್ಕಳು, ಪೋಷಕರು, ಶಾಲಾ ಮುಖ್ಯಸ್ಥರ ಜೊತೆ ಸಂವಾದ ಮಾಡಿ ಉದ್ದೇಶ ಸ್ಪಷ್ಟಗೊಳಿಸದೇ ನ್ಯಾಯಾಲಯದ ವರೆಗೆ ಹೋಗಿತ್ತು. ನ್ಯಾಯಾಲಯದ ತಡೆಯಾಜ್ಞೆ, ಅದರ ತೆರವು, ಪರೀಕ್ಷೆ ದಿನ ಪ್ರಕಟಿಸುವುದು- ಹೀಗೆ ನಡೆದು ಈಗ ಫಲಿತಾಂಶ ಪ್ರಕಟಿಸಿಲ್ಲ. ಎಳೆ ಮಕ್ಕಳ ಮನಸ್ಥಿತಿ, ಪೋಷಕರ ಆತಂಕವನ್ನು ಗಣನೆಗೇ ತೆಗೆದುಕೊಂಡಿಲ್ಲ.



ಶೈಕ್ಷಣಿಕ ವರ್ಷಾರಂಭಕ್ಕೂ ಮೊದಲೇ ಶಾಲೆ ಪ್ರಾರಂಭ

ಲಿಸ್ಟ್ ಬಿಡುಗಡೆಗೆ ಡಿಡಿಪಿಐಗಳಿಗೆ ಸೂಚಿಸಿ ಮೂರ್ನಾಲ್ಕು ತಿಂಗಳಾಗಿದೆ. ಆದರೆ, ಆ ಕೆಲಸ ಆಗಿಲ್ಲ. ಇದು ಮಕ್ಕಳ ಹಕ್ಕುಗಳ ಕುರಿತ ತಿರಸ್ಕಾರವನ್ನು ಸೂಚಿಸುತ್ತದೆ ಎಂದು ನುಡಿದರು. ಇನ್ನೂ ಕೆಲವು ಶಾಲೆಗಳು ಶೈಕ್ಷಣಿಕ ವರ್ಷಾರಂಭಕ್ಕೂ ಮೊದಲೇ ಶಾಲೆ ಪ್ರಾರಂಭಿಸಿವೆ. ಶುಲ್ಕಕ್ಕಾಗಿ ಈ ಕ್ರಮ ಕೈಗೊಂಡಿದ್ದು, ಇದರ ಕುರಿತು ಗಮನ ಸೆಳೆದರೂ ಪ್ರಯೋಜನವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

> ಎಸ್ಸೆಸ್ಸೆಲ್ಸಿ ಪರೀಕ್ಷೆ ಯಾವ ರೀತಿ ಮಾಡಬಾರದು ಎಂಬುದಕ್ಕೆ ಮೊನ್ನೆ ನಡೆದ ಪರೀಕ್ಷೆ ಒಳ್ಳೆಯ ಉದಾಹರಣೆ. 3 ಪರೀಕ್ಷೆ ಮಾಡಿ ಮಕ್ಕಳ ಗಾಂಭೀರ್ಯ ಹಾಳು ಮಾಡಿದ್ದಾರೆ. ಆತಂಕ ಹೆಚ್ಚಿಸಿದ್ದಾರೆ. ಮಕ್ಕಳು ಕ್ಯಾಮೆರಾ ಮುಂದೆ ಕುಳಿತು ಬರೆಯುವ ವ್ಯವಸ್ಥೆ ತಂದಿದ್ದಾರೆ. ಇದು ಬೇಸರದ ವಿಷಯ. ಫಲಿತಾಂಶ ಶೇ 30 ಕಡಿಮೆ ಆದಾಗ 1.79 ಲಕ್ಷ ಮಕ್ಕಳಿಗೆ ಕೃಪಾಂಕ ಕೊಟ್ಟು ಪಾಸ್ ಮಾಡಿಸಿ, ಅವರದಲ್ಲದ ತಪ್ಪಿಗೆ ಎಸ್ಸೆಸ್ಸೆಲ್ಸಿ ಪರೀಕ್ಷೆಯನ್ನು ಅತ್ಯಂತ ಕೆಟ್ಟ ರೀತಿಯಲ್ಲಿ ನಡೆಸಿ ಮಕ್ಕಳನ್ನು ಸಂಕಷ್ಟಕ್ಕೆ ದೂಡಿದ ಖ್ಯಾತಿ ಈ ಸರಕಾರದ್ದು ಎಂದು ಅವರು ವಿವರಿಸಿದರು.
>
> ಎಸ್. ಸುರೇಶ್ ಕುಮಾರ್

ಈ ಮಕ್ಕಳಿಗೆ ಮತ ಇಲ್ಲದ ಕಾರಣ ಹೀಗೆ ಮಾಡುತ್ತಿದ್ದಾರೆ. ವಿದ್ಯಾರ್ಥಿಗಳ ಜೊತೆ ಚೆಲ್ಲಾಟ, ಅವರ ಜೀವನವನ್ನು ಅಂಧಕಾರಕ್ಕೆ ಒಯ್ಯುತ್ತಿದ್ದಾರೆ. ವಿದ್ಯಾರ್ಥಿ ಜೀವನ ಮಸಕು ಮಾಡುವುದೂ ಒಂದು ಗ್ಯಾರಂಟಿ ಎಂದು ಈ ಸರಕಾರ ಭಾವಿಸಿದೆ ಎಂದು ಟೀಕಿಸಿದರು.

ಗಾಯನ - ವ್ಯಾಖ್ಯಾನ

• ಉದಯವಾಹಿನಿ, ಬೆಂಗಳೂರು

ಶೂನ್ಯಾ ಸೆಂಟರ್ ಫಾರ್ ಆರ್ಟ್ಸ್9 ವತಿಯಿಂದ ಮೇ 19, ಭಾನುವಾರ ಸಂಜೆ 6-30ಕ್ಕೆ ಲಾಲ್ ಬಾಗ್ ರಸ್ತೆಯಲ್ಲಿರುವ ಶೂನ್ಯಾ ಸೆಂಟರ್ ಫಾರ್ ಆರ್ಟ್ಸ್9ನ ಸಭಾಂಗಣದಲ್ಲಿ ಚಿತ್ತ : ಪರಿಶೋಧನೆ ಶೀರ್ಷಿಕೆಯಲ್ಲಿ ವಿಶೇಷ ಕಾರ್ಯಕ್ರಮ ಏರ್ಪಡಿಸಿದ್ದು, ಇದರಲ್ಲಿ ಅನ್ನಮಾಚಾರ್ಯರ, ಕಬೀರದಾಸರ, ವಿಜಯದಾಸರ ಹಾಗೂ ಇನ್ನಿತರ ಕವಿವರ್ಯರ ಕೃತಿಗಳ ಗಾಯನ ಮತ್ತು ವ್ಯಾಖ್ಯಾನವನ್ನು ವಿದುಷಿ ಶ್ರೀಮತಿ ಮಾನಸಿ ಪ್ರಸಾದ್ ಅವರು ನಡೆಸಿಕೊಡಲಿದ್ದಾರೆ. ಇವರ ಗಾಯನಕ್ಕೆ ಶಡ್ರಾಕ್ ಸೊಲೊಮನ್ ಅವರು ಪಿಯಾನೋ ವಾದನದಲ್ಲಿ ಸಾಥ್ ನೀಡಲಿದ್ದಾರೆ ಎಂದು ಸಂಸ್ಥೆಯ ಪದಾಧಿಕಾರಿಗಳು ತಿಳಿಸಿದ್ದಾರೆ.

ಬೆಸ್ಕಾಂ ಎಂಜಿನಿಯರ್ ವಿರುದ್ಧದ ಆಸ್ತಿಗಳಿಕೆ ಪ್ರಕರಣ ರದ್ದುಗೊಳಿಸಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ (ಬೆಸ್ಕಾಂ) ಎಂಜಿನಿಯರ್ ವಿರುದ್ಧ ಆದಾಯಕ್ಕಿಂತ ಹೆಚ್ಚಿನ ಆಸ್ತಿ ಸಂಪಾದಿಸಿದ ಆರೋಪದ ಮೇಲೆ ದಾಖಲಿಸಲಾಗಿದ್ದ ಅಕ್ರಮ ಆಸ್ತಿ ಗಳಿಕೆ ಪ್ರಕರಣವನ್ನು ಹೈಕೋರ್ಟ್ ರದ್ದುಗೊಳಿಸಿದೆ. ಪ್ರಕರಣವನ್ನು ದಾಖಲಿಸುವಾಗ ಕಾರ್ಯವಿಧಾನದ ದೋಷಗಳನ್ನು ನ್ಯಾಯಾಲಯ ಗಮನಿಸಿದೆ. ಎಂಜಿನಿಯರ್ ಸಲ್ಲಿಸಿದ್ದ ಮೇಲ್ಮನವಿಯ ಆಧಾರದ ಮೇಲೆ ನ್ಯಾಯಮೂರ್ತಿ ಕೆ ನಟರಾಜನ್ ಅವರ ಏಕಸದಸ್ಯ ಪೀಠವು ಏಪ್ರಿಲ್ 25 ರಂದು ಈ ಆದೇಶವನ್ನು ಹೊರಡಿಸಿದೆ. 1998 ರಿಂದ 2023 ರವರೆಗೆ ಬೆಸ್ಕಾಂನಲ್ಲಿ ಕೆಲಸ ಮಾಡಿದ ಎಂಜಿನಿಯರ್ 664,67,000 ರೂ.ಗಳ ಆಸ್ತಿಯನ್ನು ಹೊಂದಿದ್ದಾರೆ ಎಂದು ಪೊಲೀಸರು ಆರೋಪಿಸಿದ್ದಾರೆ. ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸುವ ಮೊದಲು ಪೊಲೀಸರು ಯಾವುದೇ ಪ್ರಾಥಮಿಕ ವಿಚಾರಣೆ ನಡೆಸಿಲ್ಲ ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ. ಲೋಕಾಯುಕ್ತ ಪೊಲೀಸರು ಭ್ರಷ್ಟಾಚಾರ ತಡೆ ಕಾಯ್ದೆಯ ಸೆಕ್ಷನ್ 17ರ ಅಡಿಯಲ್ಲಿ ಪ್ರಥಮ ಮಾಹಿತಿ ವರದಿ (ಎಫ್‌ಐಆರ್) ದಾಖಲಿಸಿದ್ದಾರೆ. ಕಾಯ್ದೆಯಡಿ ಈ ಬಗ್ಗೆ ತನಿಖೆ ನಡೆಸಲು ಅಗತ್ಯವಾದ ಆದೇಶವನ್ನು ಹೊರಡಿಸಲಾಗಿಲ್ಲ ಎಂದು ಎಂಜಿನಿಯರ್ ಪರ ವಕೀಲರು ವಾದಿಸಿದರು. ವಕೀಲರು ಇನ್ಸ್ಪೆಕ್ಟೋದ ಅಧಿಕಾರಿ ಎಂದು ಗಮನಸೆಳೆದರು

ಹಾಸ್ಟೇಲ್‌ನಲ್ಲಿ ಇಂಜಿನಿಯರಿಂಗ್ ವಿದ್ಯಾರ್ಥಿನಿ ಅನುಮಾನಾಸ್ಪದ ಸಾವು

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಮತ್ತೋರ್ವ ವಿದ್ಯಾರ್ಥಿನಿ ಅನುಮಾ ನಾಸ್ಪದವಾಗಿ ಸಾವನ್ನಪ್ಪಿರುವ ಘಟನೆ ಚಂದಾಪುರದ ಇಂಜಿನಿಯರಿಂಗ್ ಟೆಕ್ನಾಲಜಿ ಕಾಲೇಜಿನ ಹಾಸ್ಟೇಲ್ ನಲ್ಲಿ ನಡೆದಿದೆ. ಇಂಜಿನಿಯರಿಂಗ್ ವಿದ್ಯಾರ್ಥಿನಿ ಹರ್ಷಿತಾ ತನ್ನ ಹಾಸ್ಟೇಲ್ ರೂಮಿನಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾಳೆ. ಹಾಸನ ಜಿಲ್ಲೆ ಅರಸೀಕೆರೆ ತಾಲ್ಲೂಕಿನ ಕರಡಿಹಳ್ಳಿ ನಿವಾಸಿಯಾಗಿರುವ ಹರ್ಷಿತಾ ಬೆಂಗಳೂರಿನಲ್ಲಿ ಇಂಜಿನಿಯರಿಂಗ್ ಓದುತ್ತಿದ್ದಳು. ಇದೀಗ ಇದ್ದಕ್ಕಿದ್ದಂತೆ ಹಾಸ್ಟೇಲ್‌ನಲ್ಲಿ ನೇಣಿಗೆ ಕೊರಳೊಡ್ಡಿದ್ದಾಳೆ.

ವಿದ್ಯಾರ್ಥಿನಿ ಸಾವು ಖಂಡಿಸಿ ವಿದ್ಯಾರ್ಥಿಗಳು ಕಾಲೇಜು ಆಡಳಿತ ಮಂಡಳಿ ವಿರುದ್ಧ ಪ್ರತಿಭಟನೆ ನಡೆಸಿ, ಆಕ್ರೋಶ ವ್ಯಕ್ತಪಡಿಸಿದ್ದಾರೆ. ಹಾಸ್ಟೇಲ್ ನಲ್ಲಿ ಸರಿಯಾದ ವ್ಯವಸ್ಥೆ ಇಲ್ಲ, ವಾರ್ಡನ್ ಕೂಡ ಇಲ್ಲ, ಹಾಸ್ಟೇಲ್ ಹಾಗೂ ಕಾಲೇಜಿನಲ್ಲಿರುವ ಒಂದೇ ಒಂದು ಸಿಸಿಟಿವಿ ಕ್ಯಾಮರಾ ಕಾರ್ಯನಿರ್ವಹಿಸುತ್ತಿಲ್ಲ. ವಿದ್ಯಾರ್ಥಿಗಳಿಗೆ ಸಮಸ್ಯೆಯಾದರೂ ಯಾರೂ ಸ್ಪಂದಿಸುತ್ತಿಲ್ಲ. ಕಾಲೇಜು ಆಡಳಿತ ಮಂಡಳಿಯ ಕಿರುಕುಳಕ್ಕೆ ಹರ್ಷಿತಾ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ ಎಂದು ವಿದ್ಯಾರ್ಥಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇಂಜಿನಿಯರಿಂಗ್ ಕಾಲೇಜು ಆವರಣದಲ್ಲಿ ಪರಿಸ್ಥಿತಿ ಉದ್ವಿಗ್ನಗೊಂಡಿದೆ.

ಮಂತ್ರಿ ಮಾಲ್ ಬೀಗ ತೆರೆಯುವಂತೆ ಬಿಬಿಎಂಪಿಗೆ ಕೋರ್ಟ್ ಸೂಚನೆ

• ಉದಯವಾಹಿನಿ, ಬೆಂಗಳೂರು

ಒಂದು ವಾರದ ಬಳಿಕ ಬೆಂಗಳೂರಿನ ಪ್ರತಿಷ್ಠಿತ ಮಂತ್ರಿ ಮಾಲ್ ಮತ್ತೆ ಓಪನ್ ಆಗಿದೆ. ಮಂತ್ರಿ ಮಾಲ್ ಬೀಗ ತೆರೆಯುವಂತೆ ಕೋರ್ಟ್ ಬಿಬಿಎಂಪಿಗೆ ಸೂಚನೆ ನೀಡಿದ ಹಿನ್ನೆಲೆಯಲ್ಲಿ ಬೀಗ ತೆರೆಯಲಾಗಿದ್ದು, ಇಂದಿನಿಂದ ಮಾಲ್ ಪುನರಾರಂಭವಾಗಿದೆ. ಮಂತ್ರಿ ಮಾಲ್ 41 ಕೋಟಿ ರೂಪಾಯಿ ತೆರಿಗೆ ಬಾಕಿ ಉಳಿಸಿಕೊಂಡಿದ್ದ ಹಿನ್ನೆಲೆಯಲ್ಲಿ ಹಲವು ಬಾರಿ ಬಿಬಿಎಂಪಿ ತೆರಿಗೆ ಅಧಿಕಾರಿಗಳು ನೋಟೀಸ್ ನೀಡಿದ್ದರೂ ಯಾವುದೇ ಪ್ರತಿಕ್ರಿಯೆ ನೀಡಿರಲಿಲ್ಲ. ಈ ಹಿನ್ನೆಲೆಯಲ್ಲಿ ಕೆಲ ದಿನಗಳ ಹಿಂದೆ ಬಿಬಿಎಂಪಿ ಅಧಿಕಾರಿಗಳು ಮಂತ್ರಿ ಮಾಲ್‌ಗೆ ಬೀಗ ಜಡಿದು ತೆರಳಿದ್ದರು. ಇದೀಗ ಮಂತ್ರಿ ಮಾಲ್, 41 ಕೋಟಿ ತೆರಿಗೆ ಪೈಕಿ 21 ಕೋಟಿ ತೆರಿಗೆ ಹಣವನ್ನು ಜುಲೈ 31ರೊಳಗೆ ಪಾವತಿಸುವುದಾಗಿ ಕೋರ್ಟ್ ಗೆ ಮುಚ್ಚಳಿಕೆ ನೀಡಿದೆ. ಈ ಹಿನ್ನೆಲೆಯಲ್ಲಿ ಕೋರ್ಟ್ , ಮಾಲ್ ಬೀಗ ತೆರೆಯುವಂತೆ ಪಾಲಿಕೆಗೆ ಸೂಚಿಸಿದೆ. ಅಲ್ಲದೇ ಮಂತ್ರಿ ಮಾಲ್‌ನಲ್ಲಿ 250ಕ್ಕೂ ಹೆಚ್ಚು ಮಳಿಗೆಗಳಿದ್ದು, ಅವರಿಗೆ ನಷ್ಟವುಂಟಾಗುತ್ತದೆ. ಹಲವು ಸಿಬ್ಬಂದಿಗಳು ಸಂಕಷ್ಟಕ್ಕೆ ಸಿಲುಕಿತ್ತಾರೆ. ಈ ಹಿನ್ನೆಲೆಯಲ್ಲಿ ಮಾಲ್ ಬೀಗ ತೆರೆಯಲು ಕೋರ್ಟ್ ಸೂಚಿಸಿದೆ.

ಎಸ್‌ಎಸ್‌ಎಲ್‌ಸಿ ಗ್ರೇಸ್ ಮಾರ್ಕ್ಸ್‌ರದ್ದತಿಗೆ ಸಿಎಂ ಆದೇಶ

• ಉದಯವಾಹಿನಿ, ಬೆಂಗಳೂರು

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ನೀಡುತ್ತಿರುವಂತ ಗ್ರೇಸ್ ಮಾರ್ಕ್ ಅನ್ನು ಮುಂದಿನ ಶೈಕ್ಷಣಿಕ ವರ್ಷದಿಂದ ರದ್ದು ಮಾಡುವಂತೆ ಸಿಎಂ ಸಿದ್ಧರಾಮಯ್ಯ ಅವರು ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇಂದು ವಿಧಾನಸೌಧದಲ್ಲಿ ಸಿಎಂ ಸಿದ್ಧರಾಮಯ್ಯ, ಡಿಸಿಎಂ ಡಿ.ಕೆ ಶಿವಕುಮಾರ್ ನೇತೃತ್ವದಲ್ಲಿ ಶಿಕ್ಷಣ ಇಲಾಖೆಯ ಅಧಿಕಾರಿಗಳ ಜೊತೆಗೆ ಮಹತ್ವದ ಸಭೆ ನಡೆಯಿತು. ಈ ಸಭೆಯಲ್ಲಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ 20 ಗ್ರೇಸ್ ಮಾರ್ಕ್ಸ್ ನೀಡಿದ್ದರ ಬಗ್ಗೆ ಆಕ್ಷೇಪ ವ್ಯಕ್ತವಾಗಿರುವ ಬಗ್ಗೆ ಚರ್ಚೆ ನಡೆಯಿತು. ಈ ಸಭೆಯಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಯಾವ ಕಾರಣ ಮತ್ತು ಉದ್ದೇಶದಿಂದ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ 20 ಗ್ರೇಸ್ ಮಾರ್ಕ್ಸ್ ನೀಡಿದ್ದೀರಿ? ಗ್ರೇಸ್ ಮಾರ್ಕ್ಸ್ ನೀಡಲು ಯಾರು ಹೇಳಿದ್ದು ಎಂಬುದಾಗಿ ಶಿಕ್ಷಣ ಇಲಾಖೆಯ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ಡಿಸಿಎಂ ಮಾತಿಗೆ ಸಿಎಂ ಸಿದ್ಧರಾಮಯ್ಯ ಕೂಡ ಸಹಮತ ವ್ಯಕ್ತಪಡಿಸಿದರು. ವಿದ್ಯಾರ್ಥಿಗಳು ಅವರ ಅರ್ಹತೆ ಆಧಾರದಲ್ಲಿ ಪ್ರಗತಿ ಸಾಧಿಸಬೇಕು. ಗ್ರೇಸ್ ಮಾರ್ಕ್ಸ್ ನೀಡಿದರೇ ಸ್ಪರ್ಧಾ ಸಾಮರ್ಥ್ಯ ಕಡಿಮೆ ಆಗಲಿದೆ. ಕಡಿಮೆ ಅಂಕ ಪಡೆದರೇ ವಿದ್ಯಾರ್ಥಿ ಅಸಮರ್ಥತೆ ಪ್ರಶ್ನೆಯೇ ಎಂದು ಕೇಳಿದರು. ಇದೇ ಸಂದರ್ಭದಲ್ಲಿ ತಾವು ಎಸ್ ಎಸ್‌ಎಲ್‌ಸಿಯಲ್ಲಿ ಪಡೆದಂತ ಅಂಕದ ಬಗ್ಗೆ ಪ್ರಸ್ತಾಪಿಸಿದಂತ ಡಿಸಿಎಂ ಡಿ.ಕೆ ಶಿವಕುಮಾರ್, ನಾನು ಎಸ್‌ಎಸ್‌ಎಲ್‌ಸಿಯಲ್ಲಿ 400 ಅಂಕ ಪಡೆದಿದ್ದೇನೆ. ಹಾಗಾದ್ರೆ ಅಸಮರ್ಥ ಅಂತೀರಾ ಎಂದರು.

> ಡಿಸಿಎಂ ಮಾತಿಗೆ ಉತ್ತರಿಸಿದಂತ ಶಿಕ್ಷಣ ಇಲಾಖೆಯ ಅಧಿಕಾರಿಗಳು ಕೋವಿಡ್ ಸಂದರ್ಭದಲ್ಲಿ 5 ರಿಂದ 10 ಗ್ರೇಸ್ ಮಾರ್ಕ್ಸ್ ಕೊಡುತ್ತಿದ್ದವೆ ಎಂದರು. ಆಗ ಸಿಎಂ ಸಿದ್ಧರಾಮಯ್ಯ ಮುಂದಿನ ವರ್ಷದಿಂದ ಎಸ್ ಎಸ್ ಎಲ್ ಸಿ ವಿದ್ಯಾರ್ಥಿಗಳಿಗೆ ನೀಡುತ್ತಿರುವಂತ ಗ್ರೇಸ್ ಮಾರ್ಕ್ಸ್‌ರದ್ದು ಮಾಡುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಆದೇಶಿಸಿದರು.

ಅಂಜಲಿ ಹಂತಕ ಗಿರೀಶ್ ವಿರುದ್ಧ ಮತ್ತೊಂದು ಎಫ್‌ಐಆರ್ ದಾಖಲು

• ಉದಯವಾಹಿನಿ, ಬೆಂಗಳೂರು

ಉದಯವಾಹಿನಿ ಚಿತ್ರ

ಹುಬ್ಬಳ್ಳಿಯ ಅಂಜಲಿ ಅಂಬಿಗೇರ್ ಹತ್ಯೆ ಪ್ರಕರಣದ ಆರೋಪಿ ಗಿರೀಶ್ ವಿರುದ್ಧ ಮಹಿಳೆಯೊಬ್ಬರು ಮತ್ತೊಂದು ಎಫ್ ಐಆರ್ ದಾಖಲಾಗಿದೆ.

ವಿಶ್ವಮಾನವ ಎಕ್ಸ್‌ಪ್ರೆಸ್

ಮುಂಗಾರು ಶೀಘ್ರ: ಮುನ್ನೆಚ್ಚರಕ್ಕೆ ಜಿಲ್ಲಾಧಿಕಾರಿ ಸೂಚನೆ

■ ಜಿಲ್ಲಾಧಿಕಾರಿ ವೆಂಕಟ್ ರಾಜಾ ಸೂಚನೆ ■ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆ

• ಉದಯವಾಹಿನಿ, ಮಡಿಕೇರಿ

ಕೊಡಗು ಜಿಲ್ಲೆಯನ್ನು ಜೂನ್ ಮೊದಲ ವಾರದಲ್ಲೇ ಮುಂಗಾರು ಮಾರುತಗಳು ಪ್ರವೇಶಿಸುವ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಕೂಡಲೇ ಎಚ್ಚೆತ್ತುಕೊಂಡು ಎಲ್ಲ ಬಗೆಯ ಮುನ್ನಚ್ಚರಿಕಾ ಕ್ರಮಗಳನ್ನೂ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ಸೂಚಿಸಿದರು.

ಇಲ್ಲಿನ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ' ಸಭೆಯಲ್ಲಿ ಅವರು ಮಾತನಾಡಿದರು. ಕಂದಾಯ, ಸೆಸ್ಕ್, ಅರಣ್ಯ, ಲೋಕೋಪಯೋಗಿ, ಗ್ರಾಮೀಣ ಕುಡಿಯುವ ನೀರು ಮತ್ತು ಸರಬರಾಜು ಇಲಾಖೆಗಳ ನಡುವೆ ಸಮನ್ವಯ ಮುಖ್ಯವಾಗಿದೆ. ಎಲ್ಲ ಇಲಾಖೆಯವರೂ ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಅವರು ನಿರ್ದೇಶನ ನೀಡಿದರು.

ಹವಾಮಾನ ಇಲಾಖೆ ಜಿಲ್ಲೆಯಲ್ಲಿ ವಾಡಿಕೆ ಮಳೆಯಾಗುವ ನಿರೀಕ್ಷೆ ಇದೆ ಎಂದು ಹೇಳಿದೆ. ಹಾಗೆಂದು ಮೈಮರೆಯಬಾರದು. ಒಂದು ವೇಳೆ ಹೆಚ್ಚಿನ ಮಳೆಯಾದರೆ ಯಾವುದೇ ಬಗೆಯ ಪರಿಸ್ಥಿತಿಯನ್ನು ಎದುರಿಸಲು ಸನ್ನದ್ಧರಾಗಿರಬೇಕು ಎಂದು ಸಲಹೆ ನೀಡಿದರು. ಈಗಾಗಲೇ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದ್ದು, ತಹಶೀಲ್ದಾರರು, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಇತರ ಅಧಿಕಾರಿಗಳು ಜಂಟಿಯಾಗಿ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದರು. ಶಾಲಾ-ಕಾಲೇಜುಗಳು, ಅಂಗನವಾಡಿ ಕಟ್ಟಡಗಳ ಸುಸ್ಥಿತಿ ಬಗ್ಗೆ ಗಮನ ಹರಿಸಬೇಕು. ಅಗತ್ಯವಿದ್ದಲ್ಲಿ ಪರಿಹಾರ, ಕಾಳಜಿ ಕೇಂದ್ರಗಳನ್ನು ತೆರೆಯುವುದು ಮತ್ತಿತರ ಕೆಲಸವನ್ನು ನಿರ್ವಹಿಸುವಂತೆಯೂ ಅವರು ಹೇಳಿದರು. ಕೃಷಿಗೆ ಸಂಬಂಧಿಸಿದಂತೆ ಜಿಲ್ಲೆಗೆ ಬೇಕಿರುವ ಬಿತ್ತನೆ ಬೀಜ ಹಾಗೂ ರಸಗೊಬ್ಬರ ದಾಸ್ತಾನು ಮಾಡಿಕೊಳ್ಳಬೇಕು.


ಉದಯವಾಹಿನಿ ಚಿತ್ರ

ಸಮನ್ವಯದಿಂದ ಕಾರ್ಯನಿರ್ವಹಿಸಿ

ಮಡಿಕೇರಿಯಲ್ಲಿ ಗುರುವಾರ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಸಭೆಯಲ್ಲಿ ಭಾಗವಹಿಸಿದ್ದ ಅಧಿಕಾರಿಗಳು ಜೂನ್ ಮೊದಲ ವಾರದಲ್ಲೇ ಮುಂಗಾರು ಪ್ರಸಕ್ತ ಸಾಲಿನಲ್ಲಿ ವಾಡಿಕೆ ಮಳೆ ನಿರೀಕ್ಷೆ ಹಲವು ಅಧಿಕಾರಿಗಳು ಸಭೆಯಲ್ಲಿ ಭಾಗಿ

ಕೃಷಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಗಮನಹರಿಸಬೇಕು ಎಂದು ಅವರು ಸೂಚಿಸಿದರು. ಅಗ್ನಿಶಾಮಕ ದಳ ತುರ್ತು ಪರಿಸ್ಥಿತಿಯಲ್ಲಿ ಕಾರ್ಯನಿರ್ವಹಿಸಲು ಅಗತ್ಯ ಸುರಕ್ಷಾ ಉಪಕರಣಗಳೊಂದಿಗೆ ಸನ್ನದ್ಧವಾಗಿರಬೇಕು. ಗೃಹರಕ್ಷಕ ದಳ ಸಿಬ್ಬಂದಿ ಸಹ ತುರ್ತು ಸೇವೆಗೆ ಲಭ್ಯವಿರುವಂತೆ ಕ್ರಮ ಕೈಗೊಳ್ಳಬೇಕು ಎಂದರು. ವಿದ್ಯುತ್ ವ್ಯತ್ಯಯ ಉಂಟಾದಲ್ಲಿ ಸರಿಪಡಿಸಬೇಕು. ವಿದ್ಯುತ್ ತಂತಿಗಳು ಜೋತು ಬಿದ್ದಿರುವುದು ಕಂಡುಬಂದಲ್ಲಿ ಕೂಡಲೇ ಸರಿಪಡಿಸಿ, ವಿದ್ಯುತ್ ತಂತಿಯಿಂದ ಯಾವುದೇ ಜೀವಹಾನಿಯಾಗದಂತೆ ಎಚ್ಚರವಹಿಸಬೇಕು ಎಂದು ಸೆಸ್ಕ್ ಅಧಿಕಾರಿಗಳಿಗೆ ಅವರು ಸೂಚಿಸಿದರು.

ಮುನ್ನೆಚ್ಚರಿಕೆ ವಹಿಸಿ

ಸೆಸ್ಕ್ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ವಿನಯ್‌ಕುಮಾರ್ ಮಾತನಾಡಿ, 'ಈಗಾಗಲೇ ಜಿಲ್ಲೆಯಲ್ಲಿ 75 ಮಂದಿ ಗ್ಯಾಂಗ್‌ಮನ್‌ಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಹಾಗೆಯೇ, ವಿದ್ಯುತ್ ಕಂಬಗಳು ಮತ್ತು ಪರಿವರ್ತಕಗಳನ್ನು ದಾಸ್ತಾನು ಮಾಡಿಕೊಳ್ಳಲಾಗಿದೆ' ಎಂದು ಮಾಹಿತಿ ನೀಡಿದರು.

ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಎನ್.ವೀಣಾ, ಉಪ ವಿಭಾಗಾಧಿಕಾರಿ ವಿನಾಯಕ ನರ್ವಾಡೆ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಸೋಮಸುಂದರ, ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಎಂಜಿನಿಯರ್ ಸಿದ್ದೇಗೌಡ, ಪಶುಪಾಲನಾ ಇಲಾಖೆ ಉಪನಿರ್ದೇಶಕರಾದ ಲಿಂಗರಾಜು ದೊಡ್ಡಮನಿ, ಭಾಗವಹಿಸಿದ್ದರು.

ಗ್ರಾಮ ಪಂಚಾಯಿತಿ ಮತ್ತು ತಾಲ್ಲೂಕು ಮಟ್ಟದಲ್ಲಿ ಕಾರ್ಯಪಡೆ ಸಮಿತಿ ಸಭೆ ನಡೆಸುವುದು, ಸೂಕ್ಷ್ಮ ಪ್ರದೇಶದಲ್ಲಿನ ಜನರನ್ನು ಬೇರೆಡೆಗೆ ಸ್ಥಳಾಂತರಿಸಲು ಕ್ರಮ ಕೈಗೊಳ್ಳಬೇಕೆಂದು ಸಂಬಂಧಪಟ್ಟ ನೋಡಲ್ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಮಾತನಾಡಿ, 'ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಪ್ರವಾಹ ಹಾಗೂ ಭೂಕುಸಿತ ಉಂಟಾಗುವ ಪ್ರದೇಶಗಳಲ್ಲಿ ಹೆಚ್ಚಿನ ಮುನ್ನೆಚ್ಚರ ವಹಿಸಬೇಕಿದೆ. ಆ ನಿಟ್ಟಿನಲ್ಲಿ ಸ್ಥಳೀಯ ಅಧಿಕಾರಿಗಳು ಸಾರ್ವಜನಿಕರಿಗೆ ಕಾಲ ಕಾಲಕ್ಕೆ ಮಾಹಿತಿ ನೀಡಬೇಕು' ಎಂದರು.

ಪದವೀಧರ ಕ್ಷೇತ್ರದ ಚುನಾವಣೆ - ಮತದಾನ ಕೇಂದ್ರ ಸ್ಥಾಪನೆ

• ಉದಯವಾಹಿನಿ, ರಾಮನಗರ,

ಬೆಂಗಳೂರು ಪದವೀಧರರ ಕ್ಷೇತ್ರದಿಂದ ಕರ್ನಾಟಕ ವಿಧಾನ ಪರಿಷತ್ತಿಗೆ ನಡೆಯುತ್ತಿರುವ ಚುನಾವಣೆಗೆ ಸಂಬಂಧಿಸಿದಂತೆ ವೇಳಾಪಟ್ಟಿಯನ್ನು ನಿಗದಿಪಡಿಸಲಾಗಿರುತ್ತದೆ.

ಅದರಂತೆ ಮತದಾನ ಕೇಂದ್ರಗಳ ಪಟ್ಟಿಯನ್ನು ಬಿಡುಗಡೆಗೊಳಿಸಿದ್ದು, ರಾಮನಗರ ಜಿಲ್ಲೆಯ ಮತದಾನ ಕೇಂದ್ರವನ್ನು ಮಾಗಡಿ ತಾಲ್ಲೂಕಿನ ಕುದೂರು ಹೋಬಳಿಯ ಕುದೂರು ಗ್ರಾಮ ಪಂಚಾಯಿತಿ ಕಚೇರಿ, ತಿಪ್ಪಸಂದ್ರ ಹೋಬಳಿಯ ಗ್ರಾಮ ಪಂಚಾಯಿತಿ ಕಚೇರಿ, ಸೋಲೂರು ಹೋಬಳಿಯ ಗ್ರಾಮ ಪಂಚಾಯಿತಿ ಕಚೇರಿ, ಮಾಗಡಿ ತಾಲ್ಲೂಕಿನ ತಹಶೀಲ್ದಾರರ ಕಚೇರಿಯ ಕೋರ್ಟ್ ಹಾಲ್‌ನ ಕೊಠಡಿ ಸಂಖ್ಯೆ 1 ಹಾಗೂ ತಹಶೀಲ್ದಾರ್ ಗ್ರೇಡ್ 1 ಕಚೇರಿಯ ಕೊಠಡಿ ಸಂಖ್ಯೆ 2, ಮಾಗಡಿ ತಾಲ್ಲೂಕಿನ ತಹಶೀಲ್ದಾರರ ಕಚೇರಿಯ ಆಡಳಿತಾಧಿಕಾರಿ ಕಚೇರಿಯ ಕೊಠಡಿ ಸಂಖ್ಯೆ 3, ರಾಮನಗರ ತಾಲ್ಲೂಕಿನ ಬಿ.ಎಂ. ರಸ್ತೆಯ ತಾಲ್ಲೂಕು ಆಡಳಿತ ಸೌಧದ ತಹಶೀಲ್ದಾರರ ಕಚೇರಿಯ ಕೊಠಡಿ ಸಂಖ್ಯೆ 1, 2, 3 ಹಾಗೂ 4, ಕೈಲಾಂಚ ಹೋಬಳಿಯ ಕೈಲಾಂಚ ಗ್ರಾಮದ ಜಿಎಚ್‌ಪಿಎಸ್ ಶಾಲೆಯ ಕೊಠಡಿ ಸಂಖ್ಯೆ 2, ಕೂಟಗಲ್ ಹೋಬಳಿಯ ಕೂಟಗಲ್ ಗ್ರಾಮದ ಜಿಎಚ್‌ಪಿಎಸ್ ಶಾಲೆಯ ಕೊಠಡಿ ಸಂಖ್ಯೆ 2, ಬಿಡದಿ ಟೌನಿನ ಮುನಿಸಿಪಾಲ್ ಸೆಂಟರ್‌ನ ಜಿಎಚ್‌ಪಿಎಸ್‌ನ ಕೊಠಡಿ ಸಂಖ್ಯೆ 1 ಹಾಗೂ 2, ಚನ್ನಪಟ್ಟಣ ತಾಲ್ಲೂಕು ಆಡಳಿತ ಸೌಧದ ತಹಶೀಲ್ದಾರ್ ಕಚೇರಿಯ ಕೊಠಡಿ ಸಂಖ್ಯೆ 1 ಹಾಗೂ 2, ಚನ್ನಪಟ್ಟಣ ತಾಲ್ಲೂಕು ಪಂಚಾಯತ್ ಕಚೇರಿ, ಚನ್ನಪಟ್ಟಣ ತಾಲ್ಲೂಕಿನ ಸಮರ್ಥ್ಯ ಸೌಧದ ಟ್ರೈನಿಂಗ್ ಸೆಂಟರ್, ದೊಡ್ಡ ಮಳೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಕೊಠಡಿ ಸಂಖ್ಯೆ 1 ಹಾಗೂ 2, ಕೋಡಂಬಳ್ಳಿ ಗ್ರಾಮದ ಸರ್ಕಾರಿ ಪ್ರೌಢ ಶಾಲೆಯ ಕೊಠಡಿ ಸಂಖ್ಯೆ 1 ಹಾಗೂ 2, ಹಾರೋಹಳ್ಳಿ ತಾಲ್ಲೂಕಿನ ಕೆಪಿಎಸ್ ಜಿಎಚ್‌ಪಿಎಸ್ ಮಾಡೆಲ್ ಹಿರಿಯ ಪ್ರಾಥಮಿಕ ಶಾಲೆಯ ಕೊಠಡಿ ಸಂಖ್ಯೆ 1 ಮತ್ತು 2, ಕನಕಪುರ ತಾಲ್ಲೂಕು ಆಡಳಿತ ಸೌಧದ ತಹಶೀಲ್ದಾರ್ ಕಚೇರಿಯ ಕೊಠಡಿ ಸಂಖ್ಯೆ 1, 2, 3 ಹಾಗೂ 4 ರಲ್ಲಿ ಮತದಾನ ಕೇಂದ್ರವನ್ನು ಸ್ಥಾಪಿಸಲಾಗಿದೆ ಎಂದು ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಖಾಸಗಿ ಫೋಟೋ: ವೈದ್ಯನ ವಿರುದ್ಧ ದೂರು

• ಉದಯವಾಹಿನಿ, ರಾಮನಗರ

ಮಹಿಳೆಯ ಖಾಸಗಿ ಫೋಟೋಗಳನ್ನು ಸೆರೆ ಹಿಡಿದು ಹಣಕ್ಕೆ ಬೇಡಿಕೆ ಇಡುತ್ತಿದ್ದ ವೈದ್ಯನ ವಿರುದ್ಧ ಸಂತ್ರಸ್ತ ಮಹಿಳೆ ಠಾಣೆ ಮೆಟ್ಟಿಲು ಹತ್ತಿರುವ ಪ್ರಕರಣ ಕುಂಬಳಗೂಡು ಠಾಣೆ ವ್ಯಾಪ್ತಿಯ ಬಡಾವಣೆಯಲ್ಲಿ ನಡೆದಿದೆ.

ಕೆಂಗೇರಿ ಹೋಬಳಿಯ ವಿನಾಯಕನಗರ ಬಡಾವಣೆಯ ವೈದ್ಯ ಪರಸಪ್ಪ ಎಂಬುವರ ವಿರುದ್ಧ ಸಂತ್ರಸ್ತ ಮಹಿಳೆ ಕುಂಬಳಗೂಡು ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ. ನನ್ನ ಖಾಸಗಿ ಫೋಟೋಗಳನ್ನು ಇಟ್ಟುಕೊಂಡು ಬ್ಲಾಕ್‌ಮೇಲ್ ಮಾಡಿ ಹಣ ಮತ್ತು ಚಿನ್ನಾಭರಣ ಪಡೆದಿದ್ದಾನೆ ಎಂದು ದೂರಿನಲ್ಲಿ ಆರೋಪಿಸಿದ್ದಾರೆ. ಈ ಹಿಂದೆ ಸಂತ್ರಸ್ತ ಮಹಿಳೆ ವಾಸವಿದ್ದ ಮನೆಯ ಕೆಳಮಹಡಿಯಲ್ಲಿ ಆರೋಪಿ ವೈದ್ಯ ವಾಸವಿದ್ದನು. ಈ ವೇಳೆ, ಮಹಿಳೆ ಕುಟುಂಬದವರು ಅನಾರೋಗ್ಯಕ್ಕೆ ತುತ್ತಾದಾಗ ಈತನ ಬಳಿ ಚಿಕಿತ್ಸೆ ಪಡೆಯುತ್ತಿದ್ದರು. ಮಹಿಳೆ ಕೈನಲ್ಲಿ ಗಂಟು ಇದ್ದ ಕಾರಣ ವೈದ್ಯನ ಬಳಿ ಮಹಿಳೆ ಚಿಕಿತ್ಸೆಗೆ ಹೋದಾಗ

ಉದಯವಾಹಿನಿ ಚಿತ್ರ

ಇಬ್ಬರ ನಡುವೆ ಆತ್ಮೀಯತೆ ಬೆಳೆದಿದೆ. ಮಹಿಳೆ ಜತೆ ಸ್ನೇಹ ಸಂಪಾದಿಸಿದ ವೈದ್ಯ ಮಹಿಳೆ ಮನೆಗೆ ಹೋಗಿ ಬಂದು ಮಾಡುತ್ತಿದ್ದನು.

ಈ ಸಂದರ್ಭದಲ್ಲಿ ಮಹಿಳೆಯ ಖಾಸಗಿ ವಿಡಿಯೋ ಮತ್ತು ಫೋಟೋಗಳನ್ನು ಅವಳ ಅರಿವಿಗೆ ಬಾರದಂತೆ ತೆಗೆದುಕೊಂಡಿದ್ದಾನೆ. ಈ ಫೋಟೋ ಮತ್ತು ವಿಡಿಯೋಗಳನ್ನು ಇಟ್ಟುಕೊಂಡು ಮಹಿಳೆಗೆ ಬ್ಲಾಕ್ ಮೇಲ್ ಮಾಡುತ್ತಿದ್ದ ಎನ್ನಲಾಗಿದೆ.

ಅಲ್ಲದೇ, ಹಣ ನೀಡದೇ ಹೋದಾಗ ಮಹಿಳೆಯ ಸಂಬಂಧಿಕರಿಗೆ ಫೋಟೋಗಳನ್ನು ಕಳುಹಿಸಿದ್ದ. ಅಲ್ಲದೇ, ಪೊಲೀಸರಿಗೆ ದೂರು ನೀಡಿದರೆ ಫೋಟೋ ವೈರಲ್ ಮಾಡುವುದಾಗಿ ಬೆದರಿಕೆ ಹಾಕಿದ್ದ ಎಂದು ಸಂತ್ರಸ್ತ ಮಹಿಳೆ ದೂರಿನಲ್ಲಿ ಆರೋಪಿಸಿದ್ದಾರೆ.

ರಕ್ತ ಕ್ಯಾನ್ಸರ್ ಖಾಯಿಲೆ: ತನ್ಮಯ್ ತೇಜ್‌ಗೆ ಚೆಕ್ ವಿತರಣೆ

• ಉದಯವಾಹಿನಿ,ಶಿಡ್ಲಘಟ್ಟ

ಗ್ರಾಮಾಭಿವೃದ್ಧಿ, ಆರ್ಥಿಕ ಸಬಲತೆ, ಕೃಷಿ, ಸಾಮಾಜಿಕ ಕ್ಷೇತ್ರ, ಜನರ ಜೀವನಮಟ್ಟ ಸುಧಾರಣೆ ಸೇರಿದಂತೆ ಹಲವು ಸಮಾಜಮುಖೀ ಚಿಂತನೆಗಳೊಂದಿಗೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯ ನಿರ್ವಹಿಸುತ್ತಿದೆ ಎಂದು ನಿರ್ದೇಶಕ ಪ್ರಶಾಂತ್.ಸಿ.ಎಸ್ ತಿಳಿಸಿದರು.

ತಾಲ್ಲೂಕಿನ ವೈ ಹುಣಸೇನಹಳ್ಳಿ ಗ್ರಾಮದ ನಿವಾಸಿಗಳಾದ ಆರತಿ ಜಗದೀಶ್ ಎಂಬುವವರ ಪುತ್ರ 4 ವರ್ಷದ ತನ್ಮಯ್ ತೇಜ್ ಪೋಷಕರಿಗೆ ಚೆಕ್ ವಿತರಸಿ ಮಾತನಾಡಿದರು.

ಪೂಜ್ಯರಾದ ಡಾ.ಡಿ.ವೀರೇಂದ್ರ ಹೆಗ್ಗಡೆಯವರುಟ ರಾಜ್ಯಾದ್ಯಂತ ವಿವಿಧ ಸಮುದಾಯ ಅಭಿವೃದ್ಧಿ ಕಾರ್ಯಗಳಿಗೆ, ದೇವಾಲಯಗಳ ಜೀರ್ಣೋದ್ಧಾರಗಳಿಗೆ ಸಾಕಷ್ಟು ಅನುದಾನಗಳನ್ನು ನೀಡುತ್ತಾ ಬಂದಿದ್ದಾರೆ. ಕೃಷಿ ಕಾರ್ಯಕ್ರಮಗಳ ಅನುಷ್ಠಾನ,ಮಹಿಳಾ ಸಬಲೀಕರಣ ಕಾರ್ಯಕ್ರಮ,ಕೆರೆ ಹೂಳೆತ್ತುವುದು,ತಾಂತ್ರಿಕ ಮತ್ತು ವೃತ್ತಿಪರ ವಿದ್ಯಾರ್ಥಿಗಳಿಗೆ ಸುಜ್ಞಾನನಿಧಿ ಶಿಷ್ಯವೇತನ


ಉದಯವಾಹಿನಿ ಚಿತ್ರ

ಇನ್ನೂ ಅನೇಕ ಕಾರ್ಯಕ್ರಮಗಳನ್ನು ನಡೆಸುತ್ತಾ ಬಂದಿದ್ದಾರೆ. ಹೀಗೆ ಕಷ್ಟ ಎಂದು ಬಂದವರಿಗೆ ಧನ ಸಹಾಯ ಮಾಡುವುದು, ಅನಾಥ ಮಕ್ಕಳ ವಿದ್ಯಾಭ್ಯಾಸ ಶುಲ್ಕ ಭರಿಸುವುದು, ಸಂಕಷ್ಟದಲ್ಲಿದ್ದವರಿಗೆ ಸಹಾಯ ಮಾಡುತ್ತಾ ಬಂದಿದೆ.

ಧರ್ಮಸ್ಥಳದ ಗ್ರಾಮಾಭಿವೃದ್ಧಿ ಯೋಜನೆಯು ಕಟ್ಟಕಡೆಯ ವ್ಯಕ್ತಿಗೂ ತಲುಪಿಸುವ ಉದ್ದೇಶವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲ್ಲೂಕು ಯೋಜನಾಧಿಕಾರಿ ಸುರೇಶ ಗೌಡ.ಎಸ್, ಮೇಲ್ವಿಚಾರಕ ಪಾಲನಾಯಕ್, ಸೇವಾಪ್ರತಿನಿಧಿ ವರಲಕ್ಷ್ಮಮ್ಮ ಹಾಗೂ ಒಕ್ಕೂಟದ ಸದಸ್ಯರು, ಊರಿನ ಗಣ್ಯರು ಉಪಸ್ಥಿತರಿದ್ದರು.

ತನ್ಮಯ್ ತೇಜ್ ಬಾಲಕ ರಕ್ತ ಕ್ಯಾನ್ಸರ್ ಖಾಯಿಲೆಯಿಂದ ಬಳಲುತ್ತಿದ್ದು, ಕುಟುಂಬದ ಆರ್ಥಿಕ ಪರಿಸ್ಥಿತಿ ತೀರಾ ಬಡತನದಲ್ಲಿದ್ದು, ಮಗುವಿನ ಚಿಕಿತ್ಸೆಗೆ ಸಹಾಯ ಮಾಡುವಂತೆ ಶ್ರೀ ಕ್ಷೇತ್ರ ಧರ್ಮ ಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ ಟ್ರಸ್ಟ್‌ಗೆ ಮನವಿ ಮಾಡಿರುತ್ತಾರೆ. ಅದರಂತೆ ದಂಪತಿಯ ಮನವಿಯನ್ನು ಪರಿಶೀಲಿಸಿದ ಪೂಜ್ಯರಾದ ಡಾ.ಡಿ.ವೀರೇಂದ್ರ ಹೆಗ್ಗಡೆಯವರು ರೂ.40 ಸಾವಿರ ಸಹಾಯಧನವನ್ನು ಮಂಜೂರು ಮಾಡಿರುತ್ತಾರೆ. ಸಹಾಯಧನದ ಮಂಜೂರಾತಿ ಪತ್ರವನ್ನು ಜಿಲ್ಲಾ ನಿರ್ದೇಶಕರಾದ ಪ್ರಶಾಂತ್.ಸಿ.ಎಸ್ ಅವರು ಶುಕ್ರವಾರ ಕುಟುಂಬದವರಿಗೆ ವಿತರಿಸಿದರು.

ಲೋ. ಚು. : ಮತ ಎಣಿಕೆಗೆ ಸಕಲ ಸಿದ್ಧತೆ ಕೈಗೊಳ್ಳಲು ಡಿಸಿ ನಿರ್ದೇಶನ

• ಉದಯವಾಹಿನಿ, ತುಮಕೂರು

ಜಿಲ್ಲೆಯ ಲೋಕಸಭಾ ಕ್ಷೇತ್ರಕ್ಕೆ ಕೆದ ಏಪ್ರಿಲ್ 26 ರಂದು ಜರುಗಿದ ಚುನಾವಣೆಯ ಮತ ಎಣಿಕೆ ಕಾರ್ಯವನ್ನು ವ್ಯವಸ್ಥಿತವಾಗಿ ನಡೆಸಲು ಸಕಲ ಸಿದ್ಧತೆಗಳನ್ನು ಕೈಗೊಳ್ಳಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಮತ ಎಣಿಕೆ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಮತ ಎಣಿಕಾ ಕಾರ್ಯಕ್ಕೆ ನಿಯೋಜಿಸುವ ಅಧಿಕಾರಿ/ಸಿಬ್ಬಂದಿಗಳಿಗೆ 2 ಹಂತದ ತರಬೇತಿ ನೀಡಬೇಕು. ಎಣಿಕೆಗೆ ನಿಯೋಜನೆಗೊಂಡವರು ಎಣಿಕಾ ಕೇಂದ್ರದಲ್ಲಿ ಜೂನ್ 4ರ ಬೆಳಿಗ್ಗೆ 5 ಗಂಟೆಗೆ ಹಾಜರಿರಬೇಕು ಎಂದು ಸೂಚಿಸಿದರು. ತುಮಕೂರು ಲೋಕಸಭಾ ಕ್ಷೇತ್ರಕ್ಕೊಳಪಡುವ ಚಿಕ್ಕನಾಯಕನಹಳ್ಳಿ, ತಿಪಟೂರು, ತುರುವೇಕೆರೆ, ಮಧುಗಿರಿ ವಿಧಾನ ಸಭಾ ಕ್ಷೇತ್ರದ ಮತ ಎಣಿಕಾ ಕಾರ್ಯ, ಇಟಿಪಿಬಿಎಂಎಸ್(Electronically Transmitted Postal Ballot System) ಅಂಚೆ ಮತಪತ್ರ (85 ವರ್ಷ ಮೇಲ್ಪಟ್ಟ, ವಿಶೇಷ ಚೇತನ,

ಉದಯವಾಹಿನಿ ಚಿತ್ರ

ಅಗತ್ಯ ಸೇವೆಯಲ್ಲಿರುವ, ಚುನಾವಣಾ ಸಿಬ್ಬಂದಿ ಹಾಗೂ ಅಂಚೆ ಮೂಲಕ ಸ್ವೀಕರಿಸಿದ)ಗಳ ಎಣಿಕಾ ಕಾರ್ಯವನ್ನು ತುಮಕೂರು ವಿಶ್ವವಿದ್ಯಾನಿಲಯದ ವಿಜ್ಞಾನ ಕಾಲೇಜಿನಲ್ಲಿ ನಡೆಸಲಾಗುವುದು.

ಅದೇ ರೀತಿ ತುಮಕೂರು ನಗರ, ತುಮಕೂರು ಗ್ರಾಮಾಂತರ, ಕೊರಟಗೆರೆ, ಗುಬ್ಬಿ ಕ್ಷೇತ್ರದ ಮತ ಎಣಿಕೆಯನ್ನು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನಲ್ಲಿ ನಡೆಸಲಾಗುವುದು. ಮತ ಎಣಿಕೆಗಾಗಿ ಎಣಿಕಾ ಕೊಠಡಿ, ಟೇಬಲ್, ಗಣಕಯಂತ್ರ, ಪ್ರಿಂಟರ್ ಸೇರಿದಂತೆ ಅಗತ್ಯ ಸಾಮಗ್ರಿಗಳ ವ್ಯವಸ್ಥೆ ಮಾಡಬೇಕು ಎಂದು ನಿರ್ದೇಶನ ನೀಡಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕ್, ಜಿಲ್ಲಾ ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿ. ಪ್ರಭು, ಅಪರ ಜಿಲ್ಲಾಧಿಕಾರಿ ಶಿವಾನಂದ ಬಿ. ಕರಾಳೆ, ಪಾಲಿಕೆ ಆಯುಕ್ತ ಅಶ್ವಿಜ, ಚುನಾವಣಾ ತಹಶೀಲ್ದಾರ್ ರೇಷ್ಮ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ಉಪವಿಭಾಗಾಧಿಕಾರಿಗಳು, ತಹಶೀಲ್ದಾರರು ಹಾಜರಿದ್ದರು.

ಎಣಿಕಾ ಕೇಂದ್ರದಲ್ಲಿರುವ ಭದ್ರತಾ ಕೊಠಡಿ ಯನ್ನು ಜೂನ್ 4ರ ಬೆಳಿಗ್ಗೆ 7.30 ಗಂಟೆಗೆ ತೆರೆಯಲಾಗುವುದು. ನಂತರ ಬೆಳಿಗ್ಗೆ 8 ಗಂಟೆಗೆ ಮತ ಎಣಿಕೆ ಕಾರ್ಯವನ್ನು ಪ್ರಾರಂಭಿಸಬೇಕು. ಮೊದಲಿಗೆ ಅಂಚೆ ಮತ ಪತ್ರ ನಂತರ ಇವಿಎಂ ಮತಪತ್ರಗಳ ಎಣಿಕೆಯನ್ನು ಪ್ರಾರಂಭಿಸಬೇಕು. ಭದ್ರತಾ ಕೊಠಡಿ ತೆರೆಯುವ ಸಂದರ್ಭದಲ್ಲಿ ಚುನಾವಣಾ ಅಭ್ಯರ್ಥಿಗಳು, ಚುನಾವಣಾ ವೀಕ್ಷಕರು, ಏಜೆಂಟರುಗಳು ಹಾಜರಿರುವಂತೆ ಅವರಿಗೆ ಮುಂಚಿತವಾಗಿ ಮಾಹಿತಿ ನೀಡಬೇಕು ಎಂದು ಸೂಚನೆ ನೀಡಿದರು.

ಅರಣ್ಯ ಇಲಾಖೆ ಅಧಿಕಾರಿಗಳ ವಿರುದ್ಧ ಪ್ರತಿಭ

ಅಂತರಾಳದಿಂದ... EDITORIAL

ಒಪ್ಪಿಕೊಂಡರೆ ಸಾಲದು, ಪಾಕ್ ತನ್ನನ್ನು ಸರಿಪಡಿಸಿಕೊಳ್ಳಲಿ

ಉದಯವಾಹಿನಿ ಚಿತ್ರ

ಭಾರತವನ್ನು ದ್ವೇಷಿಸುತ್ತ ಪಾಕ್ ಹುಟ್ಟುಹಾಕಿದ ಮತಾಂಧ ಭಯೋತ್ಪಾದನೆ ಇಂದು ಅದನ್ನೇ ತಿನ್ನುತ್ತಿದೆ. ಇನ್ನಾದರೂ ಪಾಕ್ ಆಡಳಿತಗಾರರಿಗೆ, ಸೇನಾಧಿಕಾರಿಗಳಿಗೆ ಬುದ್ಧಿ ಬರಲಿ. ಕಾಶ್ಮೀರ ಮತ್ತಿತರ ವಿಚಾರಗಳನ್ನು ಪ್ರಸ್ತಾಪಿಸುತ್ತ ಭಾರತಕ್ಕೆ ಮುಜುಗರ ಸೃಷ್ಟಿಸಲು ವಿಫಲ ಪ್ರಯತ್ನ ಮಾಡುತ್ತಿರುವ ಪಾಕ್ ತನ್ನ ತಟ್ಟೆಯಲ್ಲಿ ಬಿದ್ದಿರುವ ಹೆಗ್ಗಣವನ್ನು ಮೊದಲು ಗಮನಿಸಲಿ.

ಕೆಲವು ದಿನಗಳ ಹಿಂದೆ ಪಾಕ್ ಸಂಸತ್‌ನಲ್ಲೇ ಅಲ್ಲಿನ ವಿಪಕ್ಷ ನಾಯಕನೇ ಭಾರತವನ್ನು ಹಾಡಿ ಹೊಗಳಿರುವ ವಿಡಿಯೋವೊಂದು ವೈರಲ್ ಆಗಿತ್ತು. ಇದೀಗ ಮತ್ತೊಬ್ಬ ಸಂಸದ ಭಾರತದ ಬಗ್ಗೆ ಮೆಚ್ಚುಗೆ ಮಾತುಗಳನ್ನಾಡಿದ್ದಾರೆ. ಸಂಸತ್‌ನಲ್ಲಿ ಮಾತನಾಡಿದ ಸಂಸದ ಸಯ್ಯದ್ ಮುಸ್ತಾಫಾ ಕಮಲ್ ಭಾರತ ಮತ್ತು ಪಾಕಿಸ್ತಾನವನ್ನು ಹೋಲಿಕೆ ಮಾಡಿ ಮಾತನಾಡಿದ್ದು, ಭಾರತ ಚಂದ್ರನ ಮೇಲೆ ಕಾಲಿಟ್ಟಿದೆ. ಆದರೆ ಪಾಕಿಸ್ತಾನದ ಸ್ಥಿತಿ ಹೇಗಿದೆ ನೋಡಿ ಎಂದು ಹೇಳಿದ್ದಾರೆ.

> ಇದೀಗ ಇವರ ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗಿದೆ. ಭಾರತ ಚಂದ್ರನ ಮೇಲೆ ಕಾಲಿಟ್ಟಿದೆ. ಆದರೆ ಪಾಕಿಸ್ತಾನ ಮಾತ್ರ ಮಕ್ಕಳು ಚರಂಡಿ ಬೀಳುತ್ತಿರುವ ಬಗ್ಗೆ ವರದಿ ಮಾಡುತ್ತಿದ್ದೇವೆ. ಕರಾಚಿಯಲ್ಲಿ ಜನ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿದ್ದಾರೆ. ದೇಶದಲ್ಲಿ 2.6 ಕೋಟಿ ಮಕ್ಕಳಿದ್ದು, ಅವರಿಗೆ ಶಿಕ್ಷಣ ಸೌಲಭ್ಯವೂ ಸಿಗುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಕೆಲವು ದಿನಗಳ ಹಿಂದೆ ಇಡೀ ಪ್ರಪಂಚದಲ್ಲೇ ಭಾರತ ಬಲಿಷ್ಠ ರಾಷ್ಟ್ರವಾಗಿ ಬೆಳೆಯುತ್ತಿದೆ. ನಾವು ಮಾತ್ರ ಹಣಕಾಸಿನ ಸಹಾಯಕ್ಕಾಗಿ ಭಿಕ್ಷೆ ಬೇಡುತ್ತಿದ್ದೇವೆ ಎಂದು ಪಾಕಿಸ್ತಾನದ ವಿಪಕ್ಷ ನಾಯಕ ಮೌಲಾನ ಫಜ್ಲೂರ್ ರೆಹಮಾನ್ ಹೇಳಿದ್ದರು. ಅವರು ಪಾಕಿಸ್ತಾನ ಸಂಸತ್‌ನಲ್ಲಿ ಸರ್ಕಾರ ವೈಫಲ್ಯದ ವಿರುದ್ಧ ವಾಗ್ದಾಳಿ ನಡೆಸುತ್ತಾ, ಭಾರತ ಜಾಗತಿಕ ಮಟ್ಟದಲ್ಲಿ ಸೂಪರ್ ಪವರ್‌ಫುಲ್ ರಾಷ್ಟ್ರವಾಗಿ ಬೆಳೆಯುತ್ತಿದೆ ಪಾಕಿಸ್ತಾನ ಮಾತ್ರ ದಿವಾಳಿತನದತ್ತ ಸಾಗುತ್ತಿದೆ. 1947ರಲ್ಲಿ ಭಾರತ ಮತ್ತು ಪಾಕಿಸ್ತಾನ ಸ್ವಾತಂತ್ರ್ಯ ಪಡೆದುಕೊಂಡಿತ್ತು. ಇಂದು ಭಾರತದ ಸ್ಥಿತಿ ಎಲ್ಲಿದೆ ಹಾಗೂ ನಮ್ಮ ಸ್ಥಿತಿ ಎಲ್ಲಿದೆ? ಇಷ್ಟಕ್ಕೆಲ್ಲಾ ಯಾರು ಹೊಣೆ ಎಂದು ಕಟುವಾಗಿ ಪ್ರಶ್ನಿಸಿದ್ದರು.

ಪಾಕಿಸ್ತಾನದ ವೈಫಲ್ಯಗಳ ಪಟ್ಟಿ ಮಾಡಹೊರಟರೆ ಮುಗಿಯುವುದೇ ಇಲ್ಲ. ಶುದ್ಧ ಕುಡಿಯುವ ನೀರು ಪೂರೈಸಲು ಸಾಧ್ಯವಾಗುತ್ತಿಲ್ಲ. ಸರಿಯಾದ ಆಧುನಿಕ ಶಿಕ್ಷಣ ಕಲಿಸುವ ಶಾಲೆಗಳಿಲ್ಲ. ಸಿಂಧ್ ಪ್ರಾಂತ್ಯದಲ್ಲಿ 70 ಲಕ್ಷ ಮಕ್ಕಳು ಶಾಲೆಗೆ ಹೋಗುತ್ತಿಲ್ಲ. ಅಲ್ಲಿ ಒಟ್ಟು 2.62 ಕೋಟಿ ಮಕ್ಕಳು ಶಾಲೆಗೆ ಹೋಗುತ್ತಿಲ್ಲ. ಮತಾಂಧತೆ ಕಲಿಸುವ ಮದ್ರಸ ಶಿಕ್ಷಣ ಮಾತ್ರ ವ್ಯಾಪಕವಾಗಿದೆ. ಹಣದುಬ್ಬರದ ಏರಿಕೆಯಿಂದಾಗಿ ಪಾಕಿಸ್ತಾನದಲ್ಲಿ ಅಗತ್ಯ ವಸ್ತುಗಳ ಬೆಲೆಯು ದಿನೇದಿನೆ ಜಾಸ್ತಿಯಾಗುತ್ತಿದ್ದು, ಜನ ಹೈರಾಣಾಗುತ್ತಿದ್ದಾರೆ. ಒಂದು ಲೀಟರ್ ಪೆಟ್ರೋಲ್‌ಗೆ 290 ರೂ. (ಪಾಕಿಸ್ತಾನದ ರೂಪಾಯಿ) ಆದರೆ, ಒಂದು ಕೆ.ಜಿ ಗೋಧಿ ಹಿಟ್ಟಿಗೆ 800 ರೂ. ಕೊಡಬೇಕಾಗಿದೆ. ಒಂದು ರೊಟ್ಟಿಗೆ 25 ರೂ. ನೀಡಬೇಕಾಗಿದೆ. ಇದರಿಂದಾಗಿ ಸಾಮಾನ್ಯ ಜನ ಮೂರು ಹೊತ್ತು ಊಟ ಮಾಡಲು ಕೂಡ ತೊಂದರೆಯಾಗುತ್ತಿದೆ. ಹಣಕಾಸಿನ ಕೊರತೆಯಿಂದ ಬಳಲುತ್ತಿರುವ ಪಾಕ್‌ನ ವಿದೇಶಿ ವಿನಿಮಯ ಮೀಸಲು ನಿಧಿ ಆಮದನ್ನು ಪೂರೈಸಲು ಸಾಕಾಗುತ್ತಿಲ್ಲ.

ಉಗ್ರರ ಪೋಷಣೆ, ಅವರಿಗೆ ಹಣಕಾಸು ನೆರವು, ಅಸಮರ್ಥ ನಾಯಕತ್ವ, ಕೊರೊನಾ ಬಿಕ್ಕಟ್ಟು ಸೇರಿ ಹಲವು ಕಾರಣಗಳಿಂದ ಪಾಕಿಸ್ತಾನ ದಿವಾಳಿಯಾಗಿದೆ. ಇದೇ ಕಾರಣಕ್ಕಾಗಿ ಅಂತಾರಾಷ್ಟ್ರೀಯ ಹಣಕಾಸು ಸಂಸ್ಥೆ ಎದುರು ಹಣಕ್ಕಾಗಿ ಭಿಕ್ಷಾಪಾತ್ರೆ ಹಿಡಿದು ನಿಂತಿದೆ. ಈಗಾಗಲೇ ಐಎಂಎಫ್ 3 ಶತಕೋಟಿ ಡಾಲರ್ ಸಾಲ ನೀಡಲು ಒಪ್ಪಿಗೆ ಸೂಚಿಸಿದೆ. ಆದರೆ, ಮುಂದಿನ ಮೂರು ವರ್ಷಗಳವರೆಗೆ 6 ಶತಕೋಟಿ ಡಾಲರ್ ಸಾಲ ನೀಡಿ ಎಂದು ಪಾಕಿಸ್ತಾನ ಮನವಿ ಮಾಡುತ್ತಿದೆ. ಆದರೆ, ಪಾಕ್‌ನಲ್ಲಿ ದಿನೇದಿನೆ ಹಣದುಬ್ಬರದ ಏರಿಕೆಯಾಗುತ್ತಿರುವ ಕಾರಣ ಸಾಲ ನೀಡಲು ಐಎಂಎಫ್ ಹಿಂದೇಟು ಹಾಕುತ್ತಿದೆ. ಇದಕ್ಕಾಗಿಯೇ, ಆಡಳಿತ ಕಾರ್ಯತಂತ್ರದ ಘಟಕಗಳನ್ನು ಹೊರತುಪಡಿಸಿ ಎಲ್ಲಾ ಸರ್ಕಾರಿ ಸ್ವಾಮ್ಯದ ಉದ್ಯಮಗಳನ್ನು ಖಾಸಗೀಕರಣಗೊಳಿಸಲು ಮುಂದಾಗಿದೆ. ಐಎಂಎಫ್ ಪಾಕಿಸ್ತಾನಕ್ಕೆ ಸೂಚಿದ ಶಿಫಾರಸ್ಸಿನ ಪಟ್ಟಿಯಲ್ಲಿ ನಷ್ಟದಲ್ಲಿರುವ ಸರ್ಕಾರಿ ಉದ್ಯಮಗಳ ಖಾಸಗೀಕರಣವೂ ಸೇರಿದೆ. ಭಾರತವನ್ನು ದ್ವೇಷಿಸುತ್ತ ಪಾಕ್ ಹುಟ್ಟುಹಾಕಿದ ಮತಾಂಧ ಭಯೋತ್ಪಾದನೆ ಇಂದು ಅದನ್ನೇ ತಿನ್ನುತ್ತಿದೆ. ಇನ್ನಾದರೂ ಪಾಕ್ ಆಡಳಿತಗಾರರಿಗೆ, ಸೇನಾಧಿಕಾರಿಗಳಿಗೆ ಬುದ್ಧಿ ಬರಲಿ. ಕಾಶ್ಮೀರ ಮತ್ತಿತರ ವಿಚಾರಗಳನ್ನು ಪ್ರಸ್ತಾಪಿಸುತ್ತ ಭಾರತಕ್ಕೆ ಮುಜುಗರ ಸೃಷ್ಟಿಸಲು ವಿಫಲ ಪ್ರಯತ್ನ ಮಾಡುತ್ತಿರುವ ಪಾಕ್ ತನ್ನ ತಟ್ಟೆಯಲ್ಲಿ ಬಿದ್ದಿರುವ ಹೆಗ್ಗಣವನ್ನು ಮೊದಲು ಗಮನಿಸಲಿ. ಅಲ್ಲಿನ ರಾಜಕೀಯ ನಾಯಕರೇ ತಮ್ಮ ಸ್ಥಿತಿಯನ್ನು ಪ್ರಾಮಾಣಿಕವಾಗಿ ಒಪ್ಪಿಕೊಂಡಾಗ, ತಿದ್ದಿಕೊಳ್ಳಲು ಸರಿಯಾದ ಕಾಲ ಬಂದಿದೆ ಎಂದರ್ಥ.

ವಾಣಿ ವಿಲಾಸ ಸಾಗರ ಜಲಾಶಯದಲ್ಲಿ ನೀರಿನ ಮಟ್ಟ ಎಷ್ಟಿದೆ?

• ಉದಯವಾಹಿನಿ, ಬೆಂಗಳೂರು

ಇದೀಗ ರಾಜ್ಯದ ಬಹುತೇಕ ಜಿಲ್ಲೆಗಳಲ್ಲಿ ಮಳೆ ಶುರುವಾಗಿದೆ. ಅಲ್ಲದೆ ಹವಾಮಾನ ಇಲಾಖೆ ಮುನ್ಸೂಚನೆ ಪ್ರಕಾರ ಮುಂದಿನ ಒಂದು ವಾರ ಮಳೆ ಮುಂದುವರೆಯಲಿದ್ದು, ಇದು ನಿಜವಾದರೆ, ಜಲಮೂಲಗಳಿಗೆ ಜೀವಕಳೆ ಬಂದಂತಾಗುತ್ತದೆ. ಈಗಾಗಲೇ ಧಾರಾಕಾರ ಮಳೆಯಿಂದ ಹಲವು ಜಲಾಶಯಗಳಿಗೆ ಸ್ವಲ್ಪ ಮಟ್ಟಿಗೆ ನೀರು ಬಂದಿದೆ ಎನ್ನುವ ಮಾಹಿತಿ ಲಭ್ಯವಾಗಿದೆ.

ಮಧ್ಯ ಕರ್ನಾಟಕದ ಬಯಲು ಸೀಮೆಯ ಏಕೈಕ ಜೀವ ನಡೆಯಾಗಿರುವ ಕೋಟೆನಾಡು, ಚಿತ್ರದುರ್ಗ ಜಿಲ್ಲೆಯ ಹಿರಿಯೂರು ತಾಲ್ಲೂಕಿನ ವಾಣಿವಿಲಾಸ ಜಲಾಶಯದಲ್ಲಿ (ಮೇ 17) ನೀರಿನ ಮಟ್ಟ 111.55 ಅಡಿ ಇದೆ ಎನ್ನುವ ಮಾಹಿತಿ ಲಭ್ಯವಾಗಿದೆ. ಇದೀಹ ಪೂರ್ವ ಮುಂಗಾರು ಮಳೆ ಆರಂಭವಾಗಿದೆ. ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಉತ್ತಮ ಮಳೆಯಾಗುತ್ತಿದೆ. ಆದರೆ ಕೆರೆ ಕಟ್ಟೆ, ಹಳ್ಳ ಕೊಳ್ಳ ತುಂಬಿ ಹರಿಯುವಂತೆ ಹೇಳಿಕೊಳ್ಳುವಂತಹ ಮಳೆಯಾಗಿಲ್ಲ. ಬದಲಿಗೆ ಹದವಾದ ಮಳೆಯಾಗಿದೆ.

ಇನ್ನು ಹಿರಿಯೂರು ತಾಲ್ಲೂಕಿನ ವಾಣಿವಿಲಾಸ ಜಲಾಶಯಕ್ಕೆ ಯಾವುದೇ ಒಳಹರಿವಿನ ಸಂಗ್ರಹವಾಗಿಲ್ಲ. 89 ವರ್ಷಗಳ ಬಳಿಕ 2022ರಲ್ಲಿ ವಿವಿ ಸಾಗರ ಜಲಾಶಯದಲ್ಲಿ 135 ಅಡಿ ನೀರು ಸಂಗ್ರಹವಾಗುವ ಮೂಲಕ ಎರಡನೇ ಬಾರಿಗೆ ಕೊಡಿಬಿದ್ದು ಇತಿಹಾಸ ನಿರ್ಮಾಣವಾಗಿತ್ತು. ಇನ್ನು ಕಳೆದ ವರ್ಷ ಮಳೆ ಬಾರದ ಹಿನ್ನೆಲೆ ಜಲಾಶಯಕ್ಕೆ ಯಾವುದೇ ಪ್ರಮಾಣದ ಒಳಹರಿವು ನೀರು ಸಂಗ್ರಹವಾಗಲಿಲ್ಲ. ಈ ಬಾರಿಯಾದರೂ ಬರಲಿದೆಯಾ ಎಂದು ಕಾದುನೋಡಬೇಕಿದೆ ಅಷ್ಟೇ.ವಿವಿ ಸಾಗರ ನೀರಿನ ಪ್ರಮಾಣದ ವಿವರ: ವಿವಿ ಸಾಗರ ಜಲಾಶಯದ ಒಟ್ಟು ನೀರಿನ ಸಂಗ್ರಹಣಾ ಸಾಮರ್ಥ್ಯವು 30.422 ಟಿಎಂಸಿಗಳಾಗಿದ್ದು, ಜಲಾಶಯದ ವ್ಯಾಪ್ತಿಯಲ್ಲಿ ಒಟ್ಟು 12,135.00 ಹೆಕ್ಟೇರ್ ಅಚ್ಚುಕಟ್ಟು ಪ್ರದೇಶವಿದ್ದು, ಇದರಲ್ಲಿ ಪ್ರಮುಖವಾಗಿ ತೋಟಗಾರಿಕೆ ಬೆಳೆಗಳಾದ ತೆಂಗು, ಅಡಿಕೆ, ಬಾಳೆ 5,557.00 ಹೆಕ್ಟೇರ್ ಆಗಿರುತ್ತದೆ. ಉಳಿದಂತೆ 6,578.00 ಹೆಕ್ಟೇರ್ ಖುಷ್ಕಿ ಜಮೀನು ಇರುತ್ತದೆ.

ಮೇ 08ರ ವರದಿಯಲ್ಲಿ ವಿವಿ ಸಾಗರ ಜಲಾಶಯದಲ್ಲಿ 112 ಅಡಿಗಳಷ್ಟು ನೀರಿನ ಸಂಗ್ರಹವಿದ್ದು, ಈ ಮಟ್ಟಕ್ಕೆ ನೀರಿನ ಸಂಗ್ರಹಣೆಯು 16.96 ಟಿಎಂಸಿಗಳಾಗಿದ್ದು, ಇದರಲ್ಲಿ 1.87 ಟಿಎಂಸಿ ಬಳಕೆಗೆ ಬಾರದ ಪ್ರಮಾಣ ಆಗಿರುತ್ತದೆ ಹಾಗೂ ಬಳಕೆಗೆ ಬರುವ ನೀರಿನ ಪ್ರಮಾಣ 15.09 ಟಿಎಂಸಿ ಇರುತ್ತದೆ. ಹಿರಿಯೂರು, ಚಿತ್ರದುರ್ಗ ಪಟ್ಟಣಗಳ ಕುಡಿಯುವ ನೀರಿಗಾಗಿ ಮತ್ತು ಚಳ್ಳಕೆರೆ ಪಟ್ಟಣ, ಸಂಶೋಧನಾ ಕೇಂದ್ರಗಳು, 18 ಹಳ್ಳಿಗಳ ಕುಡಿಯುವ ನೀರಿಗಾಗಿ ಒಟ್ಟು 0.2115 ಟಿಎಂಸಿ ಅವಶ್ಯಕವಾಗಿರುತ್ತದೆ. ಹಾಲಿ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಯಲ್ಲಿ ಜಲಾಶಯದಿಂದ ಮಳೆಗಾಲದ ಬೆಳೆ ಹಾಗೂ ತೋಟಗಾರಿಕೆ ಹದ ನೀರನ್ನು 30 ದಿನ ಹರಿಸಿದರೆ, ಸರಾಸರಿ ನೀರಿನ ಪ್ರಮಾಣ ಸುಮಾರು 1.40 ಟಿಎಂಸಿ ಬೇಕಾಗಲಿದೆ. ಆವಿಯಾಗುವ ನೀರಿನ ಪ್ರಮಾಣ ಸುಮಾರು 0.516 ಟಿಎಂಸಿ, ಒಟ್ಟು ಬಳಕೆಯಾಗುವ ನೀರಿನ ಪ್ರಮಾಣ 2.127 ಟಿಎಂಸಿ, ಜಲಾಶಯದಲ್ಲಿ ಉಳಿಯಬಹುದಾದ ನೀರಿನ ಪ್ರಮಾಣ 14.83 ಟಿಎಂಸಿ (111.55 ಅಡಿಗಳು) ಇರಲಿದೆ.

ಉದಯವಾಹಿನಿ ಚಿತ್ರ

> ವಾಣಿವಿಲಾಸ ಸಾಗರ ಜಲಾಶಯದ ಅಚ್ಚುಕಟ್ಟು ಪ್ರದೇಶಕ್ಕೆ 2023-24ನೇ ಸಾಲಿನಲ್ಲಿ ಅತೀ ಕಡಿಮೆ ಮಳೆಯಾಗಿರುವುದರಿಂದ, ರೈತರ ಜಮೀನುಗಳಿಗೆ ನೀರು ಹರಿಸುವುದು ಅವಶ್ಯವಿರುತ್ತದೆ. ಈ ಹಿನ್ನೆಲೆ ವಾಣಿ ವಿಲಾಸ ಸಾಗರ ಜಲಾಶಯ ಅಚ್ಚುಕಟ್ಟು ಪ್ರದೇಶಕ್ಕೆ ಬೇಸಿಗೆ ಹಂಗಾಮಿಗೆ ಎರಡನೇ ಹಂತದ ನೀರನ್ನು ಎಡ ಮತ್ತು ಬಲ ನಾಲೆಗಳ ಮೂಲಕ ನೀರು ಹರಿಸಲಾಗುತ್ತಿದೆ.

> ಮೇಲ್ಮಟ್ಟದ ಕಾಲುವೆ ಅಚ್ಚುಕಟ್ಟು ಪ್ರದೇಶದ 03 ಗ್ರಾಮಗಳು, ಬಲನಾಲ ಅಚ್ಚುಕಟ್ಟು ಪ್ರದೇಶದ 21 ಗ್ರಾಮಗಳು ಹಾಗೂ ಎಡನಾಲ ಅಚ್ಚುಕಟ್ಟು ಪ್ರದೇಶದ 18 ಗ್ರಾಮಗಳು ಹಾಗೂ ನಾಲೆಗಳಲ್ಲಿ ನೀರನ್ನು ಬಿಟ್ಟಾಗ ಹಿರಿಯೂರು ತಾಲ್ಲೂಕಿನ 38 ಗ್ರಾಮಗಳ ಅಂತರ್ಜಲ ಅಭಿವೃದ್ಧಿಯಾಗಿ ಸಾರ್ವಜನಿಕರಿಗೆ ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆಯನ್ನೂ ಸಹ ಸುಧಾರಿಸಬಹುದಾಗಿದೆ.

ನಾಲೆಗಳಿಗೆ ನೀರು

ತಾಲ್ಲೂಕಿನಲ್ಲಿ ಮಳೆ ಇಲ್ಲದೆ ಬರಗಾಲದ ಹಿನ್ನೆಲೆ, ತೋಟಗಾರಿಕೆ ಹಾಗೂ ಇತರೆ ಕೃಷಿ ಬೆಳೆಗಳಿಗೆ ನೀರಿನ ಅವಶ್ಯಕತೆ ಇದ್ದು, ವಾಣಿ ವಿಲಾಸ ಜಲಾಶಯದಿಂದ ಮೇ 10ರಿಂದ 25 ದಿನಗಳ ಕಾಲ ಇಲ್ಲಿನ ಅಚ್ಚುಕಟ್ಟು ಪ್ರದೇಶಕ್ಕೆ ಬೇಸಿಗೆ ಹಂಗಾಮಿಗೆ ಎರಡನೇ ಹಂತದ ನೀರು ಹರಿಸಲಾಗುತ್ತಿದೆ.

ಕಾಂಗ್ರೇಸ್, ಬಿಜೆಪಿ, ಜೆಡಿಎಸ್ ಗೆಲ್ಲಬಹುದಾದ ಸ್ಥಾನಗಳೆಷ್ಟು?



ಜೆಡಿಎಸ್ ಗೆಲ್ಲಬಹುದಾದ ಕ್ಷೇತ್ರಗಳು?

ಮಂಡ್ಯ	ಜೆಡಿಎಸ್
ಹಾಸನ	ಜೆಡಿಎಸ್
ಕೋಲಾರ	ಜೆಡಿಎಸ್

ಕಾಂಗ್ರೇಸ್ ಗೆಲ್ಲಬಹುದಾದ ಕ್ಷೇತ್ರಗಳು?

ಚಾಮರಾಜನಗರ	ಕಾಂಗ್ರೇಸ್
ತುಮಕೂರು	ಕಾಂಗ್ರೇಸ್
ಚಿತ್ರದುರ್ಗದ	ಕಾಂಗ್ರೇಸ್
ಕಲಬುರಗಿ	ಕಾಂಗ್ರೇಸ್
ಕೊಪ್ಪಳ	ಕಾಂಗ್ರೇಸ್
ಬೆಳಗಾವಿ	ಕಾಂಗ್ರೇಸ್
ದಾವಣಗೆರೆ	ಕಾಂಗ್ರೇಸ್ (50 -50)
ಬೆಂ,ಗ್ರಾಮಾಂತರ	ಕಾಂಗ್ರೇಸ್ (50 - 50)

ಬಿಜೆಪಿ ಗೆಲ್ಲಬಹುದಾದ ಕ್ಷೇತ್ರಗಳು?

ಚಿಕ್ಕೋಡಿ	ಬಿಜೆಪಿ
ಮೈಸೂರು	ಬಿಜೆಪಿ
ಚಿಕ್ಕಬಳ್ಳಾಪುರ	ಬಿಜೆಪಿ
ಬಳ್ಳಾರಿ	ಬಿಜೆಪಿ
ವಿಜಯಪುರ	ಬಿಜೆಪಿ
ರಾಯಚೂರು	ಬಿಜೆಪಿ
ಕಲಬುರಗಿ	ಬಿಜೆಪಿ
ಉತ್ತರ ಕನ್ನಡ	ಬಿಜೆಪಿ
ದಕ್ಷಿಣ ಕನ್ನಡ	ಬಿಜೆಪಿ
ಉಡುಪಿ -ಚಿಕ್ಕಮಗಳೂರು	ಬಿಜೆಪಿ
ಧಾರವಾಡ	ಬಿಜೆಪಿ
ಬೆಂಗಳೂರು ದಕ್ಷಿಣ	ಬಿಜೆಪಿ
ಬೆಂಗಳೂರು ಉತ್ತರ	ಬಿಜೆಪಿ
ಬೆಂಗಳೂರು ಸೆಂಟ್ರಲ್	ಬಿಜೆಪಿ
ಶಿವಮೊಗ್ಗ	ಬಿಜೆಪಿ
ಬೀದರ್	ಬಿಜೆಪಿ
ಬಾಗಲಕೋಟೆ	ಬಿಜೆಪಿ

• ಉದಯವಾಹಿನಿ, ಬೆಂಗಳೂರು

2023 ರ ವಿಧಾನಸಭಾ ಚುನಾವಣೆಯಲ್ಲಿ 135 ಸ್ಥಾನಗಳನ್ನ ಗೆಲ್ಲುವ ಮೂಲಕ ರಾಜ್ಯದಲ್ಲಿ ಆಡಳಿತದ ಚುಕ್ಕಾಣಿ ಹಿಡಿದಿರುವ ಕಾಂಗ್ರೇಸ್ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೇಸ್ ಹೈಕಮಾಂಡ್ ಕೊಟ್ಟ ಟಾರ್ಗೆಟ್ ನಂತೆ 20 ಕ್ಕೂ ಹೆಚ್ಚು ಸ್ಥಾನವನ್ನ ಗೆಲ್ಲುವ ವಿಶ್ವಾಸದಲ್ಲಿದೆ.

ರಾಜ್ಯದಲ್ಲಿ ಲೋಕಸಭಾ ಚುನಾವಣೆ 2ಹಂತದಲ್ಲಿ ನಡೆದಿದ್ದು, ಮೈತ್ರಿ ನಾಯಕರು ಹಾಗೂ ಕಾಂಗ್ರೇಸ್ ನಾಯಕರು ಸೋಲು ಗೆಲುವಿನ ಲೆಕ್ಕಾಚಾರವನ್ನ ನಡೆಸಿದ್ದಾರೆ. ಹೌದು, ಕರ್ನಾಟಕದಲ್ಲಿ ಏಪ್ರಿಲ್ 26 ರಂದು ಮೊದಲ ಹಂತದ ಚುನಾವಣೆ ಮೇ 7 ರಂದು ಎರಡನೇ ಹಂತದ ಚುನಾವಣೆ ನಡೆದಿದ್ದು, ಎಲ್ಲರ ಚಿತ್ತ ಜೂನ್ 4ರ ಫಲಿತಾಂಶದ ಕಡೆ ನೆಟ್ಟಿದೆ.

ಇದರ ನಡುವೆ ಆಡಳಿತರೂಢ ಕಾಂಗ್ರೇಸ್ ಕನಿಷ್ಟ 20 ಸ್ಥಾನಗಳನ್ನ ಗೆಲ್ಲುವ ನಿರೀಕ್ಷೆಯಲ್ಲಿದ್ರೆ, ಕಾಂಗ್ರೇಸ್ ಠಕ್ಕರ್ ಕೊಡುವ ನಿಟ್ಟಿನಲ್ಲಿ 20 ಲೋಕಸಭಾ ಕ್ಷೇತ್ರಗಳ ಪೈಕಿ 28 ಕ್ಷೇತ್ರಗಳಲ್ಲಿ ಮೈತ್ರಿ ಅಭ್ಯರ್ಥಿಗಳು ಗೆಲ್ಲಲಿದ್ದಾರೆ ಎಂದು ಹಲವು ಬಿಜೆಪಿ ನಾಯಕರು ವಿಶ್ವಾಸವನ್ನ ವ್ಯಕ್ತಪಡಿಸಿದ್ದಾರೆ. ಇತ್ತ ಆಂತರಿಕ ವರದಿಯೊಂದು ಕಾಂಗ್ರೇಸ್ ನಾಯಕರ ಕೈ ಸೇರಿದ್ದು, ವರದಿಯಲ್ಲಿನ ಅಂಕಿ ಅಂಶಗಳ ಲೆಕ್ಕವನ್ನ ಕಂಡು ರಾಜ್ಯ ಕಾಂಗ್ರೇಸ್ ನಾಯಕರ ಸಂತಸದಲ್ಲಿದ್ದಾರೆ ಎನ್ನಲಾಗಿದೆ. ಈ ವರದಿಯಲ್ಲಿ ಬಿಜೆಪಿಗಿಂತಲೂ ರಾಜ್ಯದಲ್ಲಿ ಕಾಂಗ್ರೇಸ್ ಉತ್ತಮ ಸಾಧನೆಯನ್ನ ಮಾಡಿದೆ ಎಂಬ ವಿಶ್ವಾಸವನ್ನ ರಾಜ್ಯ ಕಾಂಗ್ರೇಸ್ ನಾಯಕರು ವ್ಯಕ್ತಪಡಿಸಿದ್ದಾರೆ.

ಬಿಜೆಪಿ 25 ಹಾಗೂ ಜೆಡಿಎಸ್ ಮೂರು ಕ್ಷೇತ್ರಗಳಲ್ಲಿ ಸ್ಪರ್ಧೆ ನಡೆಸಿದ್ದು, 28 ಕ್ಷೇತ್ರಗಳನ್ನ ಗೆಲ್ಲುವ ನಿರೀಕ್ಷೆಯಲ್ಲಿ ಕಮಲ-ದಳ ನಾಯಕರಿದ್ದಾರೆ. ರಾಜ್ಯದಲ್ಲಿ ಎರಡು ಹಂತದ ಚುನಾವಣೆ ನಡೆದಿದ್ದು, ಜೂನ್ 4 ರಂದು ಫಲಿತಾಂಶಕ್ಕಾಗಿ ಕಾಯುತ್ತಿದ್ದಾರೆ. ಇತ್ತ ಸ್ಥಳೀಯ ನಾಯಕರ ಅಭಿಪ್ರಾಯ ಹಾಗೂ ಗ್ಯಾರಂಟಿಗಳಿಂದ ಕಾಂಗ್ರೇಸ್ ಪಕ್ಷದ ಮೇಲೆ ಆಗಿರುವ ಸಾಕಾರಾತ್ಮಕ ಪರಿಣಾಮದಿಂದಾಗಿ ಕಾಂಗ್ರೇಸ್ ಗೆ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಈ ಬಾರಿ ಮಹಿಳಾ ಸಮುದಾಯದ ಮತಗಳು ಸಿಗಲಿವೆ ಎಂಬ ಮಾತುಗಳು ಕೇಳಿಬಂದಿದೆ. ಈಗಾಗಲೇ ಕಾಂಗ್ರೇಸ್ ನಾಯಕರು ಬರೋಬ್ಬರಿ 20 ಕ್ಷೇತ್ರಗಳಲ್ಲಿ ನಮ್ಮ ಅಭ್ಯರ್ಥಿಗಳು ಗೆಲುವು ಸಾಧಿಸುತ್ತಾರೆ ಎಂಬ ವಿಶ್ವಾಸದಲ್ಲಿದ್ದಾರೆ.

ಮಹಿಳೆ ಹಾಗೂ ಯುವಕರನ್ನ ಗುರಿಯಾಗಿಟ್ಟುಕೊಂಡು ಕಾಂಗ್ರೇಸ್ ಪಂಚ ಗ್ಯಾರಂಟಿಗಳನ್ನ ನೀಡಿದೆ. ಮನೆಯ ಗೃಹಿಣಿಯರಿಗೆ ತಿಂಗಳಿಗೆ 2 ಸಾವಿರ ರೂ. ಸಹಾಯ ಧನ. ಪ್ರತಿ ಮನೆಗೆ ತಿಂಗಳಿಗೆ 200 ಯುನಿಟ್ ವರೆಗೆ ಉಚಿತ ವಿದ್ಯುತ್, ಪದವೀಧರರಿಗೆ ತಿಂಗಳಿಗೆ 3 ಸಾವಿರ ರೂ. ಸರ್ಕಾರಿ ಬಸ್‌ಗಳಲ್ಲಿ ಮಹಿಳೆಯರಿಗೆ ಉಚಿತ ಪ್ರಯಾಣ, ಬಿಪಿಎಲ್ ಕಾರ್ಡ್‌ದಾರರಿಗೆ ಪ್ರತಿ ವ್ಯಕ್ತಿಗೆ 10 ಕೆಜಿ ಉಚಿತ ಅಕ್ಕಿಯನ್ನ ಸಿದ್ದರಾಮಯ್ಯ ಸರ್ಕಾರ ನೀಡಿದೆ. ಹೀಗಾಗಿ ರಾಜ್ಯದಲ್ಲಿ ಸಿದ್ದರಾಮಯ್ಯ ಅವರ ಹವಾ ಹೆಚ್ಚಾಗಿದ್ದು, ರಾಜ್ಯದ ಜನತೆ ಈ ಲೋಕ ಸಭಾ ಚುನಾವಣೆಯಲ್ಲಿ ಕಾಂಗ್ರೇಸ್ ಕೈ ಹಿಡಿಯಲಿದೆ ಎನ್ನ

ವರ್ಷಾರಂಭದಲ್ಲೇ ಮೂರಂಕಿ ತಲುಪಿದ ಡೆಂಗಿ

● ವರ್ಷದ ಪ್ರಾರಂಭದಲ್ಲೇ ಜಿಲ್ಲೆಯಾದ್ಯಂತ ಡೆಂಗಿ ಪ್ರಕರಣಗಳು ಊಹೆಗೂ ಮೀರಿ ಹೆಚ್ಚಳವಾಗಿದ್ದು ಆತಂಕಕ್ಕೆ ಕಾರಣ

• ಉದಯವಾಹಿನಿ ಚಿತ್ರದುರ್ಗ

ವರ್ಷದ ಪ್ರಾರಂಭದಲ್ಲೇ ಜಿಲ್ಲೆಯಾದ್ಯಂತ ಡೆಂಗಿ ಪ್ರಕರಣಗಳು ಊಹೆಗೂ ಮೀರಿ ಹೆಚ್ಚಳವಾಗಿದ್ದು ಆತಂಕಕ್ಕೆ ಕಾರಣವಾಗಿದೆ. 2024ರ ಜನವರಿಯಿಂದ ಮೇ 16ರವರೆಗೆ ಬರೋಬ್ಬರಿ 200 ಜನ ಡೆಂಗಿಯಿಂದ ಬಳಲಿದ್ದಾರೆ. ನಗರ ವ್ಯಾಪ್ತಿಯಲ್ಲಿ ಹೆಚ್ಚಿನ ಪ್ರಕರಣ ದಾಖಲಾಗುತ್ತಿರುವ ಕಾರಣ ಜಿಲ್ಲೆಯ ಉಳಿದೆಲ್ಲಾ ತಾಲ್ಲೂಕುಗಳಿಗಿಂತ ಇಲ್ಲಿ ರೋಗಿಗಳ ಸಂಖ್ಯೆ ಏರಿಕೆ ಆಗುತ್ತಿದೆ. ಚಳ್ಳಕೆರೆ, ಹಿರಿಯೂರು, ಹೊಳಲ್ಕೆರೆ, ಹೊಸದುರ್ಗ ಹಾಗೂ ಮೊಳಕಾಲ್ಮುರು ಭಾಗದಲ್ಲಿ ತೀವ್ರತೆ ಕಡಿಮೆಯಿದೆ.

ಸ್ವಚ್ಛತೆಯ ನಿರ್ಲಕ್ಷ್ಯ ಹಾಗೂ ಬೇಸಿಗೆಯಲ್ಲಿ ನೀರಿನ ಅಭಾವದಿಂದ ಮನೆಗಳಲ್ಲಿ ಸಂಗ್ರಹಿಸಿಡಲಾದ ನೀರಿನ ಸಂಗ್ರಹಾಗಾರಗಳನ್ನು ಸ್ವಚ್ಛಗೊಳಿಸದೇ ಇರುವುದರಿಂದ ರೋಗ ಉಲ್ಬಣಿಸಿರುವುದು ಸ್ಪಷ್ಟವಾಗುತ್ತಿದೆ. ತಾಪಮಾನ ಏರಿಕೆಯಿಂದ ಹೈರಾಣದ ಜನರ ಮೇಲೆ ಡೆಂಗಿ ಕಾರ್ಮೋಡ ಆವರಿಸಿದೆ. ಸಾಮಾನ್ಯವಾಗಿ ಡೆಂಗಿ ಮುಂಗಾರು ಸಂದರ್ಭದಲ್ಲಿ ಹೆಚ್ಚು. ಆದರೆ ಈ ಬಾರಿ ಸಕಾಲಕ್ಕೆ ಮಳೆ ಬಾರದಿದ್ದರೂ ರೋಗ ಹೆಚ್ಚಾಗಿದೆ. ತೊಟ್ಟಿ, ಬಿಂದಿಗೆಗಳಲ್ಲಿ ಹೆಚ್ಚು ದಿನ ನೀರಿನ ಸಂಗ್ರಹವೇ ಇದಕ್ಕೆ ಕಾರಣ ಎನ್ನಲಾಗುತ್ತಿದೆ. ತೊಟ್ಟಿ ಬಿಂದಿಗೆಗಳ ಮುಚ್ಚಳ ಮುಚ್ಚದಿದ್ದಾಗ, ಡೆಂಗಿ ಹರಡುವ ಏಡಿಸ್ ಈಜಿಪ್ಟೈ ಸೊಳ್ಳೆ ಸಂತಾನೋತ್ಪತ್ತಿ ಮಾಡುತ್ತದೆ. ನೀರಿನ ಅಭಾವದಿಂದ ನೀರನ್ನು ತೆರವುಗೊಳಿಸದ್ದರಿಂದ ಸೊಳ್ಳೆಗಳ ಉತ್ಪತ್ತಿ ಆಗಿ ಸಮಸ್ಯೆ ಉಂಟಾಗಿದೆ ಎಂದು ಆರೋಗ್ಯ ಇಲಾಖೆ ವೈದ್ಯರು ಅಂದಾಜಿಸಿದ್ದಾರೆ.

ಈ ಬಾರಿ ಜಿಲ್ಲೆಯಲ್ಲಿ ಜನವರಿಯಿಂದ ಮೇ ವರೆಗೆ ಪ್ರಕರಣಗಳು ಮೂರಂಕಿ ದಾಖಲಿಸಿವೆ. ಮಳೆಗಾಲ ತೀವ್ರಗೊಂಡರೆ ಸಮಸ್ಯೆ ಮತ್ತಷ್ಟು ಹೆಚ್ಚಳವಾಗುವ ಸಾಧ್ಯತೆಯಿದೆ. ಜಿಲ್ಲೆಯಲ್ಲಿ ಈವರೆಗೆ 1,765 ಶಂಕಿತ ಪ್ರಕರಣಗಳನ್ನು ಗುರುತಿಸಲಾಗಿದೆ. ಅದರಲ್ಲಿ 1,417 ಜನರನ್ನು ಪರೀಕ್ಷೆಗೆ ಒಳಪಡಿಸಿದ್ದು, 200 ಪ್ರಕರಣ ಖಚಿತಗೊಂಡಿವೆ. ಜಿಲ್ಲಾ ಆಸ್ಪತ್ರೆ ಹಾಗೂ ತಾಲ್ಲೂಕು ಕೇಂದ್ರದಲ್ಲಿ ಚಿಕಿತ್ಸೆ ಪಡೆದು ಗುಣಮುಖರಾಗಿದ್ದಾರೆ. ಪ್ರಕರಣ ಹೆಚ್ಚಾಗುತ್ತಿರುವುದನ್ನು ಗಮನಿಸಿದ ಆರೋಗ್ಯ ಇಲಾಖೆ ರೋಗ ಹರಡುವಿಕೆ ಹಾಗೂ ಅದರ ಲಕ್ಷಣಗಳ ಕುರಿತು ನಾಗರಿಕರಲ್ಲಿ ಅರಿವು ಮೂಡಿಸಲು ಮುಂದಾಗಿದೆ. ನಗರದ ಸ್ವಾಮಿ ವಿವೇಕಾನಂದ ನಗರ, ಜೋಗಿಮಟ್ಟಿ ರಸ್ತೆ, ಸ್ಟೇಡಿಯಂ ರಸ್ತೆ, ದರ್ಜಿ ಕಾಲೊನಿ, ಗೋಪಾಲಪುರ ರಸ್ತೆ, ಹಿಮ್ಮತನಗರ, ರಾಮ್‌ದಾಸ್ ಕಾಂಪೌಂಡ್, ನೆಹರೂ ನಗರ, ಬುರುಜನಹಟ್ಟಿ, ಕುಂಬಾರ ಬೀದಿ, ಕಾಮನಬಾವಿ ಸೇರಿದಂತೆ ಸೋಂಕು ಹೆಚ್ಚಳದ ಪ್ರದೇಶಗಳಿಗೆ ಹೆಚ್ಚಿನ ಗಮನಹರಿಸಿದೆ. ಶೇಖರಿಸಿಟ್ಟ ನೀರನ್ನು ಒಂದು ವಾರದ ನಂತರ ಉಪಯೋಗಿಸಬಾರದು. ತೊಟ್ಟಿಗಳನ್ನು ಆಗಿಂದಾಗ್ಗೆ ಸ್ವಚ್ಛಗೊಳಿಸಿಕೊಳ್ಳಬೇಕು. ಸೊಳ್ಳೆ ಪರದೆಗಳನ್ನು ತಪ್ಪದೆ ಬಳಸಿ, ಮೈತುಂಬಾ ಬಟ್ಟೆ ಧರಿಸಬೇಕು. ಮನೆ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಜತೆಗೆ ಟೈರ್, ಚಿಪ್ಪು, ಖಾಲಿ ಬಾಟಲಿಗಳಲ್ಲಿ ನೀರು ನಿಲ್ಲದಂತೆ ಎಚ್ಚರವಹಿಸಬೇಕು' ಎನ್ನುತ್ತಾರೆ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್.

> ಇದ್ದಕ್ಕಿದ್ದಂತೆ ತೀವ್ರ ಜ್ವರ, ವಿಪರೀತ ತಲೆನೋವು, ಕಣ್ಣುಗಳ ಹಿಂಭಾಗ ನೋವು, ಮಾಂಸಖಂಡ ಮತ್ತು ಕೀಲುಗಳಲ್ಲಿ ವಿಪರೀತ ನೋವು ಕಾಣಿಸಿಕೊಳ್ಳುತ್ತದೆ. ಬಾಯಿ, ಮೂಗು ಮತ್ತು ಒಸಡುಗಳಿಂದ ರಕ್ತಸ್ರಾವ ಮತ್ತು ಚರ್ಮದ ಮೇಲೆ ಅಲ್ಲಲ್ಲಿ ರಕ್ತಸ್ರಾವದ ಗುರುತುಗಳು ಕಾಣಿಸಿಕೊಳ್ಳುವುದು ಡೆಂಗಿ ಲಕ್ಷಣಗಳಾಗಿವೆ. ಹೆಚ್ಚಿನ ತಾಪಮಾನ ಕೂಡ ಪ್ರಕರಣಗಳು ಹೆಚ್ಚಲು ಕಾರಣವಾಗಿದೆ -ವೈದ್ಯರು

ಉದಯವಾಹಿನಿ ಚಿತ್ರ

ಮಳೆಗಾಲದಲ್ಲಿ ತೀವ್ರಗೊಂಡ ಸಮಸ್ಯೆ, ಜನರ ಮೇಲೆ ಡೆಂಗಿ ಕಾರ್ಮೋಡ

> ನೀರು ಸರಬರಾಜು ವ್ಯತ್ಯಯದ ಕಾರಣ ಮನೆಗಳಲ್ಲಿ ನೀರು ಸಂಗ್ರಹಿಸಿಟ್ಟುಕೊಳ್ಳುವುದು ಅನಿವಾರ್ಯವಾಗಿದೆ. ಹೀಗಾಗಿ ಈ ಬಾರಿ ಡೆಂಗಿ ಪ್ರಕರಣ ಅಧಿಕವಾಗಿದೆ. ಆದರೆ ಗಂಭೀರ ಪ್ರಕರಣಗಳು ಎಲ್ಲಿಯೂ ಕಂಡು ಬಂದಿಲ್ಲ. ಲಾರ್ವಾ ಸಮೀಕ್ಷೆ ಕೈಗೊಳ್ಳಲಾಗಿದೆ.
> – ಡಾ.ಚಂದ್ರಶೇಖರ್ ಕಂಬಾಳಿಮಠ್, ಜಿಲ್ಲಾ ಸರ್ವೇಕ್ಷಣಾಧಿಕಾರಿ

ನೀರು ನಿಲ್ಲದಂತೆ ಎಚ್ಚರಿಕೆ ವಹಿಸಿ

ಸೋಂಕು ಹೊಂದಿದ ಏಡಿಸ್ ಈಜಿಪ್ಟೈ ಸೊಳ್ಳೆಯ ಕಚ್ಚುವಿಕೆಯಿಂದ ಒಬ್ಬರಿಂದ ಒಬ್ಬರಿಗೆ ಡೆಂಗಿ ಹರಡುತ್ತದೆ. ಈ ಸೊಳ್ಳೆಗಳು ಸಾಮಾನ್ಯವಾಗಿ ಸ್ವಚ್ಛ ನೀರಿನಲ್ಲಿ ಸಂತಾನಾಭಿವೃದ್ಧಿ ಮಾಡುತ್ತವೆ ಹಾಗೂ ಹಗಲು ಹೊತ್ತಿನಲ್ಲಿ ಮನುಷ್ಯರನ್ನು ಕಚ್ಚುತ್ತವೆ. ನೀರಿನ ಶೇಖರಣೆಗಳಾದ ಸಿಮೆಂಟ್ ತೊಟ್ಟಿ, ಡ್ರಮ್ಮು, ಬ್ಯಾರೆಲ್, ಮಣ್ಣಿನ ಮಡಿಕೆ ಮುಂದಾದ ಕಡೆ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕಿದೆ.

ನಗರದ ವಿಹಾರಿ ಢಾಬಾದಲ್ಲಿ ಅಕ್ರಮ ಮದ್ಯ ಮಾರಾಟ: ಜಗದೀಶ್

• ಉದಯವಾಹಿನಿ ಸಿಂಧನೂರು

ಲೋಕಸಭಾ ಸಾರ್ವತ್ರಿಕ ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿ ಇದ್ದರು ಸಹ ಸಿಂಧನೂರು ನಗರದಲ್ಲಿ ಬರುವ ವಿಹಾರಿ ಢಾಬಾದಲ್ಲಿ ಅಕ್ರಮ ಮದ್ಯ ಮಾರಾಟ ದಂಧೆ ನಾಯಿ ಬಾಲ ಕೊಡೆಗಳನಂತೆ ತಲೆ ಎತ್ತಿದ್ದು ನೋಡಿದರೆ. ಅಬಕಾರಿ ಇಲಾಖೆ ಅಧಿಕಾರಿಗಳು ಶಾಮೀಲಾಗಿ ಇಂತಹಾ ಅಕ್ರಮ ಮದ್ಯ ಮಾರಾಟ ವಿರುದ್ಧ ಯಾವುದೇ ಕ್ರಮ ಜರುಗಿಸದೇ ಕಣ್ಣು ಮುಚ್ಚಿ ಕುರುಡನಂತೆ ನಟನೆ ಮಾಡುವ ಅಧಿಕಾರಿಗಳು ಅಬಕಾರಿ ಇಲಾಖೆ ಯಲ್ಲಿ ಇದ್ದಾರೆ ಎಂದು ಪ್ರಜಾ ಜಾಗೃತಿ ಸಂಘಟನೆ ತಾಲ್ಲೂಕು ಸಮಿತಿ ಆರೋಪಿಸಿದರು.

ನಂತರ ತಾಲ್ಲೂಕು ತಹಶೀಲ್ದಾರ್ ಹಾಗೂ ಅಬಕಾರಿ ಇಲಾಖೆ ಅಧಿಕಾರಿಗಳ ಮನವಿ ಪತ್ರ ಸಲ್ಲಿಸಿ ನಂತರ ಮಾತನಾಡಿದ ಸಮಿತಿಯ ಅಧ್ಯಕ್ಷರಾದ ಹೆಚ್ ಜಗದೀಶ ವಕೀಲರು ಚುನಾವಣೆ ನೀತಿ ಸಂಹಿತೆ ಜಾರಿಯಲ್ಲಿ ಇದ್ದರೂ ಸಹ ಅಕ್ರಮ ಮದ್ಯ ಮಾರಾಟ ನಗರದ ವಿಹಾರಿ ಢಾಬಾದಲ್ಲಿ ರಾಜಾರೋಷವಾಗಿ ನಡೆಯುತ್ತಿದೆ. ಎಂದು ದಿ. 07-3-2024 ರಂದು ನಿರೀಕ್ಷಕರಾದ ಅಬಕಾರಿ ಇಲಾಖೆಗೆ ಮೌಖಿಕವಾಗಿ ಲೀಟರ್ ಮೂಲಕ ತಿಳಿಸಿದ್ದೇವೆ. ಆದರೂ ಸಹ ಅಬಕಾರಿ ಅಧಿಕಾರಿಗಳು ಅಕ್ರಮ ಮದ್ಯ ಮಾರಾಟ ದಂಧೆಕೋರರು ಮೇಲೆ ಯಾವುದೇ ಕ್ರಮ ಕೈಗೊಂಡಿರುವುದಿಲ್ಲ. ಎಂದು ಮತ್ತೊಮ್ಮೆ ಮಗದೊಮ್ಮೆ ತಾಲ್ಲೂಕು ತಹಶೀಲ್ದಾರಿಗೂ ಹಾಗೂ ಅಬಕಾರಿ ಇಲಾಖೆ ಅಧಿಕಾರಿಗಳಿಗೆ ಮನವಿ ಪತ್ರ ಸಲ್ಲಿಸಿದಾಗ ತಕ್ಷಣ ಎಚ್ಚೆತ್ತುಕೊಂಡು ಅಬಕಾರಿ ಇಲಾಖೆ ಅಧಿಕಾರಿ ಮಮತಾ ಮೇಡಂ ಹಾಗೂ ಸಿಬ್ಬಂದಿ ವರ್ಗ ಹಾಗೂ ಕಂಪ್ಲೀಟ್ ದಾರ ಜೊತೆಗೆ ಆಗಮಿಸಿ. ಅಕ್ರಮ ಮದ್ಯ ಮಾರಾಟ ಮಾಡುವ ವಿಹಾರಿ ಢಾಬಾ ದಾಳಿ ಮಾಡಿದಾಗ ಅಲ್ಲಿರುವ ಢಾಬದ ಕೆಲವು ಹುಡುಗರು ಮದ್ಯವನ್ನು ಬೈಕ್ ಮೂಲಕ ಬೇರೆ ಕಡೆಗೆ ಕೇಳಿಸುವುದು ಕಂಡು ಬಂತು. ಅಕ್ರಮ ಮದ್ಯ ಮಾರಾಟ ಇಲಾಖೆಯ ಎದುರಿಗೆ ರಾಜಾರೋಷವಾಗಿ ನಡೆಯುತ್ತಿದ್ದನ್ನು. ಅಧಿಕಾರಿ ಮಮತಾ ಮೇಡಂ ಅವರು ಕಣ್ಣಾರೆ ಕಂಡು. ಅಲ್ಲಿರುವ ಕೆಲವೇ ಕೆಲವು ಮದ್ಯವನ್ನು ವಶಪಡಿಸಿಕೊಂಡು. ಕಾಟಾಚಾರಕ್ಕೆ ಢಾಬಾ ಮಾಲೀಕನ ಮೇಲೆ ಕೇಸ್ ದಾಖಲಿಸಿಕೊಂಡಿದ್ದಾರೆ. ಎಂದು ಪ್ರಜಾ ಜಾಗೃತಿ ಸಂಘಟನೆ ತಾಲ್ಲೂಕು ಸಮಿತಿ ಅಧ್ಯಕ್ಷರಾದ ಜಗದೀಶ್ ವಕೀಲರು ಅಧಿಕಾರಿಗಳು ಮೇಲೆ ಆರೋಪ ಮಾಡಿ ದರು. ಈ ಸಂದರ್ಭದಲ್ಲಿ ಬಸವರಾಜ ಕುರುಗೋಡು ಇದ್ದರು.

ಉದಯವಾಹಿನಿ ಚಿತ್ರ

ಪ್ರಜಾ ಜಾಗೃತಿ ಸಂಘಟನೆ ಆರೋಪ

ಬಾಲಾಜಿ ಸಕ್ಕರೆ ಕಾರ್ಖಾನೆಯಲ್ಲಿ ಮಣ್ಣು ಪರೀಕ್ಷಾ ಕೇಂದ್ರ

• ಉದಯವಾಹಿನಿ ಮುದ್ದೇಬಿಹಾಳ

ಮುದ್ದೇಬಿಹಾಳ ತಾಲ್ಲೂಕಿನ ಯರಗಲ್‌ಮದರಿ ಬಾಲಾಜಿ ಸಕ್ಕರೆ ಕಾರ್ಖಾನೆಯಲ್ಲಿ ಈಗ ಮಣ್ಣಿನ ಪರೀಕ್ಷಾ ಕೇಂದ್ರವನ್ನು ಶುಕ್ರವಾರ ಆರಂಭವಾಗಿದೆ. ತಾಲ್ಲೂಕಿನ ರೈತರು ಇದರ ಲಾಭವನ್ನು ಪಡೆಯಬೇಕು ಎಂದು ಮಣ್ಣು ಪರೀಕ್ಷೆ ಕೇಂದ್ರ ಲೋಕಾರ್ಪಣೆ ಮಾಡಿದ ಬಾಲಾಜಿ ಸಕ್ಕರೆ ಕಾರ್ಖಾನೆಯ ಮಾಲೀಕರು ಸಂಘದ ಅಧ್ಯಕ್ಷ ಹಣಮಂತಗೌಡ ಪಾಟೀಲ್ ತಿಳಿಸಿದರು

ರೈತರು ತಮ್ಮ ಜಮೀನಿನ ಪೋಷಕಾಂಶಗಳಾದ ರಸಸಾರ, ಲವಣಾಂಶ, ಸಾವಯವ ಇಂಗಾಲ, ಸಾರಜನಕ, ರಂಜಕ, ಗಂಧಕ, ಪೂಟ್ಯಾಶ್, ಕೊಬ್ಬಿನಾಂಶ, ತಾಮ್ರ, ಮ್ಯಾಂಗನೀಸ್, ಬೋರಾನ್, ಈ ಎಲ್ಲಾ ರೀತಿಯ ಪೋಷಕಾಂಶವನ್ನು ಪರೀಕ್ಷಿಸಿ ಮಣ್ಣಿನಲ್ಲಿ ಪೋಷಕಾಂಶಗಳ ಕೊರತೆ ಕಂಡು ಬಂದಲ್ಲಿ ಅದಕ್ಕೆ ಸೂಕ್ತವಾದ ಗೊಬ್ಬರ ಒದಗಿಸಲಾಗುತ್ತದೆ ಮತ್ತು ವಿಶೇಷವಾಗಿ ರೈತರಿಗೆ ವಿಶೇಷ ರಿಯಾಯಿತಿ ದರದಲ್ಲಿ ಮಣ್ಣಿನ ಪರೀಕ್ಷೆ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

ಈ ವೇಳೆ ನಿರ್ದೇಶಕರಾದ ಅಧಿಕಗೌಡ ಪಾಟೀಲ್, ಪ್ರಜ್ವಲಗೌಡ ಪಾಟೀಲ್, ರಾಹುಲ್ ಪಾಟೀಲ್, ಶ್ರೀನಿವಾಸ ಅರಕೇರಿ, ಅಮೃತ ಪ್ರೋಟಲೇಜರ್ ಎಂ.ಡಿ.ನಾಗರಾಜನ್, ಪಿಆರ್ ಒ ಮಾರುತಿ ಗುರುವ, ಕಬ್ಬು ವಿಭಾಗೀಯ ಅಧಿಕಾರಿಗಳಾದ ಗಿರೀಶಗೌಡ ಪಾಟೀಲ್, ಜಿಎಂಟೇಕ್ ಪಿ.ಅಲ್ವನ್ ರಾಜು, ಪ್ರವೀಣ ರಾಠೋಡ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಉದಯವಾಹಿನಿ ಚಿತ್ರ

ರೈತರಿಗೆ ವಿಶೇಷ ರಿಯಾಯಿತಿ

ರಸ್ತೆ ಕಾಮಗಾರಿ ಅಪೂರ್ಣ: ಸವಾರರಿಗೆ ಸಂಕಷ್ಟ

• ಉದಯವಾಹಿನಿ ಕಡರನಾಯ್ಕನಹಳ್ಳಿ

ಕಡರನಾಯ್ಕನಹಳ್ಳಿಯಿಂದ ಕೊಕ್ಕನೂರು, ಜಿ.ಟಿ. ಕಟ್ಟೆ, ಮೂಗಿನಗೊಂದಿಯವರೆಗಿನ ರಸ್ತೆ ಕಾಮಗಾರಿ 2 ವರ್ಷಗಳಿಂದ ನಡೆಯುತ್ತಿದ್ದರೂ, ಪೂರ್ಣಗೊಂಡಿಲ್ಲ. ಇದರಿಂದಾಗಿ ವಾಹನ ಸವಾರರು ಸಂಕಷ್ಟ ಎದುರಿ ಸುತ್ತಿದ್ದಾರೆ. ಕಡರನಾಯ್ಕನಹಳ್ಳಿ ಕೊಕ್ಕನೂರು ಮಧ್ಯದ ಭದ್ರಾ ಕಾಲುವೆಯಿಂದ ಜಿ.ಟಿ. ಕಟ್ಟೆ ಮತ್ತು ಮೂಗಿನಗೊಂದಿವರೆಗಿನ ರಸ್ತೆ ಕಾಮಗಾರಿಗೆ 4.75 ಕೋಟಿ ಮೊತ್ತದ ಟೆಂಡರ್ ಅನ್ನು ರಾಯಚೂರು ಮೂಲದ ಗುತ್ತಿಗೆದಾರ ವಿರುಪಾಕ್ಷಪ್ಪ ಬಳೆ ಎಂಬುವರು ಪಡೆದಿದ್ದಾರೆ.

2 ವರ್ಷಗಳಿಂದಲೂ ಗುತ್ತಿಗೆದಾರ ಇಚ್ಛೆ ಬಂದಾಗ ಕಾಮಗಾರಿ ಪ್ರಾರಂಭಿಸುತ್ತಾರೆ. ಮತ್ತೆ 4-5 ತಿಂಗಳು ಕೆಲಸ ನಿಲ್ಲಿಸುತ್ತಾರೆ. ಭತ್ತದ ಕಟಾವು ಪ್ರಾರಂಭವಾಗಿದೆ. ಟ್ರ್ಯಾಕ್ಟರ್ ಮೂಲಕ ಹುಲ್ಲನ್ನು ಸಾಗಿಸುವುದೇ ಸವಾಲಾಗಿದೆ. ಅಲ್ಲಲ್ಲಿ ರಸ್ತೆಗೆ ಜೆಲ್ಲಿ ಹರಡಲಾಗಿದೆ. ಮತ್ತೊಂದೆಡೆ ರಸ್ತೆಯುದ್ದಕ್ಕೂ ಜೆಲ್ಲಿ ಕಲ್ಲುಗಳ ಗುಡ್ಡೆಗಳನ್ನು ಹಾಕಲಾಗಿದೆ, ಕೆಲವೆಡೆ ಕಳಪೆ ಮಣ್ಣು ಹಾಕಲಾಗಿದೆ. ಇದರಿಂದ ದ್ವಿಚಕ್ರ ವಾಹನ ಸವಾರರಿಗೆ ಹೆಚ್ಚಿನ ಸಮಸ್ಯೆ ಆಗುತ್ತಿದೆ. ಈ ರಸ್ತೆಯಲ್ಲಿ ದ್ವಿಚಕ್ರ ವಾಹನ ಸವಾರರು ಬಿದ್ದು ಗಾಯಗೊಂಡಿದ್ದಾರೆ. ಗುತ್ತಿಗೆದಾರರಿಗೆ ಈಗಾಗಲೇ ನೋಟಿಸ್ ನೀಡಿದ್ದೇವೆ. ಕಪ್ಪು ಪಟ್ಟಿಗೆ ಸೇರಿಸಲು ಶಿಫಾರಸು ಮಾಡಿದ್ದೇವೆ. ಶೀಘ್ರವೇ ಪರ್ಯಾಯ ವ್ಯವಸ್ಥೆಯ ಮೂಲಕ ಕಾಮಗಾರಿ ಪೂರ್ಣಗೊಳಿಸಲಾಗುವುದು' ಎಂದು ಎಇಇ ಶಿವಮೂರ್ತಿ ತಿಳಿಸಿದರು.

ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸಬೇಕು. ಇಲ್ಲವಾದಲ್ಲಿ ಲೋಕೋಪಯೋಗಿ ಇಲಾಖೆ ಬಳಿ ಧರಣಿ ನಡೆಸುತ್ತೇವೆ' ಜಿ.ಟಿ.ಕಟ್ಟೆಯ ರಮೇಶ್ ಎಚ್ಚರಿಸಿದ್ದಾರೆ.

ಈ ಭಾಗದ ಜನರು ಈ ರಸ್ತೆಯನ್ನೇ ಹೆಚ್ಚಾಗಿ ಅವಲಂಬಿಸಿದ್ದಾರೆ. ಶೀಘ್ರವೇ ಕಾಮಗಾರಿಯನ್ನು ಪೂರ್ಣಗೊಳಿಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ಉದಯವಾಹಿನಿ ಚಿತ್ರ

ರಸಗೊಬ್ಬರ, ಬೀಜ, ಕೀಟನಾಶಕ ಮಾರಾಟಗಾರರ ಪೂರ್ವಭಾವಿ ಸಭೆ

• ಉದಯವಾಹಿನಿ ಸಿರುಗುಪ್ಪ

ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯಿತಿ, ಕೃಷಿ ಇಲಾಖೆಗಳ ಸಹಯೋಗದಲ್ಲಿ ನಡೆದ 2024-25ನೇ ಸಾಲಿನ ಮುಂಗಾರು ಹಂಗಾಮಿ ರಸಗೊಬ್ಬರ, ಬೀಜ, ಕೀಟನಾಶಕ ಹಾಗೂ ಕೃಷಿ ಪರಿಕರಗಳ ಮಾರಾಟಗಾರರ ಪೂರ್ವಭಾವಿ ಸಭೆಯನ್ನು ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಡಾ.ಕೆ.ಎಮ್.ತಿರುಮಲೇಶ ಅವರು ಉದ್ಘಾಟಿಸಿದರು.

ನಂತರ ಮಾತನಾಡಿ ಕಳೆದೆರಡು ದಿನಗಳಿಂದ ತಾಲ್ಲೂಕಿನೆಲ್ಲೆಡೆ ಉತ್ತಮ ಮಳೆಯಾಗಿದ್ದರಿಂದ ಕೃಷಿ ಚಟುವಟಿಕೆಗಳು ಗರಿಗೆದರಿವೆ. ತಾಲ್ಲೂಕಿಗೆ ಸಾಕಷ್ಟು ಬಿತ್ತನೆ ಮತ್ತು ಗೊಬ್ಬರದ ದಾಸ್ತಾನು ಇದೆ. ಹಾವೇರಿ ಗೋಲಿಬಾರ್ ಪ್ರಕರಣದ ನಂತರ ಸರ್ಕಾರ ಎಚ್ಚರವಹಿಸಿ ಸರಿಯಾದ ಸಮಯಕ್ಕೆ ದಾಸ್ತಾನಿನ ಸಾಗಣೆ ಮಾಡುತ್ತಿದ್ದು, ಗೊಬ್ಬರದ ಅಭಾವ ಸೃಷ್ಟಿ ಮಾಡಿ ದರ ಹೆಚ್ಚಿಸುವ ಯೋಜನೆ ರೂಪಿಸಿದಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು. ಕಾನೂನಿನ ಅನ್ವಯದಂತೆ ಎಲ್ಲಾ ಮಾರಾಟಗಾರರು ಪರವಾನಗಿ ನವೀಕರಣ ಮಾಡಿಸುವುದು. ಸರಿಯಾದ ಸಮಯಕ್ಕೆ ಲೆಕ್ಕ ಪರಿಶೋದನೆ, ದಾಸ್ತಾನು ವಿವರ ಹಾಗೂ ಸಂಬಂದಿಸಿದ ಧರಪಟ್ಟಿ ಹಾಕುವುದು. ಎಮ್.ಆರ್.ಪಿ ದರದಲ್ಲೇ ಮಾರಾಟ ಮಾಡುವುದು, ಅವಧಿ ಮುಗಿದ ಪರಿಕರಗಳು ಅಂಗಡಿ ಹಾಗೂ ಗೋದಾಮಿನಲ್ಲಿರದಂತೆ ನಿಗಾವಹಿಸಬೇಕು. ಇದೇ ವೇಳೆ ಸಹಾಯಕ ಕೃಷಿ ನಿರ್ದೇಶಕ ಎಸ್.ಬಿ.ಪಾಟೀಲ್, ತಾಂತ್ರಿಕ ಅಧಿಕಾರಿಗಳಾದ ಗರ್ಜಪ್ಪ, ನಿಸ್ಸಾರ್ ಅಹಮದ್, ಕೃಷಿ ಅಧಿಕಾರಿಗಳಾದ ಬಾಲಾಜಿ ನಾಯ್ಕ್, ಪರಮೇಶ್ವರರೆಡ್ಡಿ, ಪುರಷೋತ್ತಮ, ಬೀಜ, ರಸಗೊಬ್ಬರ, ಕೀಟನಾಶಕ ಮಾರಾಟಗಾರರ ಸಂಘದ ಅಧ್ಯಕ್ಷ ಮಾದವಯ್ಯ ಶೆಟ್ಟಿ, ಉಪಾಧ್ಯಕ್ಷ ಎಸ್.ವೀರೇಶ, ಡೀಲರ್ಸ್‌ಗಳಾದ ನಾಗನಗೌಡ, ವೆಂಕಣ್ಣ, ಕಂದಗಲ್ ವೀರಣ್ಣ, ಶರಣಬಸವನಗೌಡ, ನಾಗರಾಜಗೌಡ ಇನ್ನಿತರರಿದ್ದರು.

ಉದಯವಾಹಿನಿ ಚಿತ್ರ

ಬಿತ್ತನೆ ಮತ್ತು ಗೊಬ್ಬರದ ದಾಸ್ತಾನು

> ನಿಮಗೆ ವಿಶ್ವಾಸವಿರುವ ಕಂಪನಿಗಳ ಜೊತೆ ಮಾತ್ರ ಬಿತ್ತನೆ ಬೀಜ, ರಸಗೊಬ್ಬರ, ಕೀಟನಾಶಕಗಳನ್ನು ಖರೀದಿಸಿ ಕಳಪೆಯನ್ನು ತಡೆಗಟ್ಟಿ. ಯಾಕೆಂದರೆ ನೀವು ಮಾರುವ ಬಿತ್ತನೆ ಬೀಜ ಹಾಗೂ ರಸಗೊಬ್ಬರಗಳ ಮೇಲೆ ರೈತರ ಜೀವವೇ ಅಡಗಿರುತ್ತದೆಂದು ತಿಳಿಸಿದರು.
> -ಡಾ.ಕೆ.ಎಮ್.ತಿರುಮಲೇಶ

ಮೊಟ್ಟೆ, ಕೋಳಿ ಮಾಂಸ ದುಬಾರಿ: ಗ್ರಾಹಕರಿಗೆ ಆರ್ಥಿಕ ಹೊರೆ

• ಉದಯವಾಹಿನಿ ಉಡುಪಿ

ಬಿಸಿಲಿನ ಧಗೆಯ ತೀವ್ರತೆಗೆ ಕುಕ್ಕುಟೋದ್ಯಮಕ್ಕೆ ದೊಡ್ಡ ಪೆಟ್ಟು ಬಿದ್ದಿದ್ದು ಮೊಟ್ಟೆ ಹಾಗೂ ಮಾಂಸದ ದರ ವಿಪರೀತ ಹೆಚ್ಚಳವಾಗಿದೆ. ಚಿಲ್ಲರೆ ಮಾರುಕಟ್ಟೆಯಲ್ಲಿ ಕಳೆದ ಒಂದು ವಾರದಲ್ಲಿ ಮೊಟ್ಟೆಯ ದರ ಬರೋಬ್ಬರಿ 1 ಹೆಚ್ಚಳವಾಗಿದೆ. 6.50ಕ್ಕೆ ಸಿಗುತ್ತಿದ್ದ ಮೊಟ್ಟೆ 7.50ಕ್ಕೆ ಮುಟ್ಟಿದೆ.

ಬೆಲೆ ಏರಿಕೆಗೆ ಕಾರಣ: ಉಡುಪಿ ಜಿಲ್ಲೆಯ ಬೇಡಿಕೆಯ ಬಹುಪಾಲು ಕೋಳಿ ಮೊಟ್ಟೆ ದಾವಣಗೆರೆ, ಮೈಸೂರು, ತಮಿಳುನಾಡು, ಆಂಧ್ರಪ್

ದಿನ ಭವಿಷ್ಯ

ರಾಹುಕಾಲ	ಬೆಳಿಗ್ಗೆ	09:00 ರಿಂದ 10:30
ಗುಳಿಕ ಕಾಲ	ಬೆಳಿಗ್ಗೆ	06:00 ರಿಂದ 07:30
ಯಮಗಂಡ ಕಾಲ	ಮಧ್ಯಾಹ್ನ	01:30 ರಿಂದ 03:00

ಮೇಷ ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ಇಂದು ಸಾಲಗಾರನು ನಿಮ್ಮ ಮನೆ ಬಾಗಿಲಿಗೆ ಬರಬಹುದು.

ವೃಷಭ ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ಹೂಡಿಕೆ ಮಾಡುವುದು ಅನೇಕ ಬಾರಿ ನಿಮಗೆ ಪ್ರಯೋಜನಕಾರಿಯೆಂದು ಸಾಬೀತುಪಡಿಸುತ್ತದೆ.

ಮಿಥುನ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸ ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ ನಿಮ್ಮ ತಾಯಿ ಅಥವಾ ತಂದೆಯ ಆರೋಗ್ಯಕ್ಕಾಗಿ ನೀವು ಇಂದು ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗಬಹುದು.

ಕರ್ಕಾಟಕ ಇಂದು ನೀವು ಆರಾಮವಾಗಿರುವ ಭಾವನೆ ಹೊಂದಿರುತ್ತೀರಿ, ಆನಂದಿಸಲು ಸೂಕ್ತ ಮನೋಭಾವದಲ್ಲಿರುತ್ತೀರಿ. ಬ್ಯಾಂಕ್ ವ್ಯವಹರಗಳಲ್ಲಿ ಕಾಳಜಿ ವಹಿಸಬೇಕು. ಕೌಟುಂಬಿಕ ಅಗತ್ಯಗಳಿಗೆ ತಕ್ಷಣದ ಗಮನ ನೀಡಬೇಕು.

ಸಿಂಹ ನಿಮ್ಮ ಬಿಡುವಿನ ಸಮಯವನ್ನು ನಿಸ್ವಾರ್ಥ ಸೇವೆಯಲ್ಲಿ ವಿನಿಯೋಗಿಸಿ. ಇದು ನೀವು ಮತ್ತು ನಿಮ್ಮ ಕುಟುಂಬಕ್ಕೆ ಸಂತೋಷ ನೀಡುತ್ತದೆ. ಯಾರೂ ನಿಮ್ಮ ಪ್ರೀತಿಯನ್ನು ಬೇರ್ಪಡಿಸಲಾಗದು.

ಕನ್ಯಾ ಆರೋಗ್ಯ ಸಂಬಂಧಿತ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ನೀವು ಸ್ವಲ್ಪ ಹೆಚ್ಚುವರಿ ಹಣ ಮಾಡಲು ಯೋಜಿಸುತ್ತದ್ದಲ್ಲಿ ಸುಭದ್ರ ಆರ್ಥಿಕ ಯೋಜನೆಗಳಲ್ಲಿ ಹೂಡಿಕೆ ಮಾಡಿ.

ತುಲಾ ಗರ್ಭಿಣಿಯರಿಗೆ ವಿಶೇಷ ಕಾಳಜಿಯ ದಿನ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ವೈಯಕ್ತಿಕ ಮತ್ತು ಗೌಪ್ಯವಾದ ಮಾಹಿತಿಯನ್ನು ಬಹಿರಂಗಪಡಿಸಬೇಡಿ.

ವೃಶ್ಚಿಕ ಇಂದು ಶಾಂತವಾಗಿ ಒತ್ತಡ ಮುಕ್ತವಾಗಿರಿ. ಇಂದು ನಿಮಗೆ ಅನೇಕ ಹೊಸ ಆರ್ಥಿಕ ಯೋಜನೆಗಳು ದೊರಕುತ್ತವೆ – ಯಾವುದೇ ಬದ್ಧತೆಗೊಳಗಾಗುವ ಮುನ್ನ ಸಾಧಕ ಬಾಧಕಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ.

ಧನಸ್ಸು ನೀವು ಇಂದು ಹಣ ಉಳಿಸುವುದು ಕಷ್ಟ ನೀವು ಇಂದು ಅತಿಯಾಗಿ ಖರ್ಚು ಮಾಡುವ ಅಥವಾ ನಿಮ್ಮ ಪರ್ಸ್ ಕಳೆದುಕೊಳ್ಳುವ ಸಾಧ್ಯತೆಗಳಿವೆ ನಿರ್ಲಕ್ಷ್ಯತನದಿಂದ ಕೆಲವು ಸಮಸ್ಯೆಗಳು ಖಂಡಿತ.

ಮಕರ ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ನಿಮ್ಮ ತಾಯಿಯ ದುಂದು ಗಾರಿಕೆಯನ್ನು ನೋಡಿ ನೀವು ಚಿಂತಿತರಾಗಬಹುದು ಮತ್ತು ಆದ್ದರಿಂದ ನೀವು ಅವರ ಕೋಪದ ಬೇಟೆಯಾಗಬಹದು.

ಕುಂಭ ನಿಮ್ಮ ಕನಸುಗಳು ಹಾಗೂ ವಾಸ್ತವವು ಪ್ರೀತಿಯ ಭಾವಪರವಶತೆಯಲ್ಲಿ ಇಂದು ಸೇರಿಹೋಗುತ್ತವೆ. ಇಂದು ಜನರು ಹೊಗಳಿಕೆಗಳನ್ನು ನೀಡುತ್ತಾರೆ –ಇವುಗಳನ್ನು ನೀವು ಯಾವಾಗಲೂ ಕೇಳಬಯಸಿರುತ್ತೀರಿ.

ಮೀನ ಇಂದು ನಿಮ್ಮ ಯಾವುದೇ ಚಲಿಸಬಲ್ಲ ಆಸ್ತಿಯನ್ನು ಕದಿಯಬಹುದು ಆದ್ದರಿಂದ ಸಾಧ್ಯವಾದಷ್ಟು ಅದರ ಬಗ್ಗೆ ಗಮನ ಹರಿಸಿ. ನಿಮ್ಮ ಮಕ್ಕಳಿಂದ ನೀವು ಕೆಲವು ಪಾಠಗಳನ್ನು ಕಲಿಯಲಿದ್ದೀರಿ.

ಹೇರಿಕೆರೆ ಅಭಿವೃದ್ಧಿಗೊಂಡರೆ ಹತ್ತಾರು ಹಳ್ಳಿಗಳಿಗೆ ನೀರು

● ಈ ಕೆರೆಯಲ್ಲಿ ನೀರು ತುಂಬಿರಲು ಸಮಗ್ರ ಅಭಿವೃದ್ಧಿ ಅವಶ್ಯವಿದೆ, ಹೂಳೆತ್ತಬೇಕಿದೆ, ಒತ್ತುವರಿ ತೆರವುಗೊಳಿಸಬೇಕಿದೆ

• ಉದಯವಾಹಿನಿ ಕುಂದಾಪುರ

ಸುತ್ತಲಿನ ಐದಾರು ಗ್ರಾಮಗಳಿಗೆ ಈ ಹೇರಿಕೆರೆಯ ನೀರು ಆಧಾರವಾಗಬಲ್ಲದು. ದಾಖಲೆಗಳ ಪ್ರಕಾರ 36 ಎಕ್ರೆ ವಿಶಾಲ ಪ್ರದೇಶ ಕೆರೆಗೆ ಇದೆ. ಆದರೆ ಒತ್ತುವರಿ, ಹೂಳು ತುಂಬಿ ಭಾಗಶಃ ಕೆರೆ ಈಗ ವಾಲಿಬಾಲ್ ಆಟಕ್ಕೆ ಬಳಕೆಯಾಗುತ್ತಿದೆ. ಈ ಕೆರೆಯ ಆರೋಗ್ಯ ಕುಸಿಯುತ್ತಿರುವ ಕಾರಣ ಸುತ್ತಲಿನ ಗ್ರಾಮಗಳಲ್ಲಿನ ಜಲಮೂಲವೂ ಬತ್ತತೊಡಗಿದೆ.ದೊಡ್ಡ ಕೆರೆಗೆ ಅಗತ್ಯದಷ್ಟು ಅನುದಾನ ಹೊಂದಿಸಿ ಅಭಿವೃದ್ಧಿಪಡಿಸಬೇಕಿದೆ.

ತಾಲ್ಲೂಕಿನ ಅತಿ ದೊಡ್ಡ ''ಜಲದ ಬಟ್ಟಲು' ಹೇರಿಕೆರೆಯಲ್ಲಿ ನೀರಿನ ಪ್ರಮಾಣ ಕುಸಿದಿದೆ. ಅವಧಿಗೆ ಮೊದಲೇ ಕೆರೆ ಬತ್ತುತ್ತಿರುವುದು ಈ ಭಾಗದ ಜನರಲ್ಲಿ ಕಳವಳ ಮೂಡಿಸಿದೆ. ಎರಡು ಸರ್ವೆ ನಂಬರ್‌ಗಳನ್ನು ಹೊಂದಿ 36 ಎಕ್ರೆ ಜಾಗದಲ್ಲಿ ವಿಶಾಲವಾಗಿ ಈ ಕೆರೆ ಹಬ್ಬಿಕೊಳ್ಳಬೇಕಿತ್ತು. ಆದರೆ ವಾಸ್ತವದಲ್ಲಿ ಹಾಗಿಲ್ಲ.

ಮಳೆ ಕೊರತೆ ಕಾರಣಕ್ಕೆ ಹಲವು ಮದಗ, ಕೆರೆಗಳಲ್ಲಿ ನೀರಿನ ಮಟ್ಟ ಕುಸಿಯುತ್ತಿದ್ದು, ಇಲ್ಲಿಯೂ ಅದೇ ಅವಸ್ಥೆ ಸೃಷ್ಟಿಯಾಗಿದೆ. ಪ್ರಸ್ತುತ ನೀರು ತಳಮಟ್ಟಕ್ಕೆ ಇಳಿದಿದೆ. ಜತೆಗೆ ಪರಿಸರದ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುತ್ತಿದೆ. ಇದರಿಂದ ಈ ಭಾಗದಲ್ಲಿ ಬಾವಿಗಳ ಅಂತರ್ಜಲ ಮಟ್ಟ ದಿನೇ ದಿನೇ ಕುಸಿಯುತ್ತಿದೆ. ಕಳೆದ 5 ವರ್ಷಗಳಿಂದೀಚೆಗೆ ಫೆಬ್ರವರಿ ತಿಂಗಳಲ್ಲಿ ನೀರು ಕ್ಷೀಣಿಸ ಲಾರಂಭಿಸಿದೆ. ಕೆರೆಯ ನಾಲ್ಕು ದಿಕ್ಕುಗಳಲ್ಲಿರುವ ನೀರು ಹರಿಯುವ ತೂಬು ದುರ್ಬಲಗೊಂಡಿದೆ. ಈ ತೂಬಿನ ಮೂಲಕ ಮೂಡ್ಲಕಟ್ಟೆ, ಹೆರಿಬೈಲು ಸಹಿತ ಹತ್ತಾರು ಹಳ್ಳಿಗಳಿಗೆ ಕೆರೆಯ ನೀರು ಸೇರುತ್ತಿದೆ. ಕನಿಷ್ಟ ಪಕ್ಷ ತೂಬನ್ನು ಸ್ವಚ್ಛಗೊಳಿಸಿದರೂ ತತ್ಕಾಲಕ್ಕೆ ಸಾಕಾಗುತ್ತದೆ.

ಈ ಕೆರೆಯಲ್ಲಿ ನೀರು ತುಂಬಿರಲು ಸಮಗ್ರ ಅಭಿವೃದ್ಧಿ ಅವಶ್ಯವಿದೆ. ಹೂಳೆತ್ತಬೇಕಿದೆ. ಒತ್ತುವರಿ ತೆರವುಗೊಳಿಸಬೇಕಿದೆ. ಒತ್ತುವರಿ ತೆರವಿಗೆ ಕಂದಾಯ ಇಲಾಖೆ ಸರ್ವೆ ನಡೆಸಿದ್ದರೂ ಮುಂದಿನ ಕ್ರಮ ನಡೆದೇ ಇಲ್ಲ ಎಂಬ ಟೀಕೆ ಇದೆ. ನರೇಗಾ ಯೋಜನೆಯಡಿ ಹೇರಿಕೆರೆ ಅಭಿವೃದ್ಧಿಗೆ 25 ಲಕ್ಷ ರೂ. ಅನುದಾನ ಮೀಸಲಿಡಲಾಗಿದೆ. ಕೆರೆ ಪುನಶ್ಚೇತನ, ದಂಡೆ ರಚನೆ, ಬದಿ ನಿರ್ವಹಣೆ ಇನ್ನಿತರ ಕೆಲಸಗಳಿಗೆ ಸಣ್ಣನೀರಾವರಿ ಇಲಾಖೆಯಿಂದ ಕಳೆದ ಸಾಲಿನಲ್ಲಿ 1.95 ಕೋಟಿ ರೂ. ಅನುದಾನ ಬಿಡುಗಡೆಗೊಂಡಿದ್ದು ಅಭಿವೃದ್ಧಿ ಕಾಮಗಾರಿ ನಡೆದಿದೆ. ಕೆರೆದಂಡೆ ರಚಿಸಲಾಗಿದೆ. ಆದರೆ ಕೆರೆಯ ಹೂಳು ಸಂಪೂರ್ಣವಾಗಿ ತೆಗೆಯದ ಕಾರಣ ಅಭಿವೃದ್ಧಿ ನಡೆದ ಮರು ವರ್ಷವೇ ನೀರಿಲ್ಲದಂತಾಗಿದೆ. ಕಳೆದ ಸಾಲಿನಲ್ಲಿ ಮಳೆ ಕೊರತೆ ಆಗಿದ್ದರಿಂದ ಈ ಬಾರಿ ಅವಧಿಗೆ ಮೊದಲೇ ಕೆರೆ ಬತ್ತಿದೆ. ಹೂಳೆತ್ತಿದ ಜಾಗದಲ್ಲಿ ಅಷ್ಟಿಷ್ಟು ಎಂಬಂತೆ ನೀರು ಕಾಣುತ್ತಿದೆ. ಉಳಿದ ಜಾಗ ಆಟದ ಮೈದಾನವಾಗಿದೆ.

> ಲಭ್ಯ ಅನುದಾನದಲ್ಲಿ ಹೂಳೆತ್ತಿ,ಕೆರೆದಂಡೆ ಕಟ್ಟಿ ಅಭಿವೃದ್ಧಿ ಮಾಡಲಾಗಿದೆ. ಆದರೆ ದೊಡ್ಡ ಕೆರೆಯಾದ ಕಾರಣ ದೊಡ್ಡ ಮೊತ್ತದ ಅನುದಾನ ಅಗತ್ಯವಿದೆ. ಮುಂದಿನ ದಿನಗಳಲ್ಲಿ ಅನುದಾನ ಲಭ್ಯತೆ ಮೇರೆಗೆ ಕಾಮಗಾರಿ ನಡೆಸಲಾಗುವುದು.
> –ಶಾಂತಾರಾಮ್, ಎ.ಇ., ಸಣ್ಣ ನೀರಾವರಿ ಇಲಾಖೆ, ಉಡುಪಿ

ಉದಯವಾಹಿನಿ ಚಿತ್ರ

> ಬೃಹತ್ ವಿಸ್ತೀರ್ಣದ ತಾಲ್ಲೂಕಿನ ವಿಶಾಲ ಕೆರೆಯಿದು. ಹೂಳು ತುಂಬಿ ಬೇಸಗೆ ಆರಂಭದಲ್ಲೇ ನೀರು ಕಡಿಮೆ ಯಾಗುತ್ತದೆ. ವಾರಾಹಿ ಎಡದಂಡೆ ಕಾಲುವೆ ಯಿಂದ ಹರಿದು ಬರುವ ಬೇಸಿಗೆ ಹಂಗಾಮಿನ ನೀರನ್ನು ಕೆರೆ ಹರಿಸುವ ಕೆಲಸ ನಡೆದರೆ ಉತ್ತಮ. ಒತ್ತುವರಿ ತೆರವು ಕೆಲಸ ನಡೆಯಲಿ.
> –ಉದಯ ಕುಮಾರ್, ಹೇರಿಕೆರೆ

ಸಾವಿರಾರು ಎಕರೆ ಕೃಷಿ ಭೂಮಿಗೆ ಆಸರೆ

ಕೋಣಿ, ಕಂದಾವರ, ಬಸ್ರೂರು, ಜಪ್ತಿ, ಉಳ್ಳೂರು, ಮೂಡ್ಲಕಟ್ಟೆ ಮೊದಲಾದ ಗ್ರಾಮಗಳ ಕುಡಿಯುವ ನೀರಿಗೆ, ಕೃಷಿಗೆ ಆಧಾರವಾಗಿದ್ದ ಕೆರೆಯಿದು. 5 ಗ್ರಾಮಗಳ 10ಕ್ಕೂ ಮಿಕ್ಕಿ ಹಳ್ಳಿಗಳ ಸಾವಿರಾರು ಎಕ್ರೆ ಕೃಷಿ ಭೂಮಿಗೆ ಆಸರೆಯಾಗಿದೆ. ಮೂಡ್ಲಕಟ್ಟೆ ರೈಲ್ವೆ ನಿಲ್ದಾಣ ಹೊಳೆವರೆಗೆ ಹರಿದು ಈ ಕೆರೆಯ ನೀರು ಸೇರುತ್ತದೆ. ಉಳ್ಳೂರು, ಮೂಡ್ಲಕಟ್ಟೆ ಬೈಲಿಗೆ ಇದರ ನೀರು ಉತ್ತಮ ಜಲಾಶ್ರಯ.

ಗುಡುಗು, ಮಿಂಚು, ಸಿಡಿಲಿಗೆ ಎರಡು ಮೇಕೆ ಸಾವು, 40ಸಾವಿರ ಪರಿಹಾರಕ್ಕೆ ಗೋಪಾಲ ಗಾರಂಪಳ್ಳಿ ಆಗ್ರಹ

• ಉದಯವಾಹಿನಿ ಚಿಂಚೋಳಿ

ತಾಲ್ಲೂಕಿನ ಕರ್ಚಖೇಡ ಗ್ರಾಮದಲ್ಲಿ ಗುರುವಾರ ಮಧ್ಯಾಹ್ನ ಸಮಯದಲ್ಲಿ ಕುರಿ ಕಾಯುವಾಗ ಬಿರುಗಾಳಿ ಸಮೇತ ಗುಡುಗು ಮಿಂಚ್ಚು ಸಿಡಿಲಿನ ಶಾಖಕ್ಕೆ ಎರಡು ಮೇಕೆಗಳು ಸಾವಿಗಿಡಾಗಿದ್ದು ಹಾಗೂ ಕುರಿಗಾಯಿ ವ್ಯಕ್ತಿ ದ್ಯಾವಪ್ಪ ದಸ್ತಪ್ಪಾ ಶಾಖಕ್ಕೆ ಕುಸಿದು ಬಿದ್ದ ಕಾರಣ ಅಕ್ಕಪಕ್ಕದವರು ನೋಡಿ ಸ್ಥಳೀಯ ಆಸ್ಪತ್ರೆಗೆ ರವಾನಿಸಲಾಗಿದೆ ಎಂದು ತಿಳಿದುಬಂದಿದೆ.

ಕುರುಬ ಸಮಾಜದ ಅಧ್ಯಕ್ಷ ಹಣಮಂತ ಪೂಜಾರಿ ಪತ್ರಕರ್ತರೊಂದಿಗೆ ಮಾತನಾಡಿದ ಅವರು,ರಾಜ್ಯದ್ಯಂತ ಅನೇಕ ಕುರುಬ ಸಮಾಜದವರು ಕುಲಕಸುಬು ಆಗಿರುವ ಕುರಿಕಾಯುವ ಕಾಯಕದಿಂದ ಜೀವನ ನಿರ್ವಹಣೆ ಮಾಡುತ್ತಾರೆ ಅವಘಾಡ ಮಳೆ ಹಾಗೂ ಮಳೆಗಾಲ ಸಮಯದಲ್ಲಿ ಅನೇಕರು ಸಿಡಿಲಿಗೆ ಬಲಿಯಾದ ಅನೇಕ ಉದಾಹರಣೆಗಳಿವೆ ಆದರೂ ಸಹ ಸರ್ಕಾರದಿಂದ ಯಾವುದೇ ರಕ್ಷಣೆ ಪರಿಹಾರ ನೀಡದೆ ನಾಮಕೆವಾಸ್ತೆ ನೀಡಿ ಕೈತೊಳೆದುಕೊಳ್ಳುತ್ತಾರೆ. ಸರ್ಕಾರದಿಂದ ಮೇಕೆಗಳು ಸಾವುನೋಪ್ಪಿದರೆ ಕನಿಷ್ಠ ಒಂದಕ್ಕೆ 20ಸಾವಿರ ಹಾಗೂ ಕುರಿಗಾಯಿನಿಗೆ ಜೀವಕ್ಕೆ ಅಪಾಯವಾದರೆ ಕನಿಷ್ಠ 1ಕೋಟಿ ರೂಪಾಯಿ ಪರಿಹಾರ ನೀಡಿದರೆ ಅವರ ಕುಟುಂಬ ಸಮೇತ ನಿರ್ವಹಣೆ ಮಾಡಲು ಸಾಧ್ಯವಾಗುತ್ತದೆ ಎಂದು ಸರ್ಕಾರಕ್ಕೆ ಮನವಿ ಮಾಡಿದರು.

ಹೋರಾಟಗಾರ ಗೋಪಾಲ ಗಾರಂಪಳ್ಳಿ ಮಾತನಾಡಿ ಕರ್ಚಖೇಡ ಗ್ರಾಮದಲ್ಲಿ ಕುರಿಗಾಯಿ ಕುಸಿದು ಬಿದ್ದು ಆಸ್ಪತ್ರೆಗೆ ದಾಖಲಾಗಿದ್ದು ಸರ್ಕಾರ ಕನಿಷ್ಠ 5ಲಕ್ಷ ಪರಿಹಾರ ನೀಡಬೇಕು ಹಾಗೂ ಎರಡು ಮೇಕೆಗಳು ಸಾವಿಗಿಡಾಗಿದ್ದು ಒಂದಕ್ಕೆ 20ಸಾವಿರದಂತೆ 40ಸಾವಿರ ರೂಪಾಯಿ ಪರಿಹಾರ ನೀಡಬೇಕು.

ಈಗಾಗಲೇ ಪಶು ಆಸ್ಪತ್ರೇ ಹಾಗೂ ಪೋಲಿಸ್ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಆಗಮಿಸಿ ಪಂಚನಾಮೆ ಮಾಡಲಾಗಿದ್ದು ಸೂಕ್ತ ಪರಿಹಾರ ನೀಡಬೇಕು ಎಂದು ಆಗ್ರಹಿಸಿದರು.

ಉದಯವಾಹಿನಿ ಚಿತ್ರ

ವರ್ಗಾವಣೆಗೊಂಡ ನ್ಯಾಯಾಧೀಶರಿಗೆ ಬೀಳ್ಕೊಡುಗೆ ಸಮಾರಂಭ

• ಉದಯವಾಹಿನಿ ಸಿಂಧನೂರು

ಸಿಂಧನೂರು ನ್ಯಾಯಾಲಯದಲ್ಲಿ ಮೂರು ಜನ ನ್ಯಾಯವಾದಿಗಳು ಸೇವೆ ಸಲ್ಲಿಸಿದ ಅಪಾರವಾದದ್ದು. ವಿವಿಧ ಪ್ರಕರಣಗಳಲ್ಲಿ ಜನಪರವಾಗಿ ಒಳ್ಳೆಯ ತೀರ್ಪುಗಳಬಂದಿದ್ದು. ಅತ್ಯಂತ ಮಹತ್ವದ್ದು ಎಂದು ಹೆಚ್ಚುವರಿ ಸಿಂಧನೂರು ಜಿಲ್ಲಾ ಬಾಕ್ಸ್‌ನ್ಯಾಯಾಧೀಶ ಬಿ.ಬಿ.ಜಕಾತಿ ಅವರು ಹೇಳಿದರು.

ಇಂದು ಸಿಂಧನೂರುನ ನ್ಯಾಯವಾದಿಗಳ ಸಂಘದಿಂದ ವರ್ಗಾವಣೆಗೊಂಡ ನ್ಯಾಯಧೀಶರಾದ ವೃಕ್ಷ ದೀಪಾ ಜಿ. ಮನೇಕರ್, ಕೋಟೇಪ್ಪ ದಪ್ಪ ಕಾಂಬ್ಳೆ ಹಾಗೂ ಆನಂದಪ್ಪ ಎಂ. –ಗಿ. ಇವರಿಗೆ ಹಮಿಕೊಂಡಿದ್ದ ಬೀಳ್ಕೊಡಿಗೆಯ ಸಮಾರಂಭ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು ನಾನು ಸಿಂಧನೂರು ಹೆಚ್ಚುವರಿ ಜಿಲ್ಲಾ ನ್ಯಾಯಾಲಯಕ್ಕೆ ಬಂದ ನಂತರ ಕೆಳ ಹಂತದ ನ್ಯಾಯಾಲಯಗಳು ನೀಡಿದ ವಿವಿಧ ಪ್ರಕರಣಗಳಿಗೆ ಸಂಬಂಧಿಸಿದ ಜಿಲ್ಲಾ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಿದಾಗ ಕೆಳಹಂತದ ಮೂರು ಜನ ನ್ಯಾಯಾಧೀಶರು ನೀಡಿದ ತೀರ್ಪುಗಳು ಅತ್ಯುತ್ತಮವಾದದ್ದು ವಕೀಲರು ಮತ್ತು ನ್ಯಾಯಾಲಯದ ಬಾಂಧವ್ಯ ಇರಬೇಕು. ಇವುಗಳು ಬಂಡಿಗಾಲಿನ ಚಕ್ರದಂತೆ ಇರಬೇಕು ಎಂದು ಹೇಳಿದರು. ಒಂದು ಪ್ರತಿ ಮೂರು ವರ್ಷಗಳಿಗೊಮ್ಮೆ ನ್ಯಾಯಾಧೀಶರು ವರ್ಗಾವಣೆ ಯಾಗಿ ಹೋಗುತ್ತಾರೆ.

ವರ್ಗಾವಣೆಗೊಂಡ ನ್ಯಾಯಾಧೀಶರಿಂದ ಏನ್ನಾದರೂ ಸಮಸ್ಯೆಗಳು ಉಂಟಾದರೆ ಅವರು ಎಂ. ವರ್ಗಾವಣೆ ನಂತರ ಮರೆತು ಬಿಡುತ್ತೇವೆ. ಹಾಗೆ ಅವರು ಸಹ ನ್ಯಾಯವಾದಿಗಳ ಮರೆತು ಬಿಡುತ್ತಾರೆ.

ನಮ್ಮ ಕೋರ್ಟಗೆ ರಾಮನಗೌಡ ಬರುವ ಹೊಸ ಹೊಸ ಸಂಘದಿಂದ ನ್ಯಾಯಾಧೀಶರಿಂದ ನಾವು ಗಳು ಹೆಚ್ಚಿನ ಘಟನೆಗಳು ಅನುಭವಗಳನ್ನು ಪಡೆಯುತ್ತೇವೆ ನ್ಯಾಯಾಧೀಶರು ನೀಡಿದ ತೀರ್ಪುಗಳು ಅತ್ಯುತ್ತಮವಾಗಿವೆ ಎಂದು ಹೇಳಿದರು. ಹಿರಿಯ ಶ್ರೇಣಿ ನ್ಯಾಯಾಧೀಶೆ ಜಿ. ದೀಪಾ ಮೇನಕರ ಅವರು ಸೇರಿದಂತೆ ವಿವಿಧ ನ್ಯಾಯಾಲಯದ ನ್ಯಾಯಾಧೀಶರು ಮಾತನಾಡಿದರು.

ಉದಯವಾಹಿನಿ ಚಿತ್ರ

ವಕೀಲರು, ನ್ಯಾಯಾಲಯದ ಬಾಂಧವ್ಯ ಇರಬೇಕು

> ಕಾರ್ಯಕ್ರಮದ ಅಧ್ಯಕ್ಷತೆ ಮಾತನಾಡಿದ ಸಂಘದ ಅಧ್ಯಕ್ಷ ಎನ್, ರಾಮನಗೌಡ ಅವರು ನಮ್ಮ ವಕೀಲರ ಯಾವುದಾದರೂ ಕಹಿ ನಡೆದಿದ್ದರೆ ಅವುಗಳನ್ನು ಇಲ್ಲಿಯೇ ಬಿಟ್ಟು ಇಲ್ಲಿ ಸಿಕ್ಕಿರುವ ಒಳ್ಳೆಯ ಘಟನೆಗಳನ್ನು ತೆಗೆದುಕೊಂಡು ಹೋಗಿ ಎಂದು ಹೇಳಿದರು. –ರಾಮನಗೌಡ

ಚಿಗಟೇರಿ ಆಸ್ಪತ್ರೆಯಿಂದಲೂ ತಪ್ಪಿಸಲು ಯತ್ನಿಸಿದ್ದ ಅಂಜಲಿ ಹಂತಕ ಗಿರೀಶ್

• ಉದಯವಾಹಿನಿ ದಾವಣಗೆರೆ

ಹುಬ್ಬಳ್ಳಿಯ ಅಂಜಲಿ ಕೊಲೆ ಪ್ರಕರಣದ ಆರೋಪಿ ವಿಶ್ವ ಅಲಿಯಾಸ್ ಗಿರೀಶ್ ಚಿಗಟೇರಿ ಆಸ್ಪತ್ರೆಯಿಂದ ತಪ್ಪಿಸಿಕೊಳ್ಳುವ ಯತ್ನ ನಡೆಸಿದ್ದು ಬೆಳಕಿಗೆ ಬಂದಿದೆ.

ವಿಶ್ವಮಾನವ ಎಕ್ಸ್‌ಪ್ರೆಸ್ ರೈಲಿನಲ್ಲಿ ಹುಬ್ಬಳ್ಳಿಯತ್ತ ತೆರಳುತ್ತಿದ್ದ ವಿಶ್ವ ಅದೇ ರೈಲಿನಲ್ಲಿದ್ದ ಗದಗ ಜಿಲ್ಲೆಯ ಕಲ್ಲುಮುಳಗುಂದ ಗ್ರಾಮದ ಲಕ್ಷ್ಮಿ ಎಂಬ ಮಹಿಳೆಯೊಂದಿಗೆ ಅನುಚಿತವಾಗಿ ವರ್ತಿಸಿದ್ದಲ್ಲದೆ ಚಾಕುವಿನಿಂದ ಚುಚ್ಚಿ ಕೊಲೆಗೂ ಯತ್ನಿಸಿದ್ದ. ಮಹಿಳೆಯ ಚೀರಾಟದಿಂದ ಎಚ್ಚೆತ್ತ ಪ್ರಯಾಣಿಕರು, ಮಹಿಳೆಯ ಪತಿ ಇತರರು ವಿಶ್ವನನ್ನು ಹಿಡಿದು ಥಳಿಸಿದ್ದರು. ಪೊಲೀಸರಿಗೆ ಹಿಡಿದು ಕೊಡಬಹುದು ಇಲ್ಲವೇ ಸಿಕ್ಕಿ ಬೀಳಬಹುದು ಎಂಬ ಭಯದಿಂದ ಮಾಯಕೊಂಡ ಸಮೀಪ ಚಲಿಸುತ್ತಿದ್ದ ರೈಲಿನಿಂದ ಕೆಳಗೆ ಹಾರಿದಾಗ ತಲೆಗೆ ತೀವ್ರ ಪೆಟ್ಟು ಬಿದ್ದು ಹಳಿಗಳ ಸಮೀಪವೇ ಬಿದ್ದಿದ್ದನು.ರೈಲಿನಿಂದ ಜಿಗಿದ ಪರಿಣಾಮ ತೀವ್ರ ಗಾಯಗೊಂಡಿದ್ದ ಆರೋಪಿಯನ್ನು ಪೊಲೀಸರು ದಾವಣಗೆರೆ ಜಿಲ್ಲಾ ಚಿಗಟೇರಿ ಆಸ್ಪತ್ರೆಗೆ ದಾಖಲಿಸಿದ್ದಾರೆ.

ರೈಲಿನಿಂದ ಇಳಿಯುವಾಗ ಜಾರಿ ಬಿದ್ದ ಎಂಬ ಹೇಳಿಕೆ ನೀಡಿದ್ದಾನೆ. ವಿಶ್ವಮಾನವ ಎಕ್ಸ್‌ಪ್ರೆಸ್ ರೈಲು ಚಿಕ್ಕಜಾಜೂರು ನಂತರ ದಾವಣಗೆರೆಯಲ್ಲಿ ಮಾತ್ರ ನಿಲುಗಡೆ ಇದೆ. ಅದು ಯಾವಾಗ ರೈಲಿನಿಂದ ಇಳಿಯಲಿಕ್ಕೆ ಹೋಗಿರಬಹುದು ಎಂಬ ಅನುಮಾನ ಪೊಲೀಸರಿಗೆ ಕಾಡಿದೆ.

ಮಾಧ್ಯಮಗಳಲ್ಲಿ ಬಿತ್ತರವಾದ ಆರೋಪಿಯ ಫೋಟೋ ನೋಡಿದ್ದರಿಂದಲೂ ಹುಬ್ಬಳ್ಳಿಯ ಕೊಲೆ ಆರೋಪಿ ಏನಾದರೂ ಇರಬಹುದಾ ಎಂಬ ಸಂಶಯವೂ ಬಂದಿದೆ. ಅದೇ ಸಂಶಯದ ಮೇಲೆ ರೈಲ್ವೆ ಪೊಲೀಸರು ಮತ್ತೊಮ್ಮೆ ಆರೋಪಿ ವಿಶ್ವನನ್ನು ದಾಖಲಿಸಿದ್ದ ಜಿಲ್ಲಾ ಚಿಗಟೇರಿ ಆಸ್ಪತ್ರೆಗೆ ಬರುವ ವೇಳೆಗೆ ಆರೋಪಿ ಆಗಲೇ ಆಸ್ಪತ್ರೆಯಿಂದ ಹೊರ ಬಂದಿದ್ದನು.

ಉದಯವಾಹಿನಿ ಚಿತ್ರ

ಹುಬ್ಬಳ್ಳಿ ಪೊಲೀಸರಿಗೆ ಮಾಹಿತಿ

ಕೊಡಲೇ ಕಾರ್ಯಪ್ರವೃತ್ತರಾದ ಪೊಲೀಸರು ವಿಶ್ವನನ್ನು ವಶಕ್ಕೆ ತೆಗೆದುಕೊಂಡು ಹುಬ್ಬಳ್ಳಿ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ. ದಾವಣಗೆರೆಗೆ ಆಗಮಿಸಿದ ಹುಬ್ಬಳ್ಳಿ ಪೊಲೀಸರು ಅಂಜಲಿ ಕೊಲೆ ಆರೋಪಿ ಇವನೇ ಎಂಬುದನ್ನು ಖಚಿತಪಡಿಸಿ ಕೊಂಡು ಬಂಧಿಸಿ, ಹುಬ್ಬಳ್ಳಿಗೆ ಕರೆದೊಯ್ದದ

ಸಂವಿಧಾನ ಬದಲಾಯಿಸುವ ಕೆಲಸ ಮಾಡಿಲ್ಲ:ಅಮಿತ್ ಶಾ

ಭಾರತವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಿ ಮಾಡಲು ನಾವು 400 ಸ್ಥಾನಗಳನ್ನು ಗೆಲ್ಲಲು ಬಯಸುತ್ತೇವೆ

ಹೊಸದಿಲ್ಲಿ : ಸಂವಿಧಾನವನ್ನು ತಿದ್ದುಪಡಿ ಮಾಡಲು ಬಿಜೆಪಿ 400ಕ್ಕೂ ಹೆಚ್ಚು ಲೋಕಸಭಾ ಸ್ಥಾನಗಳನ್ನು ಗೆಲ್ಲಲು ಬಯಸುತ್ತದೆ ಎಂಬ ಪ್ರತಿಪಕ್ಷಗಳ ಹೇಳಿಕೆಯನ್ನು ಕೇಂದ್ರ ಗೃಹ ಸಚಿವ ಅಮಿತ್ ಶಾ ತಳ್ಳಿಹಾಕಿದ್ದಾರೆ. ಕಳೆದ ಒಂದು ದಶಕದಿಂದಲೂ ಸಂವಿಧಾನ ಬದಲಾವಣೆ ಮಾಡುವ ಜನಾದೇಶವನ್ನು ಬಿಜೆಪಿ ಹೊಂದಿತ್ತು. ಆದರೆ, ಅದನ್ನು ಎಂದಿಗೂ ಬಿಜೆಪಿ ಮಾಡಲಿಲ್ಲ ಎಂದು ಅಮಿತ್ ಶಾ ಹೇಳಿದ್ದಾರೆ.

ಸುದ್ದಿಸಂಸ್ಥೆ ಎಎನ್‌ಐಗೆ ನೀಡಿದ ಸಂದರ್ಶನದಲ್ಲಿ ಮಾತನಾಡಿದ ಅವರು, ದೇಶದ ರಾಜಕೀಯ ವ್ಯವಸ್ಥೆಯಲ್ಲಿ ಸ್ಥಿರತೆಯನ್ನು ತರುವುದು ಪಕ್ಷದ ಗುರಿಯಾಗಿದೆ. ಆದ್ದರಿಂದ 400ಕ್ಕೂ ಹೆಚ್ಚು ಸ್ಥಾನಗಳನ್ನು ಗಳಿಸುವ ಗುರಿಯನ್ನು ನಾವು ಹೊಂದಿದ್ದೇವೆ. ಕಳೆದ 10 ವರ್ಷಗಳಿಂದ ನಾವು ಸಂವಿಧಾನವನ್ನು ಬದಲಾಯಿಸುವ ಜನಾದೇಶವನ್ನು ಹೊಂದಿದ್ದೇವೆ. ಆದರೆ, ನಾವು ಅದನ್ನು ಎಂದಿಗೂ ಮಾಡಲಿಲ್ಲ ಎಂದು ಸ್ಪಷ್ಟನೆಯನ್ನು ನೀಡಿದರು. ರಾಹುಲ್ ಬಾಬಾ ಮತ್ತು ಕಂಪನಿ ಹೇಳಿದ್ದನ್ನು, ದೇಶ ನಂಬುತ್ತದೆ ಎಂದು ನೀವು ಭಾವಿಸುತ್ತೀರಾ? ಈ ದೇಶವು ನಮಗೆ ಸ್ಪಷ್ಟ ಜನಾದೇಶವನ್ನು ನೀಡಿದೆ. ಸಂವಿಧಾನವನ್ನು ಬದಲಾಯಿಸಲು ಪ್ರಧಾನಿ ಮೋದಿ ಅವರ ಬಳಿ ಈಗಾಗಲೇ ಸಾಕಷ್ಟು ಬಹುಮತವಿದೆ ಎಂಬುದು ಈ ದೇಶದ ಜನರಿಗೆ ಗೊತ್ತಿದೆ. ಆದರೆ, ನಾವು ಅದನ್ನು ಎಂದಿಗೂ ಮಾಡಲಿಲ್ಲ ಎಂದು ಹೇಳಿದರು. ದೇಶದಲ್ಲಿ ರಾಜಕೀಯಕ್ಕೆ ಸ್ಥಿರತೆಯನ್ನು ತರಲು ನಾವು ಲೋಕಸಭೆ ಚುನಾವಣೆಯಲ್ಲಿ 400 ಸ್ಥಾನಗಳನ್ನು ಗೆಲ್ಲಲು ಬಯಸುತ್ತೇವೆ. ನಮ್ಮ ಗಡಿಗಳನ್ನು ರಕ್ಷಿಸಲು, ಭಾರತವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯಾಗಿ ಮಾಡಲು ನಾವು 400 ಸ್ಥಾನಗಳನ್ನು ಗೆಲ್ಲಲು ಬಯಸುತ್ತೇವೆ. ಶುದ್ಧ ನೀರು ಇನ್ನೂ ಪ್ರತಿ ಮನೆಗೆ ತಲುಪಿಲ್ಲ, ಈ ದೇಶದಲ್ಲಿ ಕೃಷಿ ಕ್ಷೇತ್ರದಲ್ಲಿ ಮಾಡಲು ಸಾಕಷ್ಟು ಕೆಲಸಗಳಿವೆ.

70 ವರ್ಷಕ್ಕಿಂತ ಮೇಲ್ಪಟ್ಟ ಪ್ರತಿಯೊಬ್ಬ ಹಿರಿಯ ನಾಗರಿಕರಿಗೆ 5 ಲಕ್ಷ ರೂ.ವರೆಗೆ ಉಚಿತ ಚಿಕಿತ್ಸೆ ನೀಡಲು ನಾವು 400 ಸ್ಥಾನಗಳ ಗುರಿಯನ್ನು ಹೊಂದಿದ್ದೇವೆ ಎಂದು ಅಮಿತ್ ಶಾ ಹೇಳಿದರು. ಒಂದು ರಾಜಕೀಯ ಪಕ್ಷವು ಚುನಾವಣೆಯಲ್ಲಿ ಗೆದ್ದರೆ ಸಂವಿಧಾನವನ್ನು ಕಿತ್ತುಹಾಕುತ್ತೇವೆ ಎಂದು ಹೇಳಿದೆ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಹೇಳಿದ ಬಳಿಕ ಅಮಿತ್ ಶಾ ಈ ಹೇಳಿಕೆಯನ್ನು ನೀಡಿದ್ದಾರೆ.

ಬಿಜೆಪಿ ನೇತೃತ್ವದ ಎನ್‌ಡಿಎ ಈ ಬಾರಿ 400 ಮೀರಿ ಎಂಬ ಗುರಿಯೊಂದಿಗೆ ಚುನಾವಣೆಯನ್ನು ಎದುರಿಸುತ್ತಿದೆ. ಈ ಹಿನ್ನೆಲೆ ವಿಪಕ್ಷಗಳು ಸಂವಿಧಾನ ಬದಲಾವಣೆ ಮಾಡಲು ಬಿಜೆಪಿ 400 ಸ್ಥಾನಗಳನ್ನು ಕೇಳುತ್ತಿದೆ ಎಂದು ಆರೋಪಿಸುತ್ತಿದ್ದಾರೆ.

ಅಮಿತ್ ಶಾ ಹೇಳಿಕೆಗೆ ಸಂಜಯ್ ರಾವತ್ ಕಿಡಿ

ಅಮಿತ್ ಶಾ ಹೇಳಿಕೆಗೆ ಶಿವಸೇನೆ (ಉದ್ಧವ್ ಠಾಕ್ರೆ ಬಣ) ನಾಯಕ ಸಂಜಯ್ ರಾವತ್ ಪ್ರತಿಕ್ರಿಯಿಸಿದ್ದು, ನೀವು ಹೀಗಾಗಲೇ ಸಂವಿಧಾನವನ್ನು ಬದಲಾಯಿಸಲು ಸಿದ್ಧತೆಯನ್ನು ಶುರುಮಾಡಿಕೊಂಡಿದ್ದೀರಿ. ನಿಮ್ಮ ಅಗತ್ಯಕ್ಕೆ ತಕ್ಕಂತೆ ಏನು ಬೇಕಾದರೂ ನೀವು ಮಾಡ್ತೀರಿ, ಕಳೆದ 10 ವರ್ಷಗಳಲ್ಲಿ ದೇಶಕ್ಕಾಗಿ ನೀವು ಏನು ಮಾಡಲಿಲ್ಲ. ಜಮ್ಮು ಕಾಶ್ಮೀರದ ಪ್ರಮುಖ ಸ್ಥಳಗಳಲ್ಲಿ ಭೂಮಿ ಖರೀದಿಸಲು ಅದಾನಿಯಂತಹ ಕೈಗಾರಿಕೋದ್ಯಮಿಗಳಿಗೆ ಅನುಕೂಲ ಮಾಡಿಕೊಡಲು 370ನೇ ವಿಧಿಯನ್ನು ರದ್ದುಗೊಳಿಸಿದೀರಿ. ಅದನ್ನು ನೀವು ದೇಶಕ್ಕಾಗಿ ಮಾಡಿಲ್ಲ ಎಂದು ಕಿಡಿಕಾರಿದರು.

- ಸಂವಿಧಾನ ಬದಲಾವಣೆ ಬಗ್ಗೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಮಹತ್ವದ ಹೇಳಿಕೆ
- ''ಸಂವಿಧಾನ ಬದಲಾಯಿಸಲು ನಮ್ಮ ಬಳಿ ಕಳೆದ 10 ವರ್ಷದಿಂದ ಬಹುಮತವಿತ್ತು''
- ಆದರೆ, ಎಂದಿಗೂ ಸಂವಿಧಾನ ಬದಲಾಯಿಸುವ ಕೆಲಸ ನಾವು ಮಾಡಿಲ್ಲ ಎಂದ ಅಮಿತ್ ಶಾ

ಕಾಮನ್‌ವೆಲ್ತ್‌ಗೆ ಭಾರತದ ತಾಂತ್ರಿಕ ನೆರವು ಅತಿಮುಖ್ಯ : ಸ್ಕಾಟ್ಲೆಂಡ್

ಲಂಡನ್: ಕಾಮನ್‌ವೆಲ್ತ್‌ಗೆ ಭಾರತದ ತಾಂತ್ರಿಕ ನೆರವು ವಿಮರ್ಶಾತಕವಾಗಿ ಮುಖ್ಯವಾಗಿದೆ ಎಂದು 56 ಸದಸ್ಯರ ಸಂಘಟನೆಯ ಪ್ರಧಾನ ಕಾರ್ಯದರ್ಶಿ ಹೇಳಿದ್ದಾರೆ, ಅಭಿವದ್ಧಿಶೀಲ ಸವಾಲುಗಳನ್ನು ಎದುರಿಸಲು ಇದು ಅನೇಕ ಅಭಿವದ್ಧಿಶೀಲ ದೇಶಗಳಿಗೆ ದೊಡ್ಡ ಪ್ರಮಾಣದ ಭರವಸೆಯನ್ನು ನೀಡುತ್ತದೆ ಎಂದು ಪ್ರತಿಪಾದಿಸಿದ್ದಾರೆ.

ಚಾಲನಾ ಸ್ಥಿತಿಸ್ಥಾಪಕತ್ವ, ಇಕ್ವಿಟಿ, ಮತ್ತು ಅಂತರ್ಗತ ಭವಿಷ್ಯಕ್ಕಾಗಿ ಕೌಶಲ್ಯಗಳು ಎಂಬ ವಿಷಯದ ಮೇಲೆ ಲಂಡನ್‌ನಲ್ಲಿ ಕಾಮನ್‌ವೆಲ್ತ್ ಶಿಕ್ಷಣ ಮಂತ್ರಿಗಳ 22 ನೇ ಸಮೇಳನದಲ್ಲಿ ಕಾಮನ್‌ವೆಲ್ತ್‌ನೊಂದಿಗೆ ತೆರೆದ ಮೂಲ ರೀತಿಯಲ್ಲಿ ತಾಂತ್ರಿಕ ಬೆಳವಣಿಗೆಗಳನ್ನು ಹಂಚಿಕೊಳ್ಳಲು ಭಾರತದ ಇಚ್ಛೆಯನ್ನು ಸ್ಕಾಟ್ಲೆಂಡ್ ಸ್ವಾಗತಿಸಿತು ಮತ್ತು ಸಂಸ್ಥೆಯ ಶೈಕ್ಷಣಿಕ ಗುರಿಗಳ ಕಡೆಗೆ ಹೆಚ್ಚಿನ ಬದ್ಧತೆಯನ್ನು ನಿರೀಕ್ಷಿಸುತ್ತದೆ ಎಂದಿದೆ.

ಭಾರತವು ತನ್ನ ತಾಂತ್ರಿಕ ಬೆಳವಣಿಗೆಗಳನ್ನು ತನ್ನ ಕಾಮನ್‌ವೆಲ್ತ್ ಕುಟುಂಬದೊಂದಿಗೆ ಹಂಚಿಕೊಳ್ಳಲು ಮತ್ತು ಅದನ್ನು ಮುಕ್ತ-ಮೂಲ ರೀತಿಯಲ್ಲಿ

ಹಂಚಿಕೊಳ್ಳಲು ಸಿದ್ಧವಾಗಿದೆ ಎಂದು ಸ್ಪಷ್ಟಪಡಿಸಿದೆ ಎಂದು ಸ್ಕಾಟ್‌ಲ್ಯಾಂಡ್ ಹೇಳಿದೆ.

ಇಲ್ಲಿಯವರೆಗೆ ಮತ್ತು ನಾವು ಆರ್ಥಿಕವಾಗಿ ಮತ್ತು ಭಾರತವು ಮುಂದೆ ನೀಡುವ ಕೊಡುಗೆಗಳ ಮೇಲೆ ಅವಲಂಬಿತರಾಗಬಹುದು ಎಂಬ ವಿಶ್ವಾಸವನ್ನು ಹೊಂದಲು ನಾನು ಬಯಸುತ್ತೇನೆ ಎಂದು ಅವರು ಹೇಳಿದರು. ಲಂಡನ್‌ನ ಕಾಮನ್‌ವೆಲ್ತ್ ಸೆಕ್ರೆಟರಿಯೇಟ್ ಮಾರ್ಲ್‌ಬರೋ ಅವರು ಸಭೆಯಲ್ಲಿ, ಶಿಕ್ಷಣ ಪ್ರವೇಶಕ್ಕೆ ಅಡ್ಡಿಯಾಗುವ ಅಡೆತಡೆಗಳನ್ನು ತೊಡೆದುಹಾಕಲು, ತಂತ್ರಜ್ಞಾನವನ್ನು ಬಳಸಿಕೊಳ್ಳಲು ಮತ್ತು ಆಜೀವ ಕಲಿಕೆಯನ್ನು ಉತ್ತೇಜಿಸಲು ಸಹಾಯ ಮಾಡಲು ಅವರು ಮಂತ್ರಿಗಳಿಗೆ ಕರೆ ನೀಡಿದರು.

> ಅಭಿವದ್ಧಿಶೀಲ ದೇಶಗಳಲ್ಲಿ ಹೆಚ್ಚಿನ ಭರವಸೆಯನ್ನು ನೀಡುತ್ತದೆ ಏಕೆಂದರೆ ಆ ತಾಂತ್ರಿಕ ಅಭಿವದ್ಧಿಯು ಭಾರತವು ಈಗಾಗಲೇ ಕೈಗೊಂಡಿರುವ ಮತ್ತು ಮೀರಿಸಿರುವ ಅಭಿವದ್ಧಿ ಸವಾಲುಗಳನ್ನು ಜಿಗಿಯಲು ಅನುವು ಮಾಡಿಕೊಡುತ್ತದೆ ಅವರು ನಮೊಂದಿಗೆ ಹಂಚಿಕೊಂಡಿದ್ದಕ್ಕಾಗಿ ನಾನು ಭಾರತ ಸರ್ಕಾರಕ್ಕೆ ಧನ್ಯವಾದ ಹೇಳಲು ಬಯಸುತ್ತೇನೆ - ಸ್ಕಾಟ್ಲೆಂಡ್

ಸಮೇಳನದಲ್ಲಿ ಮುಖ್ಯ ಭಾಷಣವನ್ನು ಸಮಾಜ ಸುಧಾರಕ ಮತ್ತು ನೊಬೆಲ್ ಪ್ರಶಸ್ತಿ ವಿಜೇತ ಕೈಲಾಶ್ ಸತ್ಯಾರ್ಥಿ ಅವರು ಮಾಡಿದರು, ಅವರು ಕಳೆದ 15-20 ವರ್ಷಗಳಲ್ಲಿ ಶಿಕ್ಷಣ ಕ್ಷೇತ್ರದಲ್ಲಿ ಭಾರತದ ಬಹತ್ ಜಿಗಿತವನ್ನು ಎತ್ತಿ ತೋರಿಸಿದರು ಮತ್ತು ಸಮಾನ ಶೈಕ್ಷಣಿಕ ಫಲಿತಾಂಶಗಳನ್ನು ಸಾಧಿಸಲು ಮಾರ್ಗದರ್ಶಿ ಶಕ್ತಿಯಾಗಿ ಕರುಣಾಮಯಿ ಬುದ್ಧಿಮತ್ತೆ ಪ್ರಸ್ತಾಪಿಸಿದರು.

ರನ್‌ವೇನಲ್ಲಿ ಲಗೇಜ್ ಟ್ರ್ಯಾಕ್ಟರ್‌ಗೆ ಏರ್ ಇಂಡಿಯಾ ವಿಮಾನ ಡಿಕ್ಕಿ, ತಪ್ಪಿದ ಅನಾಹುತ

ಪುಣೆ: ದೆಹಲಿಯಿಂದ ಹೊರಟಿದ್ದ ಏರ್ ಇಂಡಿಯಾ ವಿಮಾನವು ರನ್‌ವೇ ಕಡೆಗೆ ಟ್ಯಾಕ್ಸಿ ಮಾಡುವಾಗ ಲಗೇಜ್ ಟ್ರ್ಯಾಕ್ಟರ್‌ಗೆ ಡಿಕ್ಕಿ ಹೊಡೆದಿದ್ದು ಕೂದಲೆಳೆ ಅಂತರದಲ್ಲಿ ಸಂಭಾವ್ಯ ಅನಾಹುತ ತಪ್ಪಿದೆ.

ಏರ್ ಇಂಡಿಯಾ ಎಐ-858 ವಿಮಾನವು ಪುಣೆಯಿಂದ ಸಂಜೆ 4 ಗಂಟೆಗೆ ಹೊರಡಲು ಸಿದ್ಧತೆ ನಡೆಸುತ್ತಿದ್ದಾಗ, ಪುಣೆ ಏರ್‌ಪೋರ್ಟ್ ರನ್‌ವೇಯಲ್ಲಿ 180 ಪ್ರಯಾಣಿಕರೊಂದಿಗೆ ದೆಹಲಿಗೆ ಹೊರಟಿದ್ದಾಪ ಟ್ರಾಕ್ಟರ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯಿಂದ ವಿಮಾನಕ್ಕೆ ಹಾನಿಯಾದರೂ ಪ್ರಯಾಣಿಕರಿಗೆ ಯಾವುದೇ ಗಾಯವಾಗಿಲ್ಲ. ಸುಮಾರು 180 ಪ್ರಯಾಣಿಕರನ್ನು ಹೊತ್ತೊಯ್ಯುತ್ತಿದ್ದ ವಿಮಾನವು ಲ್ಯಾಂಡಿಂಗ್ ಗೇರ್ ಬಳಿಯ ಮುಂಭಾಗದಲ್ಲಿ ಮತ್ತು ಟೈರ್‌ಗೆ ಹಾನಿಯಾಗಿದೆ. ಘರ್ಷಣೆಯ ಹೊರತಾಗಿಯೂ, ವಿಮಾನದಲ್ಲಿದ್ದ ಎಲ್ಲಾ ಪ್ರಯಾಣಿಕರು ಮತ್ತು ಸಿಬ್ಬಂದಿ ಸುರಕ್ಷಿತವಾಗಿದ್ದಾರೆ. ಅಪಘಾತದ ನಂತರ



ಪ್ರಯಾಣಿಕರನ್ನು ವಿಮಾನದಿಂದ ಇಳಿಸಲಾಯಿತು. ಪ್ರಯಾಣಿಕರು ವಿಮಾನ ನಿಲ್ದಾಣದಲ್ಲಿಯೇ ಉಳಿದುಕೊಂಡಿದ್ದರಿಂದ ಅವರಿಗೆ ಪರ್ಯಾಯ ವ್ಯವಸ್ಥೆ ಮಾಡಲಾಗಿದೆ ಎಂದು ವಿಮಾನ ನಿಲ್ದಾಣದ ಅಧಿಕಾರಿಗಳು ತಿಳಿಸಿದ್ದಾರೆ. ನೆಲದ ಮೇಲೆ ವಿಮಾನವನ್ನು ನಡೆಸಲು ಬಳಸಲಾದ ಟಗ್ ಟ್ರಕ್, ಟ್ಯಾಕ್ಸಿ ಪ್ರಕ್ರಿಯೆಯಲ್ಲಿ ವಿಮಾನಕ್ಕೆ ಅಪ್ಪಳಿಸಿತು ಎಂದು ಪ್ರಾಥಮಿಕ ವರದಿಗಳು ಸೂಚಿಸುತ್ತವೆ. ಘಟನೆಗೆ ಕಾರಣ ಏನೆಂಬದನ್ನು ತಿಳಿಯಲು ನಾಗರಿಕ ವಿಮಾನಯಾನ ಮಹಾನಿರ್ದೇಶನಾಲಯ ತನಿಖೆ ಆರಂಭಿಸಿದೆ ಎಂದು ಹೇಳಿದ್ದಾರೆ.

ರಷ್ಯಾಗೆ ಶಸ್ತ್ರಾಸ್ತ್ರ ಪೂರೈಕೆಯಿಲ್ಲ: ಕಿಮ್ ಯೊ ಜೊಂಗ್

ಪ್ಯೊಂಗ್ಯಾಂಗ್: ರಷ್ಯಾಗೆ ಉತ್ತರ ಕೊರಿಯಾ ಶಸ್ತ್ರಾಸ್ತ್ರಗಳನ್ನು ಸಾಗಿಸುತ್ತಿದೆ ಎಂಬ ಆರೋಪವನ್ನು ಉತ್ತರ ಕೊರಿಯಾ ನಾಯಕ ಕಿಮ್ ಜೊಂಗ್ ಉನ್ ಅವರ ಸಹೋದರಿ ಕಿಮ್ ಯೊ ಜೊಂಗ್ ಅವರು ನಿರಾಕರಿಸಿದ್ದು, ಇದೊಂದು ಅಸಂಬದ್ಧವಾಗಿದೆ ಎಂದು ಕರೆದಿದ್ದಾರೆ.

ಉಕ್ರೇನ್ ವಿರುದ್ಧದ ಯುದ್ದದಲ್ಲಿ ರಷ್ಯಾಗೆ ಉತ್ತರ ಕೊರಿಯಾವು ಪರಮಾಣು-ಶಸ್ತ್ರಸಜ್ಜಿತ ಉತ್ತರದಿಂದ ಫಿರಂಗಿ ಮತ್ತು ಕ್ರೂಸ್ ಕ್ಷಿಪಣಿಗಳನ್ನು ಪೂರೈಸಲಿದೆ ಎಂಬ ಆತಂಕವನ್ನು ಅಮೆರಿಕಾ ವ್ಯಕ್ತಪಡಿಸುತ್ತಲೇ ಬಂದಿದೆ. ಈ ಆರೋಪಗಳಿಗೆ ಸದ್ಯ ಉತ್ತರ ನೀಡಿರುವ ಕಿಮ್ ಯೊ ಜೊಂಗ್, ಶುಕ್ರವಾರ ಅಧಿಕೃತ ಕೊರಿಯಾದ ಕೇಂದ್ರ ಸುದ್ದಿ ಸಂಸ್ಥೆ ಪ್ರಕಟಿಸಿದ ಹೇಳಿಕೆಯ ಪ್ರಕಾರ, ''ನಮ್ಮ ಮಿಲಿಟರಿ ತಾಂತ್ರಿಕ ಸಾಮರ್ಥ್ಯಗಳನ್ನು ಯಾವುದೇ ದೇಶಕ್ಕೆ ರಫ್ತು ಮಾಡುವ ಉದ್ದೇಶವನ್ನು ಉತ್ತರ ಕೊರಿಯಾ ಹೊಂದಿಲ್ಲ. ಆದರೆ ನಾವು ಉತ್ಪಾದಿಸಿದ ಶಸ್ತ್ರಾಸ್ತ್ರಗಳನ್ನು ರಷ್ಯಾಗೆ ಪೂರೈಸಲಾಗುತ್ತಿದೆ ಎಂಬ ತಪ್ಪು ಅಭಿಪ್ರಾಯವನ್ನು ಅಮೆರಿಕಾ ಹಾಗೂ ದಕ್ಷಿಣ ಕೊರಿಯಾ ಸೃಷ್ಟಿಸುತ್ತಿದೆ. ನಮಗೆ ಅತ್ಯಂತ ತುರ್ತು ವಿಷಯವೆಂದರೆ ಯಾವುದನ್ನಾದರೂ 'ಜಾಹೀರಾತು' ಅಥವಾ 'ರಫ್ತು' ಮಾಡುವುದು ಅಲ್ಲ, ಆದರೆ ನಮ್ಮ ಸೈನ್ಯದ ಯುದ್ಧ ಸನ್ನದ್ಧತೆ ಮತ್ತು ಯುದ್ಧ ನಿರೋಧಕವನ್ನು ಗುಣಮಟ್ಟ ಮತ್ತು ಪ್ರಮಾಣದಲ್ಲಿ ಹೆಚ್ಚು ಪರಿಪೂರ್ಣವಾಗಿಸುವುದು ಎಂದು ಕಿಮ್ ಯೋ ಜೊಂಗ್ ತಿಳಿಸಿದ್ದಾರೆ.

ಬಹುಮಟ್ಟಿಗೆ ಪ್ರತ್ಯೇಕವಾಗಿರುವ ಉತ್ತರ ಕೊರಿಯಾವು ಇತ್ತೀಚೆಗೆ ಮಾಸ್ಕೋದೊಂದಿಗೆ ಮಿಲಿಟರಿ ಸಂಬಂಧಗಳನ್ನು ಬಲಪಡಿಸಿದೆ. ಅಲ್ಲದೆ ಉತ್ತರ ಕೊರಿಯಾ ಅಧ್ಯಕ್ಷ ಕಿಮ್ ಆಡಳಿತದ ಮೇಲೆ ಅಂತಾರಾಷ್ಟ್ರೀಯ ನಿರ್ಬಂಧಗಳನ್ನು ಮೇಲ್ವಿಚಾರಣೆ ಮಾಡುವ ತಜ್ಞರ ಸಮಿತಿಯ ನವೀಕರಣವನ್ನು ನಿರ್ಬಂಧಿಸಲು ಯುಎನ್ ಸೆಕ್ಯುರಿಟಿ ಕೌನ್ಸಿಲ್‌ನಲ್ಲಿ ವೀಟೋವನ್ನು ಬಳಸಿದ್ದಕ್ಕಾಗಿ ಉತ್ತರ ಕೊರಿಯಾವು ಕಳೆದ ತಿಂಗಳು ರಷ್ಯಾಕ್ಕೆ ಧನ್ಯವಾದ ತಿಳಿಸಿತ್ತು.

ಸ್ವಾತಿ ಮಲಿವಾಲ್ ಮೇಲೆ ಹಲ್ಲೆ ಪ್ರಕರಣ : ವಿಚಾರಣೆಗೆ ಬಿಭವ್ ಕುಮಾರ್ ಗೈರು

ನವದೆಹಲಿ: ಎಎಪಿ ರಾಜ್ಯಸಭಾ ಸಂಸದೆ ಸ್ವಾತಿ ಮಲಿವಾಲ್ ಅವರ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಸಹಾಯಕ ಬಿಭವ್ ಕುಮಾರ್ ಅವರು, ರಾಷ್ಟ್ರೀಯ ಮಹಿಳಾ ಆಯೋಗದ (ಎನ್‌ಸಿಡಬ್ಲ್ಯೂ) ವಿಚಾರಣೆಗೆ ಇಂದು ಗೈರುಹಾಜರಾಗಿದ್ದಾರೆ.

ಎನ್‌ಸಿಡಬ್ಲ್ಯೂ ಕುಮಾರ್‌ಗೆ ಬೆಳಗ್ಗೆ 11 ಗಂಟೆಗೆ ಹಾಜರಾಗುವಂತೆ ಸಮನ್ಸ್ ನೀಡಿತ್ತು. ಎನ್‌ಸಿಡಬ್ಲ್ಯೂ ಮುಖ್ಯಸ್ಥೆ ರೇಖಾ ಶರ್ಮಾ ಅವರು, ಆಯೋಗದ ತಂಡವು ಗುರುವಾರ ಕುಮಾರ್ ಅವರ ನಿವಾಸಕ್ಕೆ ನೋಟೀಸ್ ನೀಡಲು ಹೋಗಿದ್ದರು ಆದರೆ ಅವರು ಮನೆಯಲ್ಲಿ ಇರಲಿಲ್ಲ. ಕುಮಾರ್ ಅವರ ಪತ್ನಿ ನೋಟೀಸ್ ಸ್ವೀಕರಿಸಲು ನಿರಾಕರಿಸಿದ್ದಾರೆ. ನನ್ನ ತಂಡ ಇಂದು ಮತ್ತೆ ಪೊಲೀಸರೊಂದಿಗೆ ಅವರ ನಿವಾಸಕ್ಕೆ ತೆರಳಿದೆ ಮತ್ತು ಅವರು ನಾಳೆಯೊಳಗೆ (ಎನ್‌ಸಿಡಬ್ಲ್ಯೂ ಮುಂದೆ) ಹಾಜರಾಗದಿದ್ದರೆ, ನಾನೇ ಅವರ ನಿವಾಸಕ್ಕೆ ಹೋಗುತ್ತೇನೆ ಎಂದು

ಶರ್ಮಾ ಸುದ್ದಿಗಾರರಿಗೆ ತಿಳಿಸಿದರು. ಇಲ್ಲಿನ ಸಿವಿಲ್ ಲೈನ್ಸ್ ಪೊಲೀಸ್ ಠಾಣೆಗೆ ತೆರಳಿದ ಮಲಿವಾಲ್, ಮುಖ್ಯಮಂತ್ರಿಗಳ ಅಧಿಕೃತ ನಿವಾಸದಲ್ಲಿ ಕೇಜ್ರಿವಾಲ್ ಅವರ ವೈಯಕ್ತಿಕ ಸಿಬ್ಬಂದಿಯೊಬ್ಬರು ತಮ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿದ್ದರು ಎಂದು ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ಅರವಿಂದ್ ಕೇಜ್ರಿವಾಲ್ ಅವರ ಆಪ್ತ ಕಾರ್ಯದರ್ಶಿ ತನ್ನ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಮಾಜಿ ಡಿಸಿಡಬ್ಲ್ಯೂ ಮುಖ್ಯಸ್ಥೆ ಸ್ವಾತಿ ಮಲಿವಾಲ್ ಆರೋಪಿಸಿದ್ದಾರೆ ಎಂಬ ಮಾಧ್ಯಮಗಳ ವರದಿ ಹಿನ್ನೆಲೆಯಲ್ಲಿ ಆಯೋಗ ಸ್ವಯಂಪೇರಿತ ದೂರು ದಾಖಲಿಸಿಕೊಂಡಿತ್ತು.

ಎಫ್‌ಐಆರ್ ದಾಖಲು

ಪ್ರಕರಣ ಸಂಬಂಧ ಸ್ವಾತಿ ಮಲಿವಾಲ್ ಅವರ ಹೇಳಿಕೆ ಬಳಿಕ ದೆಹಲಿ ಪೊಲೀಸರು ಐಪಿಸಿ 354, 323, 506, 509ರಡಿ ಎಫ್‌ಐಆರ್ ದಾಖಲಿಸಿದ್ದಾರೆ. ಪ್ರಕರಣ ಕುರಿತು ಮಾತನಾಡಿರುವ ಸಂಸದೆ, ಮಲಿವಾಲ್ ಮುಖ್ಯವಲ್ಲ, ದೇಶದ ಸಮಸ್ಯೆಗಳು ಮುಖ್ಯ. ಈ ಘಟನೆಯಲ್ಲಿ ರಾಜಕೀಯ ಮಾಡಬೇಡಿ ಎಂದು ಬಿಜೆಪಿಯವರಿಗೆ ವಿಶೇಷ ವಿನಂತಿ ಎಂದು ಮಲಿವಾಲ್ ಪೋಸ್ಟ್ ಹಾಕಿದ್ದಾರೆ. ದೌರ್ಜನ್ಯ ನಡೆದ ಘಟನೆಯ ಕುರಿತು ಪೊಲೀಸರಿಗೆ ಹೇಳಿಕೆ ನೀಡಿದ್ದೇನೆ. ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದಾರೆ ಎಂದು ತಿಳಿಸಿದ್ದಾರೆ.

ಉದ್ಯೋಗ ಕೊಡಿಸಿದ ಮಹಿಳೆ ವಿರುದ್ಧ ಆರೋಪ

ನ್ಯೂಯಾರ್ಕ್: ಉತ್ತರ ಕೊರಿಯಾ ನಾಗರಿಕರ ಗುರುತು ಮರೆಮಾಚಿ, ಅವರಿಗೆ ಅಮೆರಿಕಾದಲ್ಲಿ ಉದ್ಯೋಗ ದೊರಕಿಸಿಕೊಟ್ಟ ಆರೋಪವನ್ನು ಯುಎಸ್ ಪ್ರಾಸಿಕ್ಯೂಟರ್‌ಗಳು ಸ್ಥಳೀಯ ಮಹಿಳೆಯೊಬ್ಬರ ವಿರುದ್ಧ ಹೊರಿಸಿದ್ದಾರೆ.

ಅಮೆರಿಕಾದ ಅರಿಝೋನಾ ಮೂಲದ ಮಹಿಳೆ ಕ್ರಿಸ್ಟಿನಾ ಚಾಪ್‌ಮನ್ ಎಂಬಾಕೆ ಅಮೆರಿಕಾ ನಾಗರಿಕರ ಗುರುತುಗಳನ್ನು ಕದ್ದು, ನಂತರ ಉತ್ತರ ಕೊರಿಯಾದ ಮೂವರಿಗೆ ಆ ಗುರುತುಗಳನ್ನು ಅಮೆರಿಕಾ ನಾಗರಿಕರಂತೆ ತೋರಿಸಲು ನೆರವಾಗಿದ್ದಾರೆ ಎನ್ನಲಾಗಿದೆ. ಈ ಮೂಲಕ ಅಮೆರಿಕಾದ ಐಟಿ ಕಂಪೆನಿಗಳಲ್ಲಿ ಉತ್ತರ ಕೊರಿಯಾ ನಿವಾಸಿಗಳಿಗೆ ಉದ್ಯೋಗ ದೊರಕಿಸಿಕೊಡಲಾಗಿದೆ. ಅಲ್ಲದೆ ಹೀಗೆ ಉದ್ಯೋಗ ಪಡೆದ ಉತ್ತರ ಕೊರಿಯನ್ನರು ತಮ್ಮ ವೇತನವನ್ನು ಸ್ವದೇಶಕ್ಕೆ ಕಳುಹಿಸಿಕೊಟ್ಟಿದ್ದಾರೆ ಎಂದು ಹೇಳಲಾಗಿದೆ. ಇನ್ನು ಪ್ರಕರಣಕ್ಕೆ ಸಂಬಂಧಿಸಿದಂತೆ ಚಾಪ್‌ಮನ್ ವಿರುದ್ಧ 9 ವಿವಿಧ ಪ್ರಕರಣಗಳನ್ನು ದಾಖ



ಲಿಸಿಕೊಳ್ಳಲಾಗಿದೆ. ಈ ಹಗರಣದ



ರಾಹುಲ್-ಪೂರನ್ ಸ್ಫೋಟಕ ಬ್ಯಾಟಿಂಗ್

ಮುಂಬೈನ ಪ್ರತಿಷ್ಠಿತ ವಾಂಖೆಡೆ ಸ್ಟೇಡಿಯಂನಲ್ಲಿ ನಡೆಯುತ್ತಿರುವ 2024ರ ಇಂಡಿಯನ್ ಪ್ರೀಮಿಯರ್ ಲೀಗ್ 67ನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಎದುರು ಲಕ್ನೋ ಸೂಪರ್ ಜೈಂಟ್ಸ್ ಬೃಹತ್ ರನ್ ಕಲೆ ಹಾಕಿದೆ. ಲಕ್ನೋ ನಾಯಕ ಕೆಎಲ್ ರಾಹುಲ್ ಮತ್ತು ನಿಕೋಲಸ್ ಪೂರನ್ ಭರ್ಜರಿ ಬ್ಯಾಟಿಂಗ್ ಪ್ರದರ್ಶನ ಮಾಡುವ ಮೂಲಕ ಮುಂಬೈ ಬೌಲರ್ಸ್ ಬೆಂಡೆತ್ತಿದರು. ನಿಗದಿತ 20 ಓವರ್‌ಗಳಲ್ಲಿ ಲಕ್ನೋ 6 ವಿಕೆಟ್ ಕಳೆದುಕೊಂಡು 214 ರನ್ ಗಳಿಸಿದೆ. ಮುಂಬೈ ಗೆಲುವಿಗೆ 215 ರನ್‌ಗಳ ಅವಶ್ಯಕತೆ ಇದೆ.

ಮುಂಬೈನ ಪ್ರತಿಷ್ಠಿತ ವಾಂಖೆಡೆ ಸ್ಟೇಡಿಯಂನಲ್ಲಿ ನಡೆಯುತ್ತಿರುವ 2024ರ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್)ನ 67ನೇ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಎದುರು ಲಕ್ನೋ ಸೂಪರ್ ಜೈಂಟ್ಸ್ ಬೃಹತ್ ರನ್ ಕಲೆ ಹಾಕಿದೆ.

ಲಕ್ನೋ ನಾಯಕ ಕೆಎಲ್ ರಾಹುಲ್ ಮತ್ತು ನಿಕೋಲಸ್ ಪೂರನ್ ಭರ್ಜರಿ ಬ್ಯಾಟಿಂಗ್ ಪ್ರದರ್ಶನ ಮಾಡುವ ಮೂಲಕ ಮುಂಬೈ ಬೌಲರ್ಸ್ ಬೆಂಡೆತ್ತಿದರು. ನಿಗದಿತ 20 ಓವರ್‌ಗಳಲ್ಲಿ ಲಕ್ನೋ 6 ವಿಕೆಟ್ ಕಳೆದುಕೊಂಡು 214 ರನ್ ಗಳಿಸಿದೆ. ಮುಂಬೈ ಗೆಲುವಿಗೆ 215 ರನ್‌ಗಳ ಅವಶ್ಯಕತೆ ಇದೆ.

ಆರಂಭಿಕರಾಗಿ ನಾಯಕ ಕೆಎಲ್ ರಾಹುಲ್ ಮತ್ತು ದೇವದತ್ ಪಡಿಕ್ಕಲ್ ಇನ್ನಿಂಗ್ಸ್ ಆರಂಭಿಸಿದರು. ಆದರೆ ಶುರುವಿನಲ್ಲೇ ದೇವದತ್ ಪಡಿಕ್ಕಲ್ ಶೂನ್ಯಕ್ಕೆ ನುವಾನ್ ತುಷಾರ ಬೌಲಿಂಗ್‌ನಲ್ಲಿ ಔಟ್ ಆದರು. ಬಳಿಕ ಮೂರನೇ ಕ್ರಮಾಂಕದಲ್ಲಿ ಬಂದ ಮಾರ್ಕಸ್ ಸ್ಟೋನಿಸ್ ಜೊತೆಗೂಡಿದ ಕೆಎಲ್ ರಾಹುಲ್ ನಿಧಾನವಾಗಿ ರನ್ ಗಳಿಸಿದರು.

ಅದ್ಭುತವಾಗಿ ಆಡುತ್ತಿದ ಮಾರ್ಕಸ್ ಸ್ಟೋನಿಸ್ (28) ಅವರನ್ನು ಪಿಯೂಷ್ ಚಾವ್ಲಾ ಔಟ್ ಮಾಡಿದರು. ನಾಲ್ಕನೇ ಕ್ರಮಾಂಕದಲ್ಲಿ ಆಗಮಿಸಿದ ದೀಪಕ್ ಹೂಡ ಸಹಾ ಹೇಳಿಕೊಳ್ಳುವಂತ ಪ್ರದರ್ಶನ ನೀಡಲಿಲ್ಲ. ಪಿಯೂಷ್ ಚಾವ್ಲಾ ಅವರ ಬೌಲಿಂಗ್‌ನಲ್ಲಿ ದೀಪಕ್ ಹೂಡ (11) ವಿಕೆಟ್ ಕಳೆದುಕೊಂಡರು. ಈ ವೇಳೆ ಕ್ರೀಸ್‌ಗೆ ಬಂದ ನಿಕೋಲಸ್ ಪೂರನ್ ಮತ್ತು ಕೆಎಲ್ ರಾಹುಲ್ ಅದ್ಭುತ ಇನ್ನಿಂಗ್ಸ್ ಆಡಿದರು. ಲಕ್ನೋ-ಮುಂಬೈಗೆ ಕೊನೆಯ ಪಂದ್ಯ; ಟಾಸ್, ಆಡುವ 11ರ ಬಳಗ ವರದಿ ಮುಂಬೈ ಬೌಲಿಂಗ್ ದಾಳಿಯನ್ನು ದಿಟ್ಟವಾಗಿ ಎದುರಿಸುವಲ್ಲಿ ನಿಕೋಲಸ್ ಪೂರನ್ ಯಶಸ್ವಿಯಾದರು.

ಅಬ್ಬರದ ಬ್ಯಾಟಿಂಗ್ ಮಾಡಿದ ಪೂರನ್ ಕೇವಲ 29 ಎಸೆತಗಳಲ್ಲಿ 8 ಸಿಕ್ಸರ್ ಮತ್ತು 5 ಬೌಂಡರಿ ನೆರವಿನಿಂದ 75 ರನ್ ಬಾರಿಸಿ ಮಿಂಚಿದರು. ಮತ್ತೊಂದೆಡೆ ಕೆಎಲ್ ರಾಹುಲ್ ಕೂಡ ಅರ್ಧಶತಕ ಸಿಡಿಸಿದರು. ಕೆಎಲ್ ರಾಹುಲ್ ಎದುರಿಸಿ 41 ಎಸೆತಗಳಲ್ಲಿ 3 ಸಿಕ್ಸರ್ ಹಾಗು 3 ಬೌಂಡರಿ ಮೂಲಕ 55 ರನ್ ಹೊಡೆದರು. ಬಿರುಸಿನ ಬ್ಯಾಟಿಂಗ್ ಮಾಡುತ್ತಿದ್ದ ಪೂರನ್ ಅವರು ನುವಾನ್ ತುಷಾರ ಬೌಲಿಂಗ್‌ನಲ್ಲಿ ವಿಕೆಟ್ ಕಳೆದುಕೊಂಡರೆ, ಅರ್ಷದ್ ಖಾನ್ ಸಹಾ ಯಾವುದೇ ರನ್ ಗಳಿಸದೆ ಔಟ್ ಆದರು. ಪಿಯೂಷ್ ಚಾವ್ಲಾ ಅವರಿಗೆ ಕೆಎಲ್ ರಾಹುಲ್ ವಿಕೆಟ್ ಒಪ್ಪಿಸಿದರು. ಕೊನೆಯಲ್ಲಿ ಆಯುಷ್ ಬಡೋನಿ (22) ಮತ್ತು ಕೃನಾಲ್ ಪಾಂಡ್ಯ (11) ಅಜೇಯರಾಗುಳಿದರು.

ಮೈದಾನದಲ್ಲಿಯೇ ರೊಚ್ಚಿಗೆದ್ದ ಅರ್ಜುನ್

ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ಮುಂಬೈ ಇಂಡಿಯನ್ಸ್ ಮತ್ತು ಲಕ್ನೋ ಸೂಪರ್ ಜೈಂಟ್ಸ್ ನಡುವೆ ಪಂದ್ಯ ನಡೆಯಿತು. ಈ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ಟಾಸ್ ಗೆದ್ದು ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿದರೆ, ಲಕ್ನೋ ಸೂಪರ್ ಜೈಂಟ್ಸ್ ಮೊದಲು ಬ್ಯಾಟಿಂಗ್ ಮಾಡುವ ಸವಾಲನ್ನು ಎದುರಿಸಿತು. ಹಾರ್ದಿಕ್ ಪಾಂಡ್ಯ ಈ ಬಾರಿ ಅರ್ಜುನ್ ತೆಂಡೂಲ್ಕರ್ ಮತ್ತು ಡೆವಾಲ್ಡ್ ಬ್ರೆವಿಸ್ ಅವರಿಗೆ ಪ್ಲೇಯಿಂಗ್ 11ನಲ್ಲಿ ಅವಕಾಶ ನೀಡಿದರು. ಬುಮ್ರಾ, ಟಿಮ್ ಡೇವಿಡ್ ಮತ್ತು ತಿಲಕ್ ವರ್ಮಾ ಅವರಿಗೆ ವಿಶ್ರಾಂತಿ ನೀಡಿದರು.



ಅರ್ಜುನ್ ತೆಂಡೂಲ್ಕರ್ ಕಳೆದ ವರ್ಷ ಐಪಿಎಲ್‌ಗೆ ಪಾದಾರ್ಪಣೆ ಮಾಡಿದರು, ಆದರೆ ಐಪಿಎಲ್ 2024ರಲ್ಲಿ ಲಕ್ನೋ ವಿರುದ್ಧದ ಪಂದ್ಯವನ್ನು ಹೊರತುಪಡಿಸಿ ಯಾವುದೇ ಪಂದ್ಯಗಳಲ್ಲಿ ಆಡುವ ಅವರಿಗೆ ಅವಕಾಶ ನೀಡಲಿಲ್ಲ.

ಆದರೆ ಲಕ್ನೋ ವಿರುದ್ಧ ಅರ್ಜುನ್ ತೆಂಡೂಲ್ಕರ್ ಕೇವಲ 2.2 ಓವರ್ ಬೌಲ್ ಮಾಡಿದರು. ಈ ವೇಳೆ ಅವರು ಒಂದೇ ಒಂದು ವಿಕೆಟ್ ಪಡೆಯದೆ 22 ರನ್ ನೀಡಿದರು. ಈ ಬಾರಿ ಅರ್ಜುನ್ ತೆಂಡೂಲ್ಕರ್ ಬೌಲಿಂಗ್ ಮಾಡಲು ಬಂದಾಗ ಲಕ್ನೋ ಬ್ಯಾಟ್ಸ್‌ಮನ್ ಮಾರ್ಕ್ ಸ್ಟೋನಿಸ್ ಸ್ಟ್ರೈಕ್‌ನಲ್ಲಿದ್ದರು. ಈ ವೇಳೆ ಸ್ಟೊಯಿನಿಸ್ ಶಾಟ್ ಮಾಡಿದ ತಕ್ಷಣ ಚೆಂಡು ಅರ್ಜುನ್ ತೆಂಡೂಲ್ಕರ್ ಸಮೀಪಕ್ಕೆ ಬಿದ್ದಿತು.

ಸ್ಟೊಯಿನಿಸ್ ಸ್ಟ್ರೈಕ್ ಬಿಟ್ಟು ರನ್ ಗಳಿಸಲು ಓಡದಂತೆ, ಅರ್ಜುನ್ ತೆಂಡೂಲ್ಕರ್ ಚೆಂಡನ್ನು ಕೈಯಲ್ಲಿ ತೆಗೆದುಕೊಂಡು ಆಕ್ರಮಣಕಾರಿಯಾಗಿ ಸ್ಟೊಯಿನಿಸ್ ಕಡೆಗೆ ಎಸೆಯುವಂತೆ ಸೂಚಿಸಿದರು. ಹಾಗಾಗಿ ಸ್ಟೊಯಿನಿಸ್ ರನ್ ತೆಗೆದುಕೊಳ್ಳಲಿಲ್ಲ. ಅರ್ಜುನ್ ತೆಂಡೂಲ್ಕರ್ ಶಾಂತ ರೂಪದಲ್ಲಿ ಈವರೆಗೆ ಎಲ್ಲರೂ ನೋಡಿದ್ದರು. ಆದರೆ ಇಂದು ಮೊದಲ ಬಾರಿಗೆ ಅರ್ಜುನ್ ಮೈದಾನದಲ್ಲಿ ಸಿಟ್ಟಾಗಿದ್ದರು. ಹೀಗಾಗಿ ಅವರ ಈ ವೀಡಿಯೋ ಸಾಮಾಜಿಕ ಮಾಧ್ಯಮದಲ್ಲಿ ಸಖತ್ ವೈರಲ್ ಆಗುತ್ತಿದೆ.

ಗಂಭೀರ್ ಟೀಮ್ ಇಂಡಿಯಾದ ಮುಂದಿನ ಕೋಚ್

ಆಯ್ಕೆ ನಿಟ್ಟಿನಲ್ಲಿ ಬಿಸಿಸಿಐ ಯೋಜನೆ

ಬೆಂಗಳೂರು: ಟೀಂ ಇಂಡಿಯಾದ ಮಾಜಿ ಆರಂಭಿಕ ಬ್ಯಾಟರ್ ಗೌತಮ್ ಗಂಭೀರ್ ಇಂಡಿಯಾದ ಮುಂದಿನ ಮುಖ್ಯ ಕೋಚ್ ಆಗುವುದು ಬಹುತೇಕ ಖಚಿತವಾಗಿದೆ. ಬಿಸಿಸಿಐ ಪ್ರಸ್ತುತ ರಾಹುಲ್ ದ್ರಾವಿಡ್ ಅವರ ಬದಲಿ ಆಟಗಾರನನ್ನು ಹುಡುಕುತ್ತಿದೆ. ಈಗಾಗಲೇ ಕೋಚ್ ಹುದ್ದೆಗೆ ಅರ್ಜಿಗಳನ್ನು ಆಹ್ವಾನಿಸಿದೆ.

ಅವರಲ್ಲಿ ಗೌತಮ್ ಗಂಭೀರ್ ಅವರನ್ನು ಆಯ್ಕೆ ಮಾಡುವ ನಿಟ್ಟಿನಲ್ಲಿ ಬಿಸಿಸಿಐ ಯೋಜನೆ ರೂಪಿಸಿದೆ. ಮುಂದಿನ ತಿಂಗಳು ಟಿ 20 ವಿಶ್ವಕಪ್ ಮುಗಿದ ನಂತರ ದ್ರಾವಿಡ್ ಅವರ ಅಧಿಕಾರಾವಧಿ ಕೊನೆಗೊಳ್ಳಲಿದೆ. ಈ ಬಾರಿ ವಿಸ್ತರಣೆ ಅವಧಿ ಸ್ವೀಕರಿಸದಿರಲು ಭಾರತದ ಮಾಜಿ ನಾಯಕ ನಿರ್ಧರಿಸಿದ್ದಾರೆ. ಅವರ ಮೂಲ ಒಪ್ಪಂದವು ಏಕದಿನ ವಿಶ್ವಕಪ್ ನಂತರ ಕಳೆದ ವರ್ಷವೇ ಕೊನೆಗೊಂಡಿತ್ತು ಆದರೆ ಟಿ 20 ವಿಶ್ವಕಪ್‌ವರೆಗೆ ಕೋಚ್ ಆಗಿ ಮುಂದುವರಿಯಲು ಬಿಸಿಸಿಐ ಅವರನ್ನು ಮನವೊಲಿಸುವಲ್ಲಿ ಯಶಸ್ವಿಯಾಗಿತ್ತು.

ಅಂತಿಮವಾಗಿ ದ್ರಾವಿಡ್ ಅವರ ಸ್ಥಾನವನ್ನು ಯಾರು ತುಂಬುತ್ತಾರೆ ಎಂಬುದರ ಬಗ್ಗೆ ಇನ್ನೂ ಸ್ಪಷ್ಟತೆ ಇಲ್ಲ. ಆದರೆ ಗೌತಮ್ ಗಂಭೀರ್ ಅವರನ್ನು ಬದಲಿಯಾಗಿ ಬಿಸಿಸಿಐ ಬಯಸಿದೆ ಎಂದು ಇಎಸ್‌ಪಿಎನ್ ಕ್ರಿಂಫೋ ವರದಿ ಮಾಡಿದೆ. ಮಾಜಿ ಬ್ಯಾಟರ್ ಬಿಸಿಸಿಐನ ವಿಶ್ ಲಿಸ್ಟ್‌ನಲ್ಲಿ ಅಗ್ರಸ್ಥಾನದಲ್ಲಿದ್ದಾರೆ ಎಂದು ವರದಿ ತಿಳಿಸಿದೆ. ವರದಿಯ ಪ್ರಕಾರ, ಬಿಸಿಸಿಐ ಈಗಾಗಲೇ ಗೌತಮ್ ಗಂಭೀರ್ ಅವರನ್ನು ಸಂಪರ್ಕಿಸಿದೆ. ಪ್ರಸ್ತುತ ನಡೆಯುತ್ತಿರುವ ಐಪಿಎಲ್ 2024 ರಲ್ಲಿ ಕೋಲ್ಕತಾ ನೈಟ್ ರೈಡರ್ಸ್ನ ಅಭಿಯಾನವು ಕೊನೆಗೊಂಡ ನಂತರ ಈ ವಿಷಯದ ಬಗ್ಗೆ ಹೆಚ್ಚಿನ ಚರ್ಚೆ ನಡೆಯುವ ನಿರೀಕ್ಷೆಯಿದೆ. ವಿಶ್ವಕಪ್ ವಿಜೇತ ಆಟಗಾರ ಪ್ರಸ್ತುತ ಕೋಲ್ಕತಾದ ಮಾರ್ಗದರ್ಶಕರಾಗಿ ತಮ್ಮ ವೃತ್ತಿಯನ್ನು ನಡೆಸುತ್ತಿದ್ದಾರೆ. ಐಪಿಎಲ್ ಫೈನಲ್ ಪಂದ್ಯದ ಬಳಿಕ ಮೇ 27ರಂದು ಭಾರತ ತಂಡದ ಮುಖ್ಯ ಕೋಚ್ ಹುದ್ದೆಗೆ ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಗೌತಮ್ ಗಂಭೀರ್ ಅವರು ಅಂತಾರಾಷ್ಟ್ರೀಯ ಅಥವಾ ರಾಜ್ಯ ತಂಡಕ್ಕೆ ತರಬೇತುದಾರರಾಗಿ ತಮ್ಮ ವೃತ್ತಿಜೀವನವನ್ನು ಇನ್ನೂ ನಡೆಸಿಲ್ಲ. ಆದಾಗ್ಯೂ, ಮಾಜಿ ಕ್ರಿಕೆಟಿಗ ಕಳೆದ ಮೂರು ಋತುಗಳಲ್ಲಿ ಐಪಿಎಲ್ ಫ್ರಾಂಚೈಸಿಗಳೊಂದಿಗೆ ತರಬೇತುದಾರರಾಗಿ ಸಂಬಂಧ ಹೊಂದಿದ್ದರು. 2022 ಮತ್ತು 2023ರಲ್ಲಿ ಲಕ್ನೋ ಸೂಪರ್ ಜೈಂಟ್ಸ್ ತಂಡದ ಮೆಂಟರ್ ಆಗಿದ್ದರು. ಅವರ ಅಧಿಕಾರಾವಧಿಯಲ್ಲಿ, ಎಸ್‌ಜಿ ಎರಡೂ ಋತುಗಳಲ್ಲಿ ಪ್ಲೇಆಫ್‌ಗೆ ಅರ್ಹತೆ ಪಡೆಯಿತು. ಪ್ರಸಕ್ತ ಋತುವಿನಲ್ಲಿ, ಅವರು ಕೆಕೆಆರ್ ಸೇರಲು ನಿರ್ಧರಿಸಿದರು ಮತ್ತು ತಕ್ಷಣದ ಪರಿಣಾಮ ಬೀರಿದ್ದಾರೆ. ಕೆಕೆಆರ್ ತನ್ನ ಇತಿಹಾಸದಲ್ಲಿ ಮೊದಲ ಬಾರಿಗೆ ಪಾಯಿಂಟ್ಸ್ ಟೇಬಲ್ನಲ್ಲಿ ಅಗ್ರಸ್ಥಾನವನ್ನು ಪಡೆದ ನಂತರ ಪ್ಲೇಆಫ್ಗೆ ಅರ್ಹತೆ ಪಡೆದಿದೆ. ಗೌತಮ್ ಗಂಭೀರ್ ದೊಡ್ಡ ಸಂದರ್ಭಗಳಲ್ಲಿ ಪ್ರದರ್ಶನ ನೀಡುವ ಖ್ಯಾತಿಯನ್ನು ಹೊಂದಿದ್ದಾರೆ. 2007ರ ಟಿ20 ವಿಶ್ವಕಪ್ ಫೈನಲ್ ಹಾಗೂ 2011ರ ವಿಶ್ವಕಪ್ ಫೈನಲ್ನಲ್ಲಿ ಭಾರತದ ಪರ ಅತಿ ಹೆಚ್ಚು ರನ್ ಗಳಿಸಿದ ಆಟಗಾರ ಎನಿಸಿಕೊಂಡಿದ್ದರು. ಐಪಿಎಲ್‌ನಲ್ಲಿ ಗಂಭೀರ್ 2012 ರಲ್ಲಿ ಕೆಕೆಆರ್ ತಂಡವನ್ನು ಚೊಚ್ಚಲ ಪ್ರಶಸ್ತಿಗೆ ಮುನ್ನಡೆಸಿದರು ಮತ್ತು 2014 ರಲ್ಲಿ ಮತ್ತೊಂದು ಪ್ರಶಸ್ತಿಗೆ ಮಾರ್ಗದರ್ಶನ ನೀಡಿದರು. 2014ರಲ್ಲಿ ಕೆಕೆಆರ್ ಚಾಂಪಿಯನ್ಸ್ ಲೀಗ್ ಟಿ20 ಟೂರ್ನಿಯ ಫೈನಲ್‌ಗೆ ಅರ್ಹತೆ ಪಡೆದಿತ್ತು.

ಕಹಿ ನೆನಪು; ಬುರ್ಖಾ ಧರಿಸದ ಪತ್ನಿ ಜತೆ ಫೋಟೋ ತೆಗಿಸಿಕೊಳ್ಳಲು ಒಪ್ಪದ ಪಠಾಣ್

ಬೆಂಗಳೂರು: ಭಾರತ ಕ್ರಿಕೆಟ್ ತಂಡದ ಮಾಜಿ ಆಟಗಾರ ಮತ್ತು ಸ್ವಿಂಗ್ ಬೌಲರ್ ಇರ್ಫಾನ್ ಪಠಾಣ್ ತಮ್ಮ ಪತ್ನಿ ಸಫಾ ಬೇಗ್ ಅವರೊಂದಿಗೆ ಮುಂಬೈನ ಬಾಂದ್ರಾದಲ್ಲಿ ಕಾಣಿಸಿಕೊಂಡಿದ್ದರು. ಆದಾಗ್ಯೂ ಅವರು ಪರ್ದಾ (ಬುರ್ಖಾ) ಇಲ್ಲದೆ ಅವರೊಂದಗೆ ಫೋಟೋಗಳನ್ನು ತೆಗೆದುಕೊಳ್ಳಲು ಇರ್ಫಾನ್ ಪಠಾಣ್ ಪಾಪರಾಜಿಗಳಿಗೆ (ಫೋಟೊಗ್ರಾಫರ್‌ಗಳಿಗೆ) ನಿರಾಕರಿಸಿದ ಪ್ರಸಂಗ ನಡೆಯಿತು. ಸಾಮಾನ್ಯವಾಗಿ ಪಠಾಣ್ ಪತ್ನಿ ಸಫಾ ಬುರ್ಖಾ ಧರಿಸಿಕೊಂಡಿರುತ್ತಾರೆ. ಆದರೆ ಈ ಬಾರಿ ಕರಿ ವರ್ಣದ ಬಟ್ಟೆಯಲ್ಲಿದ್ದರು. ಹಿಂದೊಮ್ಮೆ ಅವರು ಮುಖವನ್ನು ಮುಚ್ಚದೆ ಸಾರ್ವಜನಿಕವಾಗಿ ಕಾಣಿಸಿಕೊಂಡ ಬಳಿಕ ಆನ್ ಲೈನ್ ನಲ್ಲಿ ಟೀಕೆ ಮತ್ತು ಟ್ರೋಲ್ ಗಳನ್ನು ಎದುರಿಸಬೇಕಾಯಿತು.

ಫೆಬ್ರವರಿ 2024ರಲ್ಲಿ, ದಂಪತಿ ತಮ್ಮ 8ನೇ ವಿವಾಹ ವಾರ್ಷಿಕೋತ್ಸವ ಆಚರಿಸಿದ್ದರು. ಆ ಸಮಯದಲ್ಲಿ ಇರ್ಫಾನ್ ಪಠಾಣ್ ತಮ್ಮ ಹೆಂಡತಿಯ ಮುಖವನ್ನು ಮೊದಲ ಬಾರಿಗೆ ಅನಾವರಣಗೊಳಿಸಿದ್ದರು. ಈ ಕ್ರಮವು ಸಾಮಾಜಿಕ ಮಾಧ್ಯಮದಲ್ಲಿ ಕೆಲವು ವ್ಯಕ್ತಿಗಳಿಂದ ಗಮನಾರ್ಹ ಟೀಕೆಗೆ ಗುರಿಯಾಯಿತು.

ಕೆಲವರು ಅವರನ್ನು ಅನಗತ್ಯವಾಗಿ ಟೀಕೆ ಮಾಡಿದ್ದರು. ಕೆಲವು ವರ್ಷಗಳ ಹಿಂದೆ ಇರ್ಫಾನ್ ಪಠಾಣ್ ತಮ್ಮ ಪತ್ನಿ ಸಫಾ ಬೇಗ್ ಅವರ ಮುಖವನ್ನು ತೋರಿಸದೇ ಇದ್ದಿದ್ದಕ್ಕೆ ಟ್ರೋಲ್ ಎದುರಿಸಿದ್ದರು. ಆದಾಗ್ಯೂ, ಸಫಾ ಬೇಗ್ ತನ್ನ ಪತಿಯನ್ನು ಬೆಂಬಲಿಸಿದ್ದರು. ಅವೆಲ್ಲವೂ ನಮ್ಮ ಆಯ್ಕೆ ಎಂದು ಹೇಳಿದ್ದರು.

ಫೋಟೋ ಭಯ: ಇರ್ಫಾನ್ ಪಠಾಣ್ ತಮ್ಮ ಪತ್ನಿ ಸಫಾ ಮತ್ತು ಮಗನೊಂದಿಗೆ ಬಾಂದ್ರಾದ ಕೆಫೆಯಲ್ಲಿ ವಿಹಾರಿಸುತ್ತಿದ್ದರು. ಪಾಪರಾಜಿಗಳ ಗುಂಪು ಪಠಾಣ್ ಅವರನ್ನು ಹಿಂಬಾಲಿಸಿ ಅವರ ಕುಟುಂಬದ ಫೋಟೋಗಳನ್ನು ತೆಗೆದುಕೊಳ್ಳಲು ಪ್ರಯತ್ನಿಸಿತು. ಆದರೆ ಸಫಾ ಅವರಿಂದ ಆತುರದಿಂದ ಹೊರಟುಹೋದರು. ಇದರಿಂದ ಸಿಟ್ಟಿಗೆದ್ದ ಇರ್ಫಾನ್ ಪಠಾಣ್ ತಮ್ಮ ಪತ್ನಿಯ ಫೋಟೋ ತೆಗೆಯದಂತೆ ಪಾಪರಾಜಿಗಳಿಗೆ ಮನವಿ ಮಾಡಿದರು.

ಪಠಾಣ್ ಪತ್ನಿ ಸಫಾ ಬುರ್ಖಾ

ಇರ್ಫಾನ್ ಪಠಾಣ್ ವೃತ್ತಿಜೀವನ : ಕ್ರಿಕೆಟ್‌ನಿಂದ ನಿವೃತ್ತಿಯಾದ ನಂತರ, ಬಹು-ಪ್ರತಿಭಾವಂತ ಇರ್ಫಾನ್ ಪಠಾಣ್ ವಿವಿಧ ಅನ್ವೇಷಣೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಅವರು ಆಟದ ಬಗ್ಗೆ ಆಳವಾದ ತಿಳುವಳಿಕೆಯೊಂದಿಗೆ ಕ್ರಿಕೆಟ್ ವಿಶ್ಲೇಷಕ ಮತ್ತು ವೀಕ್ಷಕ ವಿವರಣೆಗಾರರಾಗಿ ತಮ್ಮನ್ನು ತಾವು ಗುರುತಿಸಿಕೊಂಡಿದ್ದಾರೆ.

ಉದಯೋನ್ಮುಖ ಕ್ರಿಕೆಟ್ ಪ್ರತಿಭೆಗಳನ್ನು ಪೋಷಿಸುವ ಗುರಿಯೊಂದಿಗೆ ಅವರು ತಮ್ಮ ಸಹೋದರನೊಂದಿಗೆ ಕ್ರಿಕೆಟ್ ಅಕಾಡೆಮಿ ಆಫ್ ಪಠಾಣ್ಸ್ ಅನ್ನು ಸ್ಥಾಪಿಸಿದ್ದಾರೆ. ವಿಶೇಷವೆಂದರೆ 2015 ರಲ್ಲಿ, ಅವರು ನೃತ್ಯ ರಿಯಾಲಿಟಿ ಶೋನಲ್ಲಿ ಭಾಗವಹಿಸುವ ಮೂಲಕ ತಮ್ಮ ಪ್ರತಿಭೆಯ ಮತ್ತೊಂದು ಮುಖವನ್ನು ಪ್ರದರ್ಶಿಸಿದ್ದರು.

ತೀರಾ ಇತ್ತೀಚೆಗೆ ಅವರು ಬಹರಾಂಪುರ ಕ್ಷೇತ್ರದಲ್ಲಿ ಪ್ರಚಾರ ನಡೆಸಿದ್ದರು. ಲೋಕಸಭಾ ಚುನಾವಣೆಗೆ ಅಭ್ಯರ್ಥಿಯಾಗಿ ಸ್ಪರ್ಧಿಸುತ್ತಿರುವ ತಮ್ಮ ಸಹೋದರ ಯೂಸುಫ್ ಪಠಾಣ್ ಅವರನ್ನು ಬೆಂಬಲಿಸಿ ಮತಯಾಚಿಸಿದರು.

ಮದುವೆಗೆ ತಯಾರಿ

ಕನ್ನಡ ನಿರ್ಮಾಪಕನ ಜೊತೆ ಅನುಷ್ಕಾ ಶೆಟ್ಟಿ ಮದುವೆ..?

ನಟಿ ಅನುಷ್ಕಾ ಶೆಟ್ಟಿ ಅಭಿಮಾನಿಗಳಿಗೆ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಕನ್ನಡ ನಿರ್ಮಾಪಕನ ಜೊತೆ ಅನುಷ್ಕಾ ಶೆಟ್ಟಿ ಹಸೆಮಣೆ ಏರೋದಕ್ಕೆ ಸಜ್ಜಾಗಿದ್ದಾರೆ ಎಂಬ ಸುದ್ದಿ ಹರಿದಾಡುತ್ತಿದೆ. ಸ್ವೀಟಿ ಮದುವೆ ಮ್ಯಾಟರ್ ಕೇಳಿ ಫ್ಯಾನ್ಸ್ ಖುಷಿಪಡುತ್ತಿದ್ದಾರೆ. ಕನ್ನಡದ ದೊಡ್ಡ ನಿರ್ಮಾಪಕನೊಂದಿಗೆ ವೈವಾಹಿಕ ಜೀವನಕ್ಕೆ ಕಾಲಿಡಲಿದ್ದಾರಂತೆ. ಎರಡೂ ಕುಟುಂಬಗಳು ಇದಕ್ಕೆ ಒಪ್ಪಿಗೆ ಸೂಚಿಸಿದ್ದಾರೆ ಎನ್ನಲಾಗಿದೆ. ಆ ನಿರ್ಮಾಪಕನಿಗೂ 42 ವರ್ಷ ಎನ್ನಲಾಗಿದೆ. ಇನ್ನೂ ನಟಿ ಮದುವೆಯಾಗುವ ವರನ ಬಗ್ಗೆ ಮಾಹಿತಿ ಹೊರಬೀಳಬೇಕಿದೆ. ಇದನ್ನೂ ಅನುಷ್ಕಾ ಮದುವೆಗೆ ತಯಾರಿ ಶುರುವಾಗಿದೆ ಎನ್ನಲಾಗಿದೆ. ಸದ್ಯದಲ್ಲೇ ಮದುವೆ ಸುದ್ದಿ ಬಗ್ಗೆ ಅನುಷ್ಕಾ ಕುಟುಂಬ ಅಧಿಕೃತ ಮಾಹಿತಿ ನೀಡಲಿದ್ದಾರೆ ಎನ್ನಲಾಗಿದೆ. ಅಲ್ಲಿಯವರೆಗೂ ಕಾದುನೋಡಬೇಕಿದೆ. ಅನುಷ್ಕಾ ಶೆಟ್ಟಿ ಕನ್ನಡದ ನಟಿಯೇ ಆಗಿದ್ದರೂ, ತೆಲುಗು ಸಿನಿಮಾಗಳಿಂದ ವೃತ್ತಿ ಬದುಕನ್ನು ಆರಂಭಿಸಿದ್ದರು. ಅಕ್ಕಿನೇನಿ ನಾಗಾರ್ಜುನ ನಟಿಸಿದ್ದ ಸೂಪರ್ ಸಿನಿಮಾ ಮೂಲಕ ತೆಲುಗಿಗೆ ಅದ್ಧೂರಿಯಾಗಿ ಎಂಟ್ರಿ ಕೊಟ್ಟಿದ್ದರು. ಅರುಂಧತಿ, ಬಾಹುಬಲಿ ಅಂತಹ ಸಿನಿಮಾ ಅನುಷ್ಕಾ ಶೆಟ್ಟಿ ವೃತ್ತಿ ಬದುಕಿಗೆ ಹೊಸ ತಿರುವನ್ನು ಕೊಟ್ಟಿತ್ತು. ಅದರಲ್ಲೂ ಬಾಹುಬಲಿ ಸಿನಿಮಾ ಜಗತ್ತಿನಾದ್ಯಂತ ಸದ್ದು ಮಾಡಿತ್ತು.

ಸಿನಿಮಾ ಹೊಸ ರೀತಿಯ ಪ್ರಚಾರ

ಚಾಲೆಂಜಿಂಗ್ ಸ್ಟಾರ್ ದರ್ಶನ್ ನಟನೆಯ ಡೆವಿಲ್ ಸಿನಿಮಾಗೆ ನಾಯಕಿಯ ಆಯ್ಕೆಯಾಗಿದೆ. ವಾಮನ ಸೇರಿದಂತೆ ಕೆಲವು ಚಿತ್ರಗಳಲ್ಲಿ ನಟಿಸಿರುವ ತುಳುನಾಡ ಕುವರಿ ರಚನಾ ರೈ ಅವರು ಡೆವಿಲ್ ಚಿತ್ರಕ್ಕೆ ನಾಯಕಿಯಾಗಿ ಆಯ್ಕೆಯಾಗಿದ್ದಾರೆ. ಈ ಹಿಂದೆ ಇವರು ಶಂಕರ್ ರಾಮನ್ ನಿರ್ದೇಶನದಲ್ಲಿ ಮೂಡಿ ಬಂದ ವಾಮನ ಸಿನಿಮಾಗೆ ನಾಯಕಿಯಾಗಿದ್ದರು. ಈ ಹಿಂದೆ ತುಳು ಸಿನಿಮಾವೊಂದರಲ್ಲಿ ನಟಿಸಿದ್